ಸಂಪುಟ: 05 ಸಂಚಿಕೆ: 313 ಪುಟಗಳು: 08 ಸೋಮವಾರ 26 ಜನವರಿ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 +91 8035841833 9448225696 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಕರ್ನಾಟಕದ 7 ಮಂದಿಗೆ ಪದ್ಮಶ್ರೀ, ಒಬ್ಬರಿಗೆ ಪದ್ಮಭೂಷಣ ಗೌರವ!

• ಉದಯವಾಹಿನಿ, ಬೆಂಗಳೂರು

2026ನೇ ಸಾಲಿನ ಪದ್ಮ ಪ್ರಶಸ್ತಿ ಪ್ರಕಟವಾಗಿದ್ದು, 131 ಮಂದಿ ಪದ್ಮ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಕರ್ನಾಟಕದ 8 ಮಂದಿಯು ಈ ನಾಗರಿಕ ಗೌರವಕ್ಕೆ ಪಾತ್ರವಾಗುತ್ತಿದ್ದಾರೆ.

ಮಂಡ್ಯ ಮೂಲದ ಪುಸ್ತಕ ಪ್ರೇಮಿ ಅಂಕೇಗೌಡ, ದಾವಣಗೆರೆಯ ಹಿಮೋಫಿಲಿಯಾ ಸೊಸೈಟಿ, ಜೆಜೆಎಂ ವೈದ್ಯಕೀಯ ಕಾಲೇಜು ಪ್ರಾಧ್ಯಾಪಕ ವೈದ್ಯ ಡಾ ಸುರೇಶ್ ಹನಗವಾಡಿ ಹಾಗೂ ಬೆಂಗಳೂರಿನಲ್ಲಿ ಸುಮಂಗಲಿ ಸೇವಾ ಆಶ್ರಮ ಸ್ಥಾಪಿಸಿ ಮಹಿಳಾ ಸಬಲೀಕರಣ, ಶಿಶು ಸಂರಕ್ಷಣೆ ಮತ್ತು ಗ್ರಾಮೀಣಾಭಿವೃದ್ಧಿಗಾಗಿ ದಶಕಗಳಿಂದ ಶ್ರಮಿಸುತ್ತಿರುವ ಸಮಾಜ ಸೇವಕಿ ಎಸ್‌ಜಿ ಸುಶೀಲಮ್ಮ, ಶಿಕ್ಷಣ



ಕ್ಷೇತ್ರದ ಸಾಧನೆಗೆ ಬೆಳಗಾವಿಯ ಡಾ.ಪ್ರಭಾಕರ್ ಕೋರೆ, ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದ ಸಾಧನೆಗೆ ಶಶಿಶೇಖರ ವೆಂಪತಿ, ವಿಜ್ಞಾನ ತಂತ್ರಜ್ಞಾನ ಕ್ಷೇತ್ರದ ಶುಭಾ ವೆಂಕಟೇಶ್ ಅಯ್ಯಂಗಾರ್, ಉದ್ಯಮ ಮತ್ತು ವ್ಯಾಪಾರ ಕ್ಷೇತ್ರದ ಸಾಧ್ಯನೆಗೆ (ಮರಣೋತ್ತರ) ಟಿಟಿ ಜಗನ್ನಾಥ್ ಅವರಿಗೆ ಪದ್ಮಶ್ರೀ ಪ್ರಶಸ್ತಿ ಲಭ್ಯಸಿದೆ. ಕಲಾ ಕ್ಷೇತ್ರದ ಸಾಧನೆಗೆ ಶತಾವಧಾನಿ ಆರ್ ಗಣೇಶ್ ಪದ್ಮಭೂಷಣ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಈ ವರ್ಷದ ಪದ್ಮ ಪ್ರಶಸ್ತಿಗೆ ಕೇಂದ್ರ ಸರ್ಕಾರವು ಭಾರತದ ಉದ್ದಗಲಕ್ಕೂ ಇರುವ ವಿವಿಧ ರೀತಿಯ ಪ್ರಚಾರವಿಲ್ಲದ ಸಾಧಕರನ್ನು ಗುರುತಿಸಿದೆ. ಇವರಲ್ಲಿ ಹಿಂದುಳಿದ ಮತ್ತು ದಲಿತ ಸಮುದಾಯಗಳು, ಪ್ರಾಚೀನ ಬುಡಕಟ್ಟು ಜನಾಂಗದವರು ಮತ್ತು ದೂರದ ಮತ್ತು ಕಷ್ಟಕರ ಪ್ರದೇಶಗಳಿಂದ ಬಂದವರು ಸೇರಿದ್ದಾರೆ.

ಆರೋಗ್ಯ, ರಕ್ಷಣೆ, ಶಿಕ್ಷಣ, ಜೀವನೋಪಾಯ, ನೈರ್ಮಲ್ಯ, ಸುಸ್ಥಿರತೆ ಇತ್ಯಾದಿಗಳನ್ನು ಉತ್ತೇಜಿಸುವಲ್ಲಿ ಕೆಲಸ ಮಾಡುವರು, ದಿವ್ಯಾಂಗರು, ಮಹಿಳೆಯರು, ಮಕ್ಕಳು, ದಲಿತರು ಮತ್ತು ಬುಡಕಟ್ಟು ಜನಾಂಗದವರ ಸೇವೆಗಾಗಿ ತಮ್ಮ ಇಡೀ ಜೀವನವನ್ನು ಮುಡಿಪಾಗಿಟ್ಟವರು ಇದ್ದಾರೆ.

| 2026 ಪದ್ಮ ಪ್ರಶಸ್ತಿ ಪಡೆದ 8 ಕನ್ನಡಿಗರು | |
|---|---|
| ಅಂಕೇಗೌಡ | ಮಂಡ್ಯ |
| ವೈದ್ಯ ಡಾ ಸುರೇಶ್ ಹನಗವಾಡಿ | ದಾವಣಗೆರೆ |
| ಎಸ್‌ಜಿ ಸುಶೀಲಮ್ಮ | ಬೆಂಗಳೂರು |
| ಡಾ.ಪ್ರಭಾಕರ್ ಕೋರೆ | ಬೆಳಗಾವಿ |
| ಶಶಿಶೇಖರ ವೆಂಪತಿ | ಬೆಂಗಳೂರು |
| ಶುಭಾ ವೆಂಕಟೇಶ್ ಅಯ್ಯಂಗಾರ್ | ಬೆಂಗಳೂರು |
| ಟಿಟಿ ಜಗನ್ನಾಥ್ | ಬೆಂಗಳೂರು |
| ಶತಾವಧಾನಿ ಆರ್ ಗಣೇಶ್ | ಬೆಂಗಳೂರು |

## ಕರ್ನಾಟಕದ 2 ಪೊಲೀಸ್ ಅಧಿಕಾರಿಗಳು ರಾಷ್ಟ್ರಪತಿ ಪದಕಕ್ಕೆ ಆಯ್ಕೆ

• ಉದಯವಾಹಿನಿ, ಬೆಂಗಳೂರು

ಗಣರಾಜ್ಯೋತ್ಸವ ದಿನಾಚರಣೆ ವೇಳೆ ನೀಡುವ ರಾಷ್ಟ್ರಪತಿ ಪದಕ ಗೌರವಕ್ಕೆ ಕರ್ನಾಟಕದ ಇಬ್ಬರು ಹಿರಿಯ ಪೊಲೀಸ್ ಅಧಿಕಾರಿಗಳು ಆಯ್ಕೆಯಾಗಿದ್ದಾರೆ. ಜತೆಗೆ ರಾಜ್ಯದ 27 ಪೊಲೀಸ್ ಅಧಿಕಾರಿ, ಸಿಬ್ಬಂದಿಗಳಿಗೆ ಶ್ಲಾಘನೀಯ ಸೇವಾ ಪದಕ ನೀಡಲಾಗುತ್ತಿದೆ. ಪ್ರತಿ ವರ್ಷದಂತೆಯೇ ಈ ಬಾರಿ ಪೊಲೀಸ್, ಗೃಹರಕ್ಷಕ, ಅಗ್ನಿಶಾಮಕ, ನಾಗರಿಕ ರಕ್ಷಣಾ ಮತ್ತು ತಿದ್ದುಪಡಿ ಸೇವೆಗಳ ಸಿಬ್ಬಂದಿಗೆ ಶೌರ್ಯ ಮತ್ತು ಸೇವಾ ಪದಕಗಳನ್ನು ಕೇಂದ್ರ ಗೃಹ ಸಚಿವಾಲಯ ಪ್ರಕಟಿಸಿದೆ. ದೇಶದ 982 ಅಧಿಕಾರಿಗಳು ಹಾಗೂ ಸಿಬ್ಬಂದಿಯು ಪ್ರಶಸ್ತಿಗೆ ಭಾಜನರಾಗುತ್ತಿದ್ದಾರೆ. ಈ ಪೈಕಿ 125 ಶೌರ್ಯ ಪದಕಗಳು ಸೇರಿವೆ. ಐಪಿಎಸ್ ಅಧಿಕಾರಿ ಮಾನವ ಹಕ್ಕುಗಳ ಎಡಿಜಿಪಿ ದೇವಜ್ಯೋತಿ ರೈ ಮತ್ತು ಬೆಂಗಳೂರಿನ ಹಲಸೂರಿನ ಎಸಿಪಿ ರಂಗಪ್ಪ ಟಿ. ರಾಷ್ಟ್ರಪತಿಗಳ ಪದಕಕ್ಕೆ ಆಯ್ಕೆಯಾಗಿದ್ದಾರೆ.

ಗಣರಾಜ್ಯೋತ್ಸವ ವೇಳೆ ಉಗ್ರರ ಆತ್ಮಾಹುತಿ ದಾಳಿಯ ಎಚ್ಚರಿಕೆ ಹಿನ್ನೆಲೆಯಲ್ಲಿರಾಜಧಾನಿ ದಿಲ್ಲಿಯಲ್ಲಿ ಹೈಅಲರ್ಟ್ ಘೋಷಣೆ ಮಾಡಲಾಗಿದೆ. ಪಥಸಂಚಲನ ನಡೆಯುವ ಕರ್ತವ್ಯ ಪಥದಲ್ಲಿ ಏಳು ಸುತ್ತಿನ ಕೋಟೆಯಂತಹ ಭಾರಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ.

ಕೆಂಪುಕೋಟೆ, ಸಂಸತ್ ಭವನ, ರಾಷ್ಟ್ರಪತಿ ಭವನ, ಪ್ರಮುಖ ಐತಿಹಾಸಿಕ ತಾಣ, ಮಾರುಕಟ್ಟೆ, ಸಾರ್ವಜನಿಕ ಸ್ಥಳ, ಜನ ನಿಬಿಡ ಪ್ರದೇಶಗಳಲ್ಲಿಭದ್ರತೆ ಹೆಚ್ಚಿಸಲಾಗಿದೆ. ಡ್ರೋನ್‌ಗಳ ನಿಗಾ ಹೆಚ್ಚಿಸಲಾಗಿದೆ. ಯುರೋಪ್ ಕಮಿಷನ್ ಅಧ್ಯಕ್ಷ ಉರ್ಸುಲಾ ವಾನ್‌ಡೆರ್ ಲೇಯೆನ್ ಮತ್ತು ಯುರೋಪ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೊ ಲೂಯೀಸ್ ಸ್ಯಾಂಟೋಸ್ ಡಾ'ಕಾಸ್ಟಾ ಅವರು 77ನೇ ಗಣರಾಜ್ಯೋತ್ಸವದ ಮುಖ್ಯ ಅತಿಥಿಗಳಾಗಿ ಭಾಗಿಯಾಗಲಿದ್ದಾರೆ.

## ಅಂಚೆ ಇಲಾಖೆ: ಪ್ರತಿನಿಧಿಗಳ ನೇಮಕ 30ರಂದು ನೇರ ಸಂದರ್ಶನ

• ಉದಯವಾಹಿನಿ, ಬೆಂಗಳೂರು

ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಜೀವ ವಿಮೆ ಪಾಲಿಸಿಗಳನ್ನು ಮಾರಾಟ ಮಾಡಲು ಪ್ರತಿನಿಧಿಗಳ ನಿಯುಕ್ತಿಗಾಗಿ ಅಂಚೆ ಇಲಾಖೆಯು ಇದೇ 30ರಂದು ಬೆಳಿಗ್ಗೆ 11ಕ್ಕೆ ಅಭ್ಯರ್ಥಿಗಳಿಗೆ ನೇರ ಸಂದರ್ಶನ ಏರ್ಪಡಿಸಿದೆ. ಅಭ್ಯರ್ಥಿಗಳು ತಮ್ಮ ಇತ್ತೀಚಿನ ಭಾವಚಿತ್ರಗಳೊಂದಿಗೆ ಸ್ವವಿವರ, ಶೈಕ್ಷಣಿಕ ಪ್ರಮಾಣ ಪತ್ರದ ನಕಲು ಪ್ರತಿಗಳೊಂದಿಗೆ ಮಹಾಲಕ್ಷ್ಮಿಪುರ ಪೊಲೀಸ್ ಠಾಣೆ ಬಳಿ ಇರುವ ಬೆಂಗಳೂರು ಪಶ್ಚಿಮ ಅಂಚೆ ವಿಭಾಗ. ವರಿಷ್ಠ ಅಂಚೆ ಅಧೀಕ್ಷಕರ ಕಾರ್ಯಾಲಯದಲ್ಲಿ ಸಂದರ್ಶನಕ್ಕೆ ಹಾಜರಾಗಬೇಕು ಎಂದು ಪ್ರಕಟಣೆ ತಿಳಿಸಿದೆ. ನಿರುದ್ಯೋಗಿಗಳು, ಸ್ವಯಂ ಉದ್ಯೋಗಿಗಳು, ವಿಮಾ ಕಂಪನಿಗಳ ಮಾಜಿ ಏಜೆಂಟರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮ ಪಂಚಾಯಿತಿಗಳ ಮಾಜಿ ಸದಸ್ಯರು, ಮಹಿಳಾ ಮಂಡಲದ ಕಾರ್ಯಕರ್ತೆಯರು ಭಾಗವಹಿಸಬಹುದು. ಆಯ್ಕೆಯಾಗುವ ಅಭ್ಯರ್ಥಿಗಳು ರಾಷ್ಟ್ರೀಯ ಉಳಿತಾಯ ಪತ್ರದ ರೂಪದಲ್ಲಿ 5,000 ಭದ್ರತಾ ಠೇವಣಿ ಇಡಬೇಕು. ಅಭ್ಯರ್ಥಿಗಳಿಗೆ ವ್ಯವಹಾರಕ್ಕೆ ತಕ್ಕಂತೆ ಕಮಿಷನ್ ನೀಡಲಾಗುವುದು. ವಿವರಗಳಿಗೆ 7975127704/080–23493283 0.

## ಪ್ರಭಾ ಮಲ್ಲೇಶ್‌ರಿಂದ ಚಿತ್ರಕಲೆಗೆ ಹೊಸ ಆಯಾಮ: ಬಿ.ಎಲ್.ಶಂಕರ್

• ಉದಯವಾಹಿನಿ, ಬೆಂಗಳೂರು

'ಮೈಸೂರು ಸಾಂಪ್ರದಾಯಿಕ ಚಿತ್ರಕಲೆಯು ವಿಶಿಷ್ಟವಾದ ಪ್ರಕಾರವಾಗಿದೆ. ಪ್ರಭಾ ಮಲ್ಲೇಶ್ ಅವರು, ಅದರ ವೈಶಿಷ್ಟ್ಯಕ್ಕೆ ಧಕ್ಕೆ ತರದೇ ಇರುವ ರೀತಿಯಲ್ಲಿ ಈ ಚಿತ್ರಕಲೆಗೆ ಹೊಸ ಆಯಾಮ ನೀಡಿದ್ದಾರೆ' ಎಂದು ಕರ್ನಾಟಕ ಚಿತ್ರಕಲಾ ಪರಿಷತ್ತಿನ ಅಧ್ಯಕ್ಷ ಬಿ.ಎಲ್.ಶಂಕರ್ ಹೇಳಿದರು. ಪ್ರಭಾ ಮಲ್ಲೇಶ್ ಅವರ ಮೈಸೂರು ಸಾಂಪ್ರದಾಯಿಕ ಚಿತ್ರಕಲಾ ಕೃತಿಗಳ ಸಂಕಲನ 'ರೂಟೆಡ್ ಇನ್ ಗೋಲ್ಡ್' ಜನಾರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. 'ಈ ಚಿತ್ರಕಲಾ ಪ್ರಕಾರವು ಪ್ರಧಾನವಾಗಿ ದೇವರ ಚಿತ್ರಗಳಿಗೆ ಮೀಸಲಾಗಿದೆ. ಆ ಶೈಲಿಯನ್ನು ಉಳಿಸಿಕೊಂಡು ಇತರ ವಸ್ತುವಿಷಯಗಳನ್ನೂ ಈ ಪ್ರಕಾರಕ್ಕೆ ಒಗ್ಗಿಸಿದ ಕೀರ್ತಿ ಪ್ರಭಾ ಅವರದ್ದು. ಈ ಪ್ರಕಾರಕ್ಕೆ ಮೂರನೇ ಆಯಾಮವನ್ನೂ ಮೊದಲ ಬಾರಿಗೆ ತಂದಿದ್ದು ಪ್ರಭಾ ಅವರು' ಎಂದರು. ನಿವೃತ್ತ ಐಎಎಸ್ ಅಧಿಕಾರಿ ಚಿರಂಜೀವಿ ಸಿಂಗ್, 'ರೇಖೆಗಳೇ ಪ್ರಧಾನವಾದ ಚಿತ್ರಕಲಾ ಪ್ರಕಾರವಿದು. ಜತೆಗೆ ಚಿನ್ನದ ಎಳೆಗಳನ್ನೂ ಕೂರಿಸಬೇಕಾದ ತಾಳ್ಮೆ ಇರಬೇಕು. ಇವುಗಳ ಮಧ್ಯೆ ಪ್ರಭಾ ಅವರು ಅನೇಕ ಪ್ರಯೋಗಗಳನ್ನು ಮಾಡಿದ್ದಾರೆ. ಅವುಗಳಲ್ಲಿ ವಿಶೇಷವಾದ 150 ಕೃತಿಗಳನ್ನು ಒಗ್ಗೂಡಿಸಿ 'ರೂಟೆಡ್ ಟೊ ಗೋಲ್ಡ್' ರೂಪಿಸಿದ್ದಾರೆ' ಎಂದರು.

## 2 ಕಂಟೇನರ್ ಲಾರಿಗಳೇ ಬೆಳಗಾವಿಯಲ್ಲಿ ನಾಪತ್ತೆ! ಚುನಾವಣೆಗೆ ಈ ಹಣ ಬಳಕೆಯಾಗಿರುವ ಶಂಕೆ




# ರಾಬರಿ ಪ್ರಕರಣ 400 ಕೋಟಿ ಅಪಹರಣ

• ಉದಯವಾಹಿನಿ, ಬೆಂಗಳೂರು


ಕರ್ನಾಟಕ–ಗೋವಾ ಗಡಿಯಲ್ಲಿ 400 ಕೋಟಿ ರೂ. ರಾಬರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಳಗಾವಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಮಹತ್ವದ ಸುದ್ದಿಗೋಷ್ಠಿ ನಡೆಸಿದ್ದಾರೆ. ಜ.6ರಂದು ನಾಸಿಕ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರಿಂದ ನಮಗೆ ಪತ್ರ ಬರುತ್ತದೆ. ಚೋರ್ಲಾ ಘಾಟ್‌ನಲ್ಲಿ ರಾಬರಿಯಾಗಿದೆ, ಹಳೆಯ ನೋಟಿನ 400 ಕೋಟಿ ಆಗಿರಬಹುದು ಅಂತಾ ಪತ್ರದಲ್ಲಿ ಇತ್ತು. ಅಕ್ಟೋಬರ್ 22ರಂದು ಸಂದೀಪ್ ಪಾಟೀಲ್ ಎಂಬಾತನನ್ನು ವಿಶಾಲ್ ನಾಯ್ಡು ಎಂಬಾತ ನಾಸಿಕ್‌ನಲ್ಲಿ ಕಿಡ್ನಾಪ್ ಮಾಡಿರುತ್ತಾರೆ. ಅಕ್ಟೋಬರ್ 16ರಂದು 400 ಕೋಟಿ ಅಪಹರಣ ಆಗಿದೆ. ಆ ಹಣ ಎಲ್ಲಿಗೆ ಹೋಗಿದೆ ಅಂತಾ ಪ್ರಶ್ನೆ ಮಾಡುತ್ತಾರೆ. ಈ ರಾಬರಿಯಾಗಿದ್ದು ಚೋರ್ಲಾ ಘಾಟ್‌ನಲ್ಲಿ ಅಂತಾ ಪತ್ರದಲ್ಲಿದೆ ಎಂದರು. ಈ ಕಾರಣಕ್ಕೆ ನಮ್ಮ ಖಾನಾಪುರದ ಸಬ್ ಇನ್ಸ್‌ಪೆಕ್ಟರ್ ಸೇರಿ ಒಂದು ತಂಡವನ್ನು ಕಳುಹಿಸಿದ್ದೇವೆ. ಎಸ್‌ಐಟಿ ರಚನೆ ಆಗಿದೆ. ಸಂದೀಪ್ ಪಾಟೀಲ್ ಬಳಿ ನಮ್ಮವರು ಮಾತಾಡಿದ್ದಾರೆ. ಕಿಡ್ನಾಪ್ ಮಾಡಿದವರು ನನಗೆ ಹಣ ದರೋಡೆ ಬಗ್ಗೆ ಹೇಳಿದ್ದಾಗಿ ಸಂದೀಪ್ ನಮ್ಮ ಪೊಲೀಸರಿಗೆ ತಿಳಿಸಿದ್ದಾರೆ ಎಂದು ಕೆ.ರಾಮರಾಜನ್ ತಿಳಿಸಿದರು. ಘಟನೆ ಆಗಿರುವ ಕಾರಣ ಯಾರು ಬಂದು ದೂರು ಕೊಟ್ಟರೂ ನಾವು ತೆಗೆದುಕೊಳ್ಳುತ್ತೇವೆ. ನೋಡಿದವರು, ಸಂತ್ರಸ್ತರು ಬಂದು ದೂರು ಕೊಟ್ಟರೆ ತೆಗೆದುಕೊಳ್ಳುತ್ತೇವೆ. ಮಹಾರಾಷ್ಟ್ರ ಪೊಲೀಸರು ತನಿಖೆ ಮಾಡುತ್ತಿದ್ದಾರೆ, ನಾವು ಸಹಕಾರ ಕೊಡುತ್ತೇವೆ. ಚೋರ್ಲಾ ಘಾಟ್ ಮೂರು ರಾಜ್ಯಗಳ ವ್ಯಾಪ್ತಿಗೆ ಬರುತ್ತದೆ. ಯಾವ ನೋಟು ಅಂತಾ ಅಧಿಕೃತವಾಗಿ ಗೊತ್ತಾಗಿಲ್ಲ. ಚೋರ್ಲಾ ಘಾಟ್‌ನಲ್ಲಿ ಹೊಸದಾಗಿ ಸಿಸಿಟಿವಿ ಅಳವಡಿಸುತ್ತೇವೆ ಎಂದು ಹೇಳಿದರು. ಕಳೆದ ಡಿಸೆಂಬರ್‌ನಲ್ಲಿ ಮೈಸೂರು ಜಿಲ್ಲೆಯ ಹುಣಸೂರಿನ ಚಿನ್ನದಂಗಡಿಯಲ್ಲಿ ದರೋಡೆ ಮಾಡಿ ಪರಾರಿಯಾಗಿದ್ದ ಡಕಾಯಿತರಲ್ಲಿ ಇಬ್ಬರನ್ನು ಪೊಲೀಸರು ಇತ್ತೀಚಿಗೆ ಬಂಧಿಸಿದ್ದರು. ದರ್ಭಾಂಗದ ಹೃಷಿಕೇಶ್ ಸಿಂಗ್, ಬಾಗಲ್ಪುರದ ಪಂಕಜ್ ಕುಮಾರ್ ಬಂಧಿತರು.

ಹುಣಸೂರಿನಲ್ಲಿರುವ ಸ್ಕೈ ಗೋಲ್ಡ್ ಆಯಂಡ್ ಡೈಮಂಡ್ ಚಿನ್ನದಂಗಡಿಯಲ್ಲಿ 10 ಕೋಟಿ ರೂ. ಮೌಲ್ಯದ ಚಿನ್ನಾಭರಣ ದರೋಡೆ ಪ್ರಕರಣದ ಇಬ್ಬರು ಆರೋಪಿಗಳನ್ನು ಬಿಹಾರದ ಎಸ್‌ಟಿಎಫ್ ನೆರವಿನೊಂದಿಗೆ ರಾಜ್ಯದ ಪೊಲೀಸರು ಬಾಗಲ್ಪುರ ಹಾಗೂ ದರ್ಭಾಂಗದಲ್ಲಿ ಬಂಧಿಸಿದ್ದು, ಒಂದು ಚಿನ್ನದ ಸರ, 1 ಲಕ್ಷ ಮೌಲ್ಯದ ಚಿನ್ನದ ಉಂಗುರ, ಬೈಕ್ ಹಾಗೂ ಆಭರಣ ಸಂಗ್ರಹಿಸಿಡುವ ಪೆಟ್ಟಿಗೆಯನ್ನು ವಶಕ್ಕೆ ಪಡೆಯಲಾಗಿದೆ ಎಂದು ಎಸ್‌ಪಿ ಮಲ್ಲಿಕಾರ್ಜುನ್ ಬಾಲದಂಡಿ ತಿಳಿಸಿದ್ದರು. ಬಿಹಾರ ಪೊಲೀಸರು ಬಿಡುಗಡೆ ಮಾಡಿದ ಹೇಳಿಕೆಯ ಪ್ರಕಾರ, ಬಿಹಾರದ ದರ್ಭಾಂಗ ಮತ್ತು ಭಾಗಲ್ಪುರ ಜಿಲ್ಲೆಯಲ್ಲಿ ಪೊಲೀಸರ ಸಂಘಟಿತ ದಾಳಿಗಳ ಮೂಲಕ ಬಂಧಿಸಲಾಗಿದೆ. ದರೋಡೆಕೋರರನ್ನು ಬಂಧಿಸಲು ಜಿಲ್ಲಾ ಪೊಲೀಸರು ಐದು ತಂಡಗಳನ್ನು ರಚಿಸಿದ್ದರು. ಇನ್ನೂ ಮೂವರ ಬಂಧನಕ್ಕೆ ಶೋಧ ಕಾರ್ಯ ನಡೆಯುತ್ತಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದರು.

**ಬೆಳಗಾವಿ ಎಸ್‌ಪಿ ಕೆ.ರಾಮರಾಜನ್ ಸುದ್ದಿಗೋಷ್ಠಿ**

**ಇನ್ಸ್‌ಪೆಕ್ಟರ್ ವಿಜಯ್ ಶಿಂಧೆ ಅವರು, ಈ ಪ್ರಕರಣದಲ್ಲಿ ಭಾಗಿಯಾಗಿರುವ ಪ್ರಮುಖ ಉದ್ಯಮಿ ಗಾಂಧಿಯನ್ನು ವ್ಯವಸ್ಥಾಪಕನಾಗಿ ನೇಮಿಸಿಕೊಂಡಿದ್ದ. ಆತನ ಈ ಅಪರಾಧದಲ್ಲಿನ ಪಾತ್ರದ ಬಗ್ಗೆ ನಾವು ತನಿಖೆ ನಡೆಸುತ್ತಿದ್ದೇವೆ ಎಂದು ತಿಳಿಸಿದರು. ಬಂಧಿತ ಆರೋಪಿಗಳನ್ನು ಜನವರಿ 28 ರವರೆಗೆ ಪೊಲೀಸ್ ವಶಕ್ಕೆ ನೀಡಲಾಗಿದೆ. ಈ ಪ್ರಕರಣವು ದೊಡ್ಡ ಮೊತ್ತದ ಹಣದ ಕಳ್ಳತನ ಮತ್ತು ಅದರ ಹಿಂದಿರುವ ಸಂಘಟಿತ ಜಾಲದ ಬಗ್ಗೆ ಬೆಳಕು ಚೆಲ್ಲುತ್ತದೆ. ಹವಾಲಾ ಆಪರೇಟರ್‌ಗಳು, ಉದ್ಯಮಿಗಳು ಮತ್ತು ಧಾರ್ಮಿಕ ಸಂಸ್ಥೆಗಳ ನಡುವಿನ ಸಂಪರ್ಕಗಳು ತನಿಖೆಯ ವ್ಯಾಪ್ತಿಯನ್ನು ವಿಸ್ತರಿಸಿವೆ. ಕಳ್ಳತನವಾದ ನೋಟುಗಳನ್ನು ಎಲ್ಲಿಗೆ ಸಾಗಿಸಲಾಗುತ್ತಿತ್ತು ಮತ್ತು ಅವುಗಳ ಅಂತಿಮ ಗಮ್ಯಸ್ಥಾನ ಏನೆಂಬುದು ತನಿಖೆಯ ಪ್ರಮುಖ ಅಂಶಗಳು ಆಗಿವೆ. ಈ ಪ್ರಕರಣದಲ್ಲಿ ಇನ್ನೂ ತಲೆಮರೆಸಿಕೊಂಡಿರುವ ಇಬ್ಬರು ಆರೋಪಿಗಳ ಬಂಧನವಾದರೆ, ಕಳ್ಳತನದ ಹಿಂದಿನ ಸಂಪೂರ್ಣ ಜಾಲ ಬಯಲಿಗೆ ಬರಲಿದೆ ಎಂದು ನಿರೀಕ್ಷಿಸಲಾಗಿದೆ.**

**ಆರೋಪಿಗಳು 28 ರವರೆಗೆ ಪೊಲೀಸ್ ವಶಕ್ಕೆ**



### ಐವರ ಬಂಧನ, ಇಬ್ಬರು ಪರಾರಿ

**ಘಟನೆಯ ಬಗ್ಗೆ ಪ್ರತಿಕ್ರಿಯಿಸಿರುವ ಎಸ್‌ಐಟಿ ಮುಖ್ಯಸ್ಥ ಆದಿತ್ಯ ಮೀರಖೇಲಕರ್, ಪ್ರಕರಣಕ್ಕೆ ಸಂಬಂಧಿಸಿ ಐವರು ಆರೋಪಿಗಳನ್ನು ಬಂಧಿಸಲಾಗಿದೆ. ಇಬ್ಬರು ಆರೋಪಿಗಳು ಪರಾರಿಯಾಗಿದ್ದು, ಹುಡುಕಾಟ ಮುಂದುವರಿದಿದೆ. ಎಲ್ಲಾ ಆರೋಪಿಗಳನ್ನು ಬಂಧಿಸಿದ ಬಳಿಕವೇ ನಿಖರ ಮಾಹಿತಿ ನೀಡಲಾಗುವುದು ಎಂದು ತಿಳಿಸಿದ್ದಾರೆ.ಪ್ರಕರಣದಲ್ಲಿ ಕಿಶೋರ್ ಸಾಳ್ವೆ (ಶೇರ್) ಹಾಗೂ ಅಜರ್ ಎಂಬವರು ನಾಪತ್ತೆಯಾಗಿದ್ದು, ಇವರ ಪಾತ್ರದ ಕುರಿತು ತನಿಖೆ ನಡೆಯುತ್ತಿದೆ. ಮಹಾರಾಷ್ಟ್ರ, ಕರ್ನಾಟಕ ಹಾಗೂ ಗೋವಾ ಪೊಲೀಸರು ಪರಸ್ಪರ ಮಾಹಿತಿ ಹಂಚಿಕೊಂಡಿದ್ದಾರೆ.ಇತ್ತೀಚೆಗೆ ಮಹಾರಾಷ್ಟ್ರದಲ್ಲಿ ನಡೆದ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಈ ಹಣ ಬಳಕೆಯಾಗಿದೆ ಎಂಬ ಶಂಕೆ ವ್ಯಕ್ತವಾಗಿದ್ದು, ಎಲ್ಲಾ ಆಯಾಮಗಳಲ್ಲಿ ತನಿಖೆ ನಡೆಸುವಂತೆ ಮುಖ್ಯಮಂತ್ರಿ ಫಡ್ನವೀಸ್ ಸೂಚನೆ ನೀಡಿದ್ದಾರೆ.**

### ರಾಜಸ್ಥಾನ ಮೂಲದ ಹವಾಲಾ ಆಪರೇಟರ್

**ಬಂಧಿತ ಗಾಂಧಿ ರಾಜಸ್ಥಾನ ಮೂಲದ ಹವಾಲಾ ಆಪರೇಟರ್ ಆಗಿದ್ದು, ಒಂದು ಧಾರ್ಮಿಕ ಸಂಸ್ಥೆಯೊಂದಿಗೆ ಸಂಪರ್ಕ ಹೊಂದಿದ್ದಾನೆ ಎಂದು ನಾಶಿಕ್ ಪೊಲೀಸರು ತಿಳಿಸಿದ್ದಾರೆ. ಪ್ರಕರಣ ದಾಖಲಾದಾಗಿನಿಂದ ಈತ ತಲೆಮರೆಸಿಕೊಂಡಿದ್ದ. ನಾಶಿಕ್ ಗ್ರಾಮಾಂತರದ ಉಪ ಅಧೀಕ್ಷಕ ಆದಿತ್ಯ ಮಿರಖೆಲ್ಕರ್ ಮಾತನಾಡಿ, ನಾಶಿಕ್ ಪೊಲೀಸರು ಮತ್ತು ಕರ್ನಾಟಕ ಪೊಲೀಸರು ಜಂಟಿಯಾಗಿ ಈ ಪ್ರಕರಣದ ತನಿಖೆ ನಡೆಸುತ್ತಿದ್ದಾರೆ. ಎಷ್ಟು ರಾಜ್ಯಗಳು ಈ ಪ್ರಕರಣದಲ್ಲಿ ಭಾಗಿಯಾಗಿವೆ ಎಂಬುದನ್ನು ಈಗಲೇ ಹೇಳಲು ಸಾಧ್ಯವಿಲ್ಲ ಎಂದರು.**

## ಥಾವರ್ ಚಂದ್ ಗೆಹ್ಲೋಟ್ ಎಸಗಿದ್ದು 5 ಅಪಚಾರ!

### ರಾಜ್ಯಪಾಲರ ರಿಮೋಟ್ ಕಂಟ್ರೋಲ್ ಕೇಶವ ಕೃಪಾದಲ್ಲಿದೆಯೇ, ಜಗನ್ನಾಥ ಭವನದಲ್ಲಿದೆಯೇ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ವಿಧಾನಮಂಡಲ ಜಂಟಿ ಅಧಿವೇಶನ ಭಾಷಣ ವೇಳೆ ಕೇವಲ 37 ಸೆಕೆಂಡ್ ಗಳಲ್ಲಿ ರಾಜ್ಯಪಾಲರು 5 ಅಪಚಾರಗಳನ್ನು ಎಸಗಿದ್ದಾರೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಪಟ್ಟಿ ನೀಡಿದ್ದಾರೆ.

ಕಳೆದ ವಾರ ನಡೆದ ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರು ಸಂಪೂರ್ಣ ಭಾಷಣ ಮಾಡದೇ ಕೆಲ ನಿಮಿಷಗಳಲ್ಲಿಯೇ ಅಧಿವೇಶನದಿಂದ ತೆರಳಿದ್ದು, ದೊಡ್ಡ ವಿವಾದಕ್ಕೆ ಕಾರಣವಾಗಿತ್ತು. ರಾಜ್ಯಪಾಲರ ನಡೆಯ ಬಗ್ಗೆ ಸರ್ಕಾರ, ಕಾಂಗ್ರೆಸ್ ನಾಯಕರು ತೀವ್ರ ವಿರೋಧ ವ್ಯಕ್ತಪಡಿಸಿದ್ದರು.

ಸದ್ಯ ರಾಜ್ಯಪಾಲರ ನಡೆಯ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಸಚಿವ ಪ್ರಿಯಾಂಕ್ ಖರ್ಗೆ, ಕೇವಲ 37 ಸೆಕೆಂಡ್‌ಗಳಲ್ಲಿ ರಾಜ್ಯಪಾಲರು ಎಸಗಿದ ಅಪಚಾರ ಒಂದೆರಡಲ್ಲ ಎಂದಿದ್ದಾರೆ. ರಾಷ್ಟ್ರಗೀತೆಗೆ ಅಪಚಾರ, ಸಂವಿಧಾನಕ್ಕೆ ದ್ರೋಹ, ಕರ್ನಾಟಕಕ್ಕೆ ಅಗೌರವ, ಕನ್ನಡಿಗರಿಗೆ ಅಪಮಾನ, ರಾಜ್ಯ ಸರ್ಕಾರಕ್ಕೆ ಅವಮಾನ ಮಾಡಿದ್ದಾರೆ ಎಂದು ಕಿಡಿಕಾರಿದ್ದಾರೆ.

**ರಾಜ್ಯಪಾಲರ ದೇಶದ್ರೋಹಿ ನಡವಳಿಕೆ**

**ರಾಜ್ಯಪಾಲರ ರಿಮೋಟ್ ಕಂಟ್ರೋಲ್ ಕೇಶವ ಕೃಪಾದಲ್ಲಿದೆಯೇ:** ರಾಜ್ಯಪಾಲರಿಂದ ಇಷ್ಟೆಲ್ಲ ಅಪಚಾರವಾದರೂ ಬಿಜೆಪಿಯವರ ಸಮರ್ಥನೆ ನೋಡುತ್ತಿದ್ದರೆ ರಾಜ್ಯಪಾಲರ ರಿಮೋಟ್ ಕಂಟ್ರೋಲ್ ಕೇಶವ ಕೃಪಾದಲ್ಲಿದೆಯೇ ಅಥವಾ ಜಗನ್ನಾಥ ಭವನದಲ್ಲಿದೆಯೇ ಎಂಬ ಅನುಮಾನ ಮೂಡುತ್ತಿದೆ ಎಂದಿದ್ದಾರೆ.



**ರಾಷ್ಟ್ರಗೀತೆ ನುಡಿಸಲು ಒಂದು ಕ್ಷಣವೂ ಅವಕಾಶ ನೀಡಿಲ್ಲ:** ಭಾಷಣದ ನಂತರ ರಾಷ್ಟ್ರಗೀತೆಯ ಬ್ಯಾಂಡ್ ನುಡಿಸುವುದು ನಿಯಮ, ಆದರೆ ರಾಜ್ಯಪಾಲರು ರಾಷ್ಟ್ರಗೀತೆ ನುಡಿಸಲು ಒಂದು ಕ್ಷಣವೂ ಅವಕಾಶ ನೀಡದೆ ಅವಸರದ ನಡೆ ಸರಿಯೇ ರಾಜ್ಯಪಾಲರ ಈ ದೇಶದ್ರೋಹಿ ನಡವಳಿಕೆಯನ್ನು ಖಂಡಿಸದೆ ಸಮರ್ಥಿಸುತ್ತಿರುವ ಬಿಜೆಪಿಯವರದ್ದು ಬೂಟಾಟಿಕೆಯ ದೇಶಭಕ್ತಿ ಎಂಬುದು ಮತ್ತೊಮ್ಮೆ ಸಾಬೀತಾಗಿದೆ ಎಂದು ಆರೋಪಿಸಿದ್ದಾರೆ.

**ಬಿಜೆಪಿಯವರಲ್ಲಿ ಎಳ್ಳು ಕಾಳಷ್ಟು ದೇಶಭಕ್ತಿ ಇದ್ದರೆ ಪ್ರಶ್ನಿಸಿ:** ಸಂಸತ್ತಿನಲ್ಲಿ ''ವಂದೇ ಮಾತರಂ'' ಬಗ್ಗೆ ಮೂರು ದಿನಗಳ ಕಾಲ ಚರ್ಚೆ ನಡೆಸುವ ಬಿಜೆಪಿಗೆ ''ಜನ ಗಣ ಮನ''ದ ಬಗ್ಗೆ ಮೂರು ನಿಮಿಷವೂ ಚರ್ಚಿಸದಷ್ಟು ಅಸಹನೆ ಏಕೆ ರಾಷ್ಟ್ರಗೀತೆಯನ್ನು ವಿರೋಧಿಸುವ ಸಂಘದ ಪಾಠವನ್ನು ಪಾಲಿಸುತ್ತಿದ್ದಾರೆಯೇ

ಕರ್ನಾಟಕದ ಬಿಜೆಪಿಯವರಲ್ಲಿ ಎಳ್ಳು ಕಾಳಷ್ಟು ದೇಶಭಕ್ತಿ ಇದ್ದಿದ್ದೇ ಆದರೆ ರಾಷ್ಟ್ರಗೀತೆಗೆ, ಸಂವಿಧಾನಕ್ಕೆ ರಾಜ್ಯಪಾಲರಿಂದ ಆಗಿರುವ ಅವಮಾನವನ್ನು ಖಂಡಿಸಲಿ ಎಂದು ಸಚಿವ ಪ್ರಿಯಾಂಸವಾಲು ಹಾಕಿದ್ದಾರೆ.

## ಮಲ್ಲಿಕಾರ್ಜುನ ಖರ್ಗೆ – ಸಿದ್ದರಾಮಯ್ಯ ಗೌಪ್ಯ ಸಭೆ! ಏನಿದರ ಮರ್ಮ

### ಸಿಎಂ ಆಪ್ತ ಆಪ್ತ ಸಚಿವರಾದ ಸತೀಶ ಜಾರಕಿಹೊಳಿ, ಜಮೀರ್ ಅಹ್ಮದ್‌ಖಾನ್ ಭಾಗಿ; 45 ನಿಮಿಷ ಚರ್ಚೆ

• ಉದಯವಾಹಿನಿ, ಹುಬ್ಬಳ್ಳಿ

ರಾಜ್ಯದಲ್ಲಿ ಸಿಎಂ ಬದಲಾವಣೆ ಕುರಿತು ನಿಲ್ಲದ ಚರ್ಚೆಗಳ ನಡುವೆಯೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಹುಬ್ಬಳ್ಳಿ ಖಾಸಗಿ ಹೋಟೇಲ್‌ನಲ್ಲಿ ಪರಸ್ಪರ ಭೇಟಿ ಮಾಡಿ ಗೌಪ್ಯ ಚರ್ಚಿಸಿರುವುದು ಕುತೂಹಲಕ್ಕೆ ಎಡೆಮಾಡಿ ಕೊಟ್ಟಿದೆ.

ನಗರದಲ್ಲಿ ಆಶ್ರಯ ಮನೆಗಳ ಹಸ್ತಾಂತರ ಕಾರ್ಯಕ್ರಮದ ಸಲುವಾಗಿ ವಿಶೇಷ ವಿಮಾನದ ಮೂಲಕ ಆಗಮಿಸಿದ್ದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಖಾಸಗಿ ಹೋಟೆಲ್‌ನಲ್ಲಿ ತಂಗಿದ್ದರು.

ಇದೇ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಬೆಂಗಳೂರಿನಿಂದ ವಿಶೇಷ ವಿಮಾನ ಮೂಲಕ ಸಚಿವರು, ಶಾಸಕರ ತಂಡದೊಂದಿಗೆ ಆಗಮಿಸಿದ ಸಿಎಂ ಸಿದ್ದರಾಮಯ್ಯ ಅವರು ವಿಮಾನ ನಿಲ್ದಾಣದಲ್ಲಿ ಗೌರವ ವಂದನೆ ಸ್ವೀಕರಿಸಿ ನೇರ ಖಾಸಗಿ ಹೋಟೆಲ್‌ಗೆ ತೆರಳಿದರು.

**ಯಾವುದೇ ರಾಜಕೀಯ ಚರ್ಚೆಸಿಲ್ಲ**

**ಆಪ್ತ ಇಬ್ಬರು ಶಾಸಕರ ಜತೆ ಖರ್ಗೆ ಭೇಟಿ:** ತಮಗೆ ಆಪ್ತರಾಗಿರುವ ಸತೀಶ ಜಾರಕಿಹೊಳಿ, ಜಮೀರ್ ಅಹ್ಮದ್‌ಖಾನ್ ಉಪಸ್ಥಿತಿಯಲ್ಲಿಯೇ ಸಿದ್ದರಾಮಯ್ಯ ಅವರು ಖರ್ಗೆ ಅವರ ಜತೆ 45 ನಿಮಿಷ ಚರ್ಚೆ ನಡೆಸಿದ್ದಾರೆ. ಆದರೆ, ಇದೊಂದು ಕುಶಲೋಪರಿ ಭೇಟಿ ಹೊರತು, ಯಾವುದೇ ರಾಜಕೀಯ ಚರ್ಚೆಸಿಲ್ಲ ಎಂದು ಸಿಎಂ ಮೂಲಗಳು ತಿಳಿಸಿವೆ.



**ರಾರಾಜಿಸಿದ ಕಟೌಟ್, ಬ್ಯಾನರ್**

**ಎಲ್ಲಿ ನೋಡಿದರಲ್ಲಿಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ವಸತಿ ಸಚಿವ ಜಮೀರ್ ಅಹ್ಮದ್ ಖಾನ್, ಜಿಲ್ಲಾಉಸ್ತುವಾರಿ ಸಚಿವ ಸಂತೋಷ ಲಾಡ್, ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ, ಶಾಸಕ ಪ್ರಸಾದ ಅಬ್ಬಯ್ಯ ಸೇರಿದಂತೆ ವಿವಿಧ ನಾಯಕರು ಮತ್ತು ಮುಖಂಡರ 30-50 ಅಡಿ ಎತ್ತರ ಬೃಹತ್ ಕಟೌಟ್‌ಗಳು, ಬ್ಯಾನರ್‌ಗಳು ರಾರಾಜಿಸಿದವು. ಹುಬ್ಬಳ್ಳಿಯ ಗಬ್ಬೂರು, ವಿಮಾನ ನಿಲ್ದಾಣ ರಸ್ತೆ, ಗೋಕುಲ, ಚೆನ್ನಮ್ಮ ಸರ್ಕಲ್, ಸ್ಟೇಶನ್ ರಸ್ತೆ ಹಾಗೂ ಮಂಟೂರಿನ ರಸ್ತೆಯಲ್ಲಿಶಾಸಕ, ಸಚಿವರು ಮತ್ತು ಮುಖಂಡರ ಅಭಿಮಾನಿಗಳು ಬ್ಯಾನರ್ ಮತ್ತು ಕಟೌಟ್‌ಗಳನ್ನು ಹಾಕುವ ಮೂಲಕ ತಮ್ಮ ನಾಯಕರಿಗೆ ಸ್ವಾಗತ ಕೋರಿದ್ದು ವಿಶೇಷವಾಗಿತ್ತು.**

**ಪ್ರತ್ಯೇಕ ವಾಹನದಲ್ಲಿ ಕಾರ್ಯಕ್ರಮಕ್ಕೆ:** ನಂತರ ಇಬ್ಬರು ನಾಯಕರು ಪ್ರತ್ಯೇಕ ವಾಹನಗಳಲ್ಲಿ ಏಕಕಾಲಕ್ಕೆ ಕಾರ್ಯಕ್ರಮ ಸ್ಥಳಕ್ಕೆ ಆಗಮಿಸಿದರು. ಹೋಟೆಲ್‌ನಲ್ಲಿ ಸಚಿವರಾದ ಕೆ.ಎಚ್. ಮುನಿಯಪ್ಪ, ಡಾ.ಎಚ್.ಸಿ. ಮಹದೇವಪ್ಪ, ಅಶೋಕ ಪಟ್ಟಣ ಸೇರಿದಂತೆ ಹಲವು ಮುಖಂಡರುಗಳು ಇದ್ದರು.

**ನಾಲ್ಕು ಗಂಟೆ ತಡವಾಗಿ ಕಾರ್ಯಕ್ರಮಕ್ಕೆ ಬಂದ ಸಿಎಂ:** ಮನೆ ಹಂಚಿಕೆಯ ಬೃಹತ್ ಕಾರ್ಯಕ್ರಮಕ್ಕೆ ಸಿಎಂ ಸಿದ್ದರಾಮಯ್ಯ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸುಮಾರು ನಾಲ್ಕು ಗಂಟೆ ತಡವಾಗಿ ಆಗಮಿಸಿದ್ದು, ಕಾರ್ಯಕರ್ತರು, ಅಭಿಮಾನಿಗಳ ಅಸಮಾಧಾನಕ್ಕೆ ಕಾರಣವಾಯಿತು.

ನಿರೂಪಕರು ಇನ್ನೇನು ಸಿಎಂ ಬಂದರೂ ಎಂದು ಹೇಳುತ್ತಲೇ ನಾಲ್ಕು ಗಂಟೆ ಜನರನ್ನು ಕಾಯುವಂತೆ ಮಾಡಿದರು. ಕಾರ್ಯಕ್ರಮದ ಉದ್ಘಾಟನೆಗೆ ಬೆಳಗ್ಗೆ 11ಕ್ಕೆ ಸಮಯ ನಿಗದಿಪಡಿಸಲಾಗಿತ್ತು. ಆದರೆ ಸಿಎಂ ಸೇರಿದಂತೆ ನಾಯಕರು ಮಧ್ಯಾಹ್ನ 3ಕ್ಕೆ ಆಗಮಿಸಿದರು. ಕೊನೆಯಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಖರ್ಗೆಯವರ ಭಾಷಣದ ವೇಳೆ ಕಾರ್ಯಕರ್ತರು ಊಟದ ಹಾಲ್‌ನತ್ತ ಸಾಗಿದರು. ಮೂರು ಗಂಟೆ ಮೊದಲೇ ವೇದಿಕೆಗೆ ಆಗಮಿಸಿದ್ದ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮ ಉದ್ಘಾಟನೆ ಆಗುತ್ತಿದ್ದಂತೆ ಕಾರ್ಯಕ್ರಮದಿಂದ ಹೊರಗೆ ಹೋದರು.

**ಈ ದಿನದ ದರ** ಪೆಟ್ರೋಲ್: 103.62 ₹/L ಡೀಸೆಲ್ : 91.67 ₹/L ಬಂಗಾರ: ₹16,026/Gram24ct ₹14,690/Gram22ct ಬೆಳ್ಳಿ: ₹335.00/Gram

# ಗೌರವ ಡಾಕ್ಟರೇಟ್ ಪದವಿ ಪಡೆದ ಹೆಚ್. ಎಸ್. ಪ್ರತಿಮಾ ಹಾಸನ್

• ಉದಯವಾಹಿನಿ, ಬೆಂಗಳೂರು

ಬಸವನಗುಡಿಯಲ್ಲಿ ಸನ್ ರೈಸ್‌ಂಟರ್ ನ್ಯಾಷನಲ್ ಕಲ್ಚರಲ್ ಯುನಿವರ್ಸಿಟಿ ವತಿಯಿಂದ ಗೌರವ ಡಾಕ್ಟರೇಟ್ ಪದವಿ ನೀಡುವ ಕಾರ್ಯಕ್ರಮದಲ್ಲಿ ನೆಲ, ನಾಡು, ನುಡಿಗಾಗಿ ಶ್ರಮಿಸುತ್ತಿರುವ ಹಾಸನ ನಗರದ ಶಿಕ್ಷಕಿ, ಸಾಮಾಜಿಕ ಚಿಂತಕಿ, ಸಾಹಿತಿ, ಪತ್ರಕರ್ತೆ ಸಂಸ್ಥಾಪಕ ಅಧ್ಯಕ್ಷರು ಪ್ರತಿಮಾ ಸಾಮಾಜಿಕ ಸಾಂಸ್ಕೃತಿಕ ಟ್ರಸ್ಟ್.ರಾಜ್ಯ ಘಟಕ. ಹಾಸನ, ಬಹುಮುಖ ಪ್ರತಿಭೆ, ಸದಾ ಕ್ರಿಯಾಶೀಲರಾಗಿರುವ ಹಾಗೂ ಜಿಲ್ಲೆ, ರಾಜ್ಯ,ಮಟ್ಟದಲ್ಲಿ ಹಲವಾರು ಸಂಘ ಸಂಸ್ಥೆಯಲ್ಲಿ ಪದಾಧಿಕಾರವನ್ನು ಪಡೆದು ಕಾರ್ಯನಿರ್ವಹಿಸುತ್ತಿದ್ದು, ನೂರಾರು ಪ್ರಶಸ್ತಿಗಳನ್ನು ಪಡೆದಿರುವ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದ ಪ್ರಶಸ್ತಿಗಳನ್ನು ಪಡೆದಿದ್ದು, ಯಾವುದೇ ಹಮ್ಮು ಇಲ್ಲದ ನೇರ ನುಡಿಯ ಮಾತುಗಾರ್ತಿ, ಮಹಿಳಾ ಸಾಧಕಿ, ಮಹಿಳಾ ಹೋರಾಟಗಾರ್ತಿ,

ಉದಯವಾಹಿನಿ ಚಿತ್ರ




ರೈತರಿಗಾಗಿ ಕಾರ್ಯ ನಿರ್ವಹಿಸುತ್ತಿದ್ದು, ಸಮಾಜ ಸೇವಕಿಯಾಗಿ ಸಾಮಾಜಿಕ,ಸಾಂಸ್ಕೃತಿಕ, ಶೈಕ್ಷಣಿಕ, ಸಾಹಿತಿಕವಾಗಿ ಸೇವೆ ಸಲ್ಲಿಸಿದ್ದು ಹಲವಾರು ಪ್ರಕಾರಗಳಲ್ಲಿ ಕೃತಿಗಳನ್ನು ಲೋಕಾರ್ಪಣೆಗೊಳಿಸಿ ಸಾಹಿತ್ಯ ಕ್ಷೇತ್ರಕ್ಕೆ ಕೊಡುಗೆ ನೀಡಿರುವುದನ್ನು ಗಮನಿಸಿದ್ದು ಹಾಗೂ ಅಂಕಣಗಾರ್ತಿಯಾಗಿ, ಸಮಾಜದ ಓರೆಕೋರೆಯ ಬಗ್ಗೆ ತಿಳಿಸುತ್ತಿದ್ದು ಹಲವಾರು ಪ್ರಕಾರಗಳಲ್ಲಿ ಪತ್ರಿಕೆಗಳಿಗೆ ಬರೆಯುತ್ತಿರುವುದನ್ನು ಗಮನಿಸಿದ್ದು. ಎಲ್ಲಾ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸಿರುವ ಹಲವಾರು ಸಂಘಟನೆಗೆ ಮಾದರಿಯಾಗಿದ್ದಾರೆ ಎಂದು ಅವರ ಎಲ್ಲಾ ಕಾರ್ಯವನ್ನು ಗಮನಿಸಿ, ದಾಖಲೆಯನ್ನು ಪರಿಶೀಲಿಸಿ ಗೌರವ ಡಾಕ್ಟರೇಟ್ ಪದವಿ ಗೆ ಆಯ್ಕೆ ಮಾಡಿ ಸಾಹಿತ್ಯ ಹಾಗೂ ಸಮಾಜ ಸೇವೆಗೆ ಶ್ರೀಮತಿ. ಹೆಚ್. ಎಸ್. ಪ್ರತಿಮಾ ಹಾಸನ್ ಗೌರವ ಡಾಕ್ಟರೇಟ್ ಪದವಿಯನ್ನು ನೀಡಲಾಯಿತು. ಕಾರ್ಯಕ್ರಮದಲ್ಲಿ ಶ್ರೀಪುಟ್ಟೇಗೌಡರು ರಿಟೆಡ್ ಪೊಲೀಸ್ ಆಫೀಸರ್, ಡಾ. ಪುಷ್ಪಲತಾ ಸ್ಟೇಟ್ ವಾಯ್ಸ್ ಪ್ರೆಸಿಡೆಂಟ್ ಕರ್ನಾಟಕ ರಾಜ್ಯ ರೈತ ಸಂಘ, ಡಾ.ಮಂಜುಳಾ ಕೇರ್ ಆಲ್ ಹಾಸ್ಪಿಟಲ್ ಟ್ರಸ್ಟ್, ಡಾ. ಕುಮಾರ್ ವಸಿಷ್ಠ, ಫೇಮಸ್ ಅಸ್ಟ್ರೋಲಜಿ, ಡಾ. ಶಶಿಕಲಾ ಆರ್. ಎಜುಕೇಶನ್ ಡಿಪಾರ್ಟ್ಮೆಂಟ್, ಶ್ರೀ ರಾಮು ಅಡ್ವಕೇಟ್ ಹೈ ಕೋರ್ಟ್ ಆಫ್ ಕರ್ನಾಟಕ, ಕಸ್ತೂರಿ ಚಂದ್ರು, ಇನ್ನು ಹಲವರು ಉಪಸ್ಥಿತರಿದ್ದರು.

## ಯಾರ ಒತ್ತಡಕ್ಕೂ ಮಣಿಯದೆ ರಾಜೀವ್ ಗೌಡನನ್ನ ನಮ್ಮ ಪೊಲೀಸರು ಬಂಧಿಸುತ್ತಾರೆ

• ಉದಯವಾಹಿನಿ, ಬೆಂಗಳೂರು

ಧಮಕಿ ಹಾಕಿ ತಲೆಮರೆಸಿಕೊಂಡಿರುವ ರಾಜೀವ್ ಗೌಡ ಎಷ್ಟು ದಿನ ಅಂತ ತಪ್ಪಿಸಿಕೊಂಡು ಹೋಗ್ತಾನೆ ನಮ್ಮ ಪೊಲೀಸರು ಖಂಡಿತವಾಗಿಯೂ ಹಿಡಿದೇ ಹಿಡಿಯುತ್ತಾರೆ ಎಂದು ಗೃಹಸಚಿವ ಜಿ. ಪರಮೇಶ್ವರ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಯಾವುದೇ ಮುಲಾಜಿಲ್ಲ, ಯಾರ ಒತ್ತಡಕ್ಕೂ ಮಣಿಯೋದಿಲ್ಲ ರಾಜೀವ್ ಗೌಡನನ್ನ ತಕ್ಷಣ ಬಂಧಿಸುತ್ತೇವೆ ಎಂದು ತಿಳಿಸಿದರು. ಪ್ರಕರಣ ದಾಖಲಾಗುತ್ತಿದ್ದಂತೆ ಕ್ರಮ ಕೈಗೊಳ್ಳಲು ತಿಳಿಸಿದ್ದೆ ಆದರೆ ಆತ ತಪ್ಪಿಸಿಕೊಂಡು ತಲೆಮರೆಸಿಕೊಂಡಿದ್ದಾರೆ ಕಾನೂನು ಪ್ರಕಾರ ಪೊಲೀಸರು ತನಿಖೆ ಕೈಗೊಂಡಿದ್ದಾರೆ ಯಾರು ಹಸ್ತಕ್ಷೇಪ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು. ಇನ್ನೂ ಬೆಳಗಾವಿಯಲ್ಲಿ 400 ಕೋಟಿ ರೂ. ಲೂಟಿ ಪ್ರಕರಣದ ಕುರಿತು ಮಾಹಿತಿ ನೀಡಿದ ಸಚಿವರು ಮಹಾರಾಷ್ಟ್ರ ಪೊಲೀಸರು ನಮ ಪೊಲೀಸರಿಗೆ ಪತ್ರ ಬರೆದಿದ್ದಾರೆ. ತನಿಖೆಯಲ್ಲಿ ನಮ ಸರ್ಕಾರದ ಸಹಾಯ ಬೇಕಾಗುತ್ತೆ ಎಂದು ಸಹಾಯ ಕೇಳಿದ್ದಾರೆ ಎಂದರು.

ಅದರ ಬಗ್ಗೆ ಹೆಚ್ಚು ಮಾಹಿತಿ ಕೇಳಿದ್ದೇನೆ. ತನಿಖೆ ಇನ್ನೂ ಪ್ರಾರಂಭಿಕ ಹಂತದಲ್ಲಿದೆ. ಹೆಚ್ಚಿನ ಮಾಹಿತಿ ಸಿಕ್ಕಿದ ಮೇಲೆ ನಮ್ಮ ರಾಜ್ಯದ ಪೊಲೀಸರು ಏನು ಕ್ರಮ ತಗೋಬೇಕು ಅನ್ನೋದನ್ನ ನೋಡ್ತಾರೆ. ಪರಿಶೀಲಿಸಿ ಮಾಹಿತಿ ಕೊಡುವಂತೆ ಹೇಳಿದ್ದೇನೆ ಎಂದು ವಿವರಿಸಿದ್ದಾರೆ. ಗಣರಾಜ್ಯೋತ್ಸವದಲ್ಲಿ ರಾಜ್ಯಪಾಲರು ಭಾಷಣ ಕುರಿತು ಸಂಜೆಯೊಳಗೆ ಗೊತ್ತಾಗುತ್ತೆ, ನಮ್ಮ ಭಾಷಣದ ಪ್ರತಿಯನ್ನು ನಾನು ನೋಡಿಲ್ಲ. ಗವರ್ನರ್ ಯಾವ ರೀತಿ ತೀರ್ಮಾನ ಮಾಡುತ್ತಾರೆ ಎಂದರು.

## ರಾಜಕಾರಣಕ್ಕಾಗಿ ರಾಜ್ಯಪಾಲರಿಗೆ ಕಾಂಗ್ರೆಸ್ ಅಗೌರವ : ಬೊಮ್ಮಾಯಿ ಕಿಡಿ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ಕೇವಲ ರಾಜಕಾರಣಕ್ಕಾಗಿ ಮತ್ತು ತಮ್ಮ ವೈಫಲ್ಯವನ್ನು ಮುಚ್ಚಿಕೊಳ್ಳಲು ಕೇಂದ್ರ ಸರ್ಕಾರದ ವಿರುದ್ಧ ಆರೋಪ ಮಾಡುತ್ತಿರುವುದು ಹಾಗೂ ರಾಜ್ಯಪಾಲರಿಗೆ ತೋರಿರುವ ಅಗೌರವ. ಅದು ಸಂವಿಧಾನಕ್ಕೆ ಮಾಡಿರುವ ಅಪಚಾರವಾಗಿದ್ದು, ಅತ್ಯಂತ ಖಂಡನೀಯ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮಾಯಿ ಹೇಳಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಹಿಂದಿನ ರಾಜ್ಯಪಾಲರು ಮೊದಲ ಪುಟ ಕೊನೆ ಪುಟ ಓದದೆ ಇರುವ ಅನೇಕ ಉದಾಹರಣೆಗಳಿವೆ. ರಾಜ್ಯಪಾಲರ ವಿರುದ್ಧ ಅವಾಚ್ಯ ಶಬ್ದ ಬಳಕೆ ಮಾಡಿರುವುದು ಸಂವಿಧಾನಕ್ಕೆ, ಸಾಂವಿಧಾನಿಕ ಹುದ್ದೆಯಲ್ಲಿರುವ ರಾಜ್ಯಪಾಲರಿಗೆ ಮಾಡಿರುವ ಅವಮಾನ ಎಂದು ಹೇಳಿದ್ದಾರೆ. ಅತ್ಯಂತ ಹಿರಿಯ ಶಾಸಕ ಬಿ.ಕೆ. ಹರಿಪ್ರಸಾದ್ ಅವರ ವರ್ತನೆ ಕಾಂಗ್ರೆಸ್ ಪಕ್ಷದ ಮನಃಸ್ಥಿತಿಯನ್ನು ತೋರಿಸುತ್ತದೆ. ಅವರ ವಿರುದ್ಧ ಕ್ರಮ ಜರುಗಿಸುವುದು ಅತ್ಯಂತ ಅವಶ್ಯಕ. ಈ ಹಿಂದೆ ಹಂಸರಾಜ ಭಾರದ್ವಾಜ್ ಅವರು ರಾಜ್ಯಪಾಲರಾಗಿದ್ದಾಗ ಹಲವಾರು ವಿಚಾರಗಳಲ್ಲಿ ತಮ್ಮ ಮಿತಿ ಮೀರಿ, ಕಾನೂನು ಮೀರಿ ವರ್ತನೆ ಮಾಡಿರುವ ಉದಾಹರಣೆ ಸಾಕಷ್ಟು ಇವೆ.ಅಂದಿನ ರಾಜಭವನ ಕಾಂಗ್ರೆಸ್ ಭವನ ಆಗಿದ್ದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮರೆತರೇ? ಎಂದು ಅವರು ಪ್ರಶ್ನಿಸಿದ್ದಾರೆ.

## ಹಿಂದೂ ವಿರೋಧಿ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯುವ ದಿನ ಬಹಳ ದೂರವಿಲ್ಲ

• ಉದಯವಾಹಿನಿ, ಬೆಂಗಳೂರು

ಹಿಂದೂ ವಿರೋಧಿ ಕಾಂಗ್ರೆಸ್ ಸರ್ಕಾರವನ್ನು ಸ್ವಾಭಿಮಾನಿ ಕನ್ನಡಿಗರು ಕಿತ್ತೊಗೆಯುವ ದಿನ ಬಹಳ ದೂರವಿಲ್ಲ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಕಿಡಿಕಾರಿದ್ದಾರೆ. ಚಿಕ್ಕಮಗಳೂರು ಜಿಲ್ಲೆ ತರೀಕೆರೆ ಪಟ್ಟಣದಲ್ಲಿ ಹಿಂದೂ ಸಮಾಜೋತ್ಸವ ಕಾರ್ಯಕ್ರಮಕ್ಕೆ ನಿರ್ಬಂಧ ಹಾಕಿರುವ ಸರ್ಕಾರದ ವಿರುದ್ಧ ತಮ್ಮ ಸಾಮಾಜಿಕ ಜಾಲ ತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿ ಆಕ್ರೋಶ ಹೊರಹಾಕಿರುವ ಅವರು, ಕರ್ನಾಟಕದಲ್ಲಿರುವುದು ಪ್ರಜಾಪ್ರಭುತ್ವಾನಾ? ಪೊಲೀಸ್ ರಾಜ್ಯಾನಾ? ರಾಜ್ಯಪಾಲರ ಅಂಕಿತ ಬೀಳದೆ, ಸರ್ಕಾರದ ಗೆಜೆಟ್‌ನಲ್ಲಿ ಅಧಿಕತವಾಗಿ ಪ್ರಕಟಗೊಳ್ಳದೆ ಒಂದು ಮಸೂದೆ ಕಾನೂನಾಗುವುದಿಲ್ಲ ಎನ್ನುವ ಕನಿಷ್ಠ ಜ್ಞಾನ ಸ್ವಯಂಘೋಷಿತ ಸಂವಿಧಾನ ತಜ್ಞರು, ವಕೀಲರೂ ಆಗಿರುವ ಸಿಎಂ ಸಿದ್ದರಾಮಯ್ಯ ಅವರಿಗೆ ಇಲ್ಲವೇ? ಎಂದು ಪ್ರಶ್ನಿಸಿದ್ದಾರೆ. ಇನ್ನೂ ಅಧಿಕೃತವಾಗಿ ಜಾರಿಯೇ ಆಗದ ಒಂದು ಮಸೂದೆಯನ್ನು ಉಲ್ಲೇಖಿಸಿ ಪೊಲೀಸರು ವಿಪಕ್ಷದ ಕಾರ್ಯಕರ್ತರಿಗೆ ಬೆದರಿಕೆ ಹಾಕುತ್ತಾರೆ ಎಂದರೆ ರಾಜ್ಯದಲ್ಲಿ ಪೊಲೀಸ್ ಕಚೇರಿಗಳು ಹೇಗೆ ಕಾಂಗ್ರೆಸ್ ಪಕ್ಷದ ಕಚೇರಿಗಳಾಗಿ ಮಾರ್ಪಟ್ಟಿವೆ ಎನ್ನುವುದಕ್ಕೆ ಸ್ಪಷ್ಟ ನಿದರ್ಶನವಾಗಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. ಕೇಸರಿ, ಕುಂಕುಮ ಎಂದರೆ ದ್ವೇಷ ಕಾರುವ ಕಾಂಗ್ರೆಸ್ ಪಕ್ಷ, ಹಿಂದೂಗಳ, ಹಿಂದೂ ಧರ್ಮದ ಬಗ್ಗೆ ಎಷ್ಟು ಪೂರ್ವಗ್ರಹ ಪೀಡಿತವಾಗಿದೆ ಎಂದರೆ ರಾಜ್ಯದಲ್ಲಿ ಮುಕ್ತವಾಗಿ ಗಣೇಶ ವಿಸರ್ಜನೆ ಮೆರವಣಿಗೆ ಮಾಡುವುದು ತಪ್ಪು, ಶೋಭಾಯಾತ್ರೆ, ಹಿಂದೂ ಸಮಾಜೋತ್ಸವ ಮಾಡುವುದೂ ತಪ್ಪು ಎನ್ನುವ ಪರಿಸ್ಥಿತಿ ತಂದಿಟ್ಟಿದೆ ಎಂದು ಟೀಕಿಸಿದ್ದಾರೆ.

## ಸ್ಕೂಟಿಗೆ ಕಾರು ಡಿಕ್ಕಿಯಾಗಿ ತಾಯಿ ಸಾವು

• ಉದಯವಾಹಿನಿ, ಬೆಂಗಳೂರು

ಸ್ಕೂಟಿಯಲ್ಲಿ ತಾಯಿಯನ್ನು ಕರೆದುಕೊಂಡು ಮಗಳು ಹೋಗುತ್ತಿದ್ದಾಗ ಕಾರು ತಾಗಿದ ಪರಿಣಾಮ ನಿಯಂತ್ರಣ ತಪ್ಪಿ, ಕೆಳಗೆ ಬಿದ್ದ ತಾಯಿ ಮೇಲೆಯೇ ಕಾರು ಹರಿದ ಪರಿಣಾಮ ಮೃತಪಟ್ಟಿರುವ ಘಟನೆ ಬಾಣಸವಾಡಿ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಬಾಬೂಸಾಬ್ ಪಾಳ್ಯದ ನಿವಾಸಿ ಅರುಣಾ (42) ಮೃತಪಟ್ಟ ಮಹಿಳೆ. ಮಗಳು ನಂದಿನಿ ಸಣ್ಣ ಪುಟ್ಟ ಗಾಯಗೊಂಡು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ನಂದಿನಿ ಸಾಫ್ಟ್‌ವೇರ್ ಇಂಜಿನಿಯರ್ ಆಗಿದ್ದರೆ, ಅರುಣಾ ಅವರು ಗೃಹಿಣಿ. ಸಂಜೆ 3.30ರ ಸಮಾರಿನಲ್ಲಿ ತಾಯಿಯನ್ನು ದ್ವಿಚಕ್ರ ವಾಹನದಲ್ಲಿ ಕರೆದುಕೊಂಡು ಹೆಬ್ಬಾಳಕ್ಕೆ ನಂದಿನಿ ಹೋಗುತ್ತಿದ್ದರು. ರಿಂಗ್ ರಸ್ತೆಯ ಹೆಣ್ಣೂರು ಜಂಕ್ಷನ್ ಅಂಡರ್ ಪಾಸ್‌ನಲ್ಲಿ ಹೋಗುತ್ತಿದ್ದಾಗ ಪಕ್ಕದಲ್ಲಿ ವೇಗವಾಗಿ ಬಂದ ಕಾರು ಇವರ ಸ್ಕೂಟರ್‌ಗೆ ತಾಗಿದೆ. ಪರಿಣಾಮ ನಿಯಂತ್ರಣ ತಪ್ಪಿ ತಾಯಿ-ಮಗಳು ಇಬ್ಬರೂ ಬಿದ್ದಿದ್ದಾರೆ. ಆ ಸಂದರ್ಭದಲ್ಲಿ ಕಾರು ಅರುಣಾ ಅವರ ಮೇಲೆ ಹರಿದ ಪರಿಣಾಮ ಗಂಭೀರ ಗಾಯಗೊಂಡು ಮೃತಪಟ್ಟಿದ್ದಾರೆ. ಸುದ್ದಿ ತಿಳಿದು ಬಾಣಸವಾಡಿ ಸಂಚಾರಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ, ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ. ಅರುಣಾ ಅವರ ಮೃತದೇಹವನ್ನು ಅಂಬೇಡ್ಕರ್‌ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆಗೊಳಪಡಿಸಿ, ನಂತರ ವಾರಸುದಾರರಿಗೆ ಹಸ್ತಾಂತರಿಸಲಾಗಿದೆ.

## ಸಂಚಾರ ನಿಯಮ ಉಲ್ಲಂಘನೆ 8.941 ಪ್ರಕರಣ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ಸಂಚಾರ ನಿಯಮ ಪಾಲನೆ ಹಾಗೂ ಏಕಮುಖ ರಸ್ತೆ ಸಂಚಾರ ಮಾಡಿದ್ದವರ ವಿರುದ್ಧ ಟ್ರಾಫಿಕ್ ಪೊಲೀಸರು ವಿಶೇಷ ಕಾರ್ಯಾಚರಣೆ ನಡೆಸಿ, 8,941 ಪ್ರಕರಣ ದಾಖಲಿಸಿದ್ದಾರೆ. ಸಾರ್ವಜನಿಕ ಸುರಕ್ಷತಾ ಸಂಚಾರ ಗಮನದಲ್ಲಿಟ್ಟುಕೊಂಡು ಜ. 21, 22, 23 ರಂದು ವಿವಿಧ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಕಾರ್ಯಾಚರಣೆ ನಡೆಸಿ, ವಾಹನ ಸವಾರರಿಗೆ ದಂಡ ಹಾಕಿದ್ದಾರೆ. ಬೆಳಿಗ್ಗೆ 7 ರಿಂದ 10ರವರೆಗೆ ನಡೆಸಿದ್ದ ತಪಾಸಣಾ ಸಂದರ್ಭದಲ್ಲಿ 26 ಶಾಲಾ ವಾಹನ ಚಾಲಕರ ವಿರುದ್ಧ ಐಎಂವಿ ಕಾಯ್ದೆಯಡಿ ಪ್ರಕರಣ ದಾಖಲಿಸಿದ್ದಾರೆ. 5,110 ಶಾಲಾ ವಾಹನಗಳ ತಪಾಸಣೆ ನಡೆಸಿದ್ದಾರೆ. ಕುಡಿದು ವಾಹನ ಚಾಲನೆ ಮಾಡುತ್ತಿದ್ದ ಚಾಲಕರ ಪರವಾನಗಿ ರದ್ದುಪಡಿಸಲು ಆರ್‌ಟಿಒ ಅಧಿಕಾರಿಗಳಿಗೆ ಪತ್ರ ಬರೆಯಲಾಗಿದ ಎಂದು ಪೊಲೀಸರು ತಿಳಿಸಿದ್ದಾರೆ.

# ಎಲ್ಲಾ ಸಿಟಿಗಳಲ್ಲಿಯೂ ಸಂಚಾರಿ ಗ್ರಿಡ್ ರೂಪಿಸಲು ತೀರ್ಮಾನ

### ದಾವೋಸ್‌ನಲ್ಲಿ 45ಕ್ಕೂ ಹೆಚ್ಚು ಕಂಪನಿಗಳ ಜತೆ ಹೂಡಿಕೆ ಬಗ್ಗೆ ಚರ್ಚೆ; ದಾವೋಸ್ ಹೂಡಿಕೆ ಒಪ್ಪಂದಗಳಿಗೆ ರಾಜ್ಯದಲ್ಲಿಯೇ ಸಹಿ

• ಉದಯವಾಹಿನಿ, ಬೆಂಗಳೂರು

ಮುಂದಿನ 25 ವರ್ಷಗಳಲ್ಲಿ ಆಗಲಿರುವ ಪ್ರಗತಿಯನ್ನು ಗಮನದಲ್ಲಿ ಇಟ್ಟುಕೊಂಡು ರಾಜ್ಯದ ಎಲ್ಲಾ ನಗರಗಳಲ್ಲೂ ಸಂಚಾರಿ ಗ್ರಿಡ್ ರೂಪಿಸಲು ಚಿಂತನೆ ನಡೆಸಲಾಗಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ತಿಳಿಸಿದರು.

**ವಿದೇಶಿ ಕಂಪನಿಗಳಿಗೆ ಆಸಕ್ತಿ**


ದಾವೋಸ್ ವಿಶ್ವ ಆರ್ಥಿಕ ವೇದಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಿ ವಾಪಸ್ಸಾದ ಬಳಿಕ ವಿಧಾನಸೌಧದಲ್ಲಿ ಮಾಧ್ಯಮ ಗೋಷ್ಠಿಯನ್ನು ಉದ್ದೇಶಿಸಿ ಶಿವಕುಮಾರ್ ಅವರು ಭಾನುವಾರ ಮಾತನಾಡಿದರು.

ದಾವೋಸ್‌ಕಾರ್ಯಕ್ರಮದಲ್ಲಿ ಕೆಲವು ಕಂಪನಿಗಳು ಕರ್ನಾಟಕದ 2 - 3ನೇ ಹಂತದ ನಗರಗಳ ಬಗ್ಗೆಯೂ ಆಸಕ್ತಿ ಹೊಂದಿದ್ದು, ಈ ನಗರಗಳು ಪ್ರಕಾಶಮಾನವಾಗಿ, ಯುವ ಪ್ರತಿಭೆಗಳನ್ನು ಹೊಂದಿರಬೇಕು ಎಂದು ಚರ್ಚೆ ಮಾಡಿದ್ದಾರೆ. ಇಡೀ ರಾಜ್ಯದಲ್ಲಿ ಎಲ್ಲಾ ನಗರ ಪ್ರದೇಶಗಳಿಗೆ ಸಂಚಾರ ಯೋಜನೆ ರೂಪಿಸಬೇಕು ಎಂದು ತಿಳಿಸಿದರು.

**45ಕ್ಕೂ ಹೆಚ್ಚು ಕಂಪನಿಗಳ ಜೊತೆ ಹೂಡಿಕೆ ಬಗ್ಗೆ ಚರ್ಚೆ:** ದಾವೋಸ್ ಕಾರ್ಯಕ್ರಮದಲ್ಲಿ ಡಾಟಾ ಸೆಂಟರ್, ಗ್ಲೋಬಲ್ ಕೇಪಬಲ್ ಸೆಂಟರ್, ಆಹಾರ, ಪಾನೀಯ, ಏವಿಯೇಷನ್, ನವೀಕೃತ ಇಂಧನ, ಇವಿ, ಎಲೆಕ್ಟ್ರಾನಿಕ್ಸ್, ಅಡ್ವಾನ್ಸ್

ಉದಯವಾಹಿನಿ ಚಿತ್ರ





ಮ್ಯಾನ್ಯುಫ್ಯಾಕ್ಚರ್ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸುಮಾರು 45ಕ್ಕೂ ಹೆಚ್ಚು ಕಂಪನಿಗಳ ಜೊತೆ ದ್ವಿಪಕ್ಷೀಯ ಮಾತುಕತೆ ನಡೆಸಲಾಗಿದೆ. ನಮ್ಮಲ್ಲಿ ಲಭ್ಯವಿರುವ ನೀರು, ವಿದ್ಯುತ್ ಪ್ರಮಾಣ ಸೇರಿದಂತೆ ಎಲ್ಲಾ ಅಗತ್ಯ ಮಾಹಿತಿಗಳನ್ನು ಕಂಪನಿಗಳು ಪಡೆದಿವೆ.

ಹೊರ ದೇಶಗಳಲ್ಲಿ ಉದ್ಯಮ ಮಾಡುತ್ತಿರುವ ಅನಿವಾಸಿ ಭಾರತೀಯರು ಕೂಡ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಅವರುಗಳು ಕೂಡ ನಮ್ಮ ಕೈಗಾರಿಕ ಸಚಿವರಾದ ಎಂ.ಬಿ ಪಾಟೀಲ್ ಅವರನ್ನು ಭೇಟಿ ಮಾಡಿದ್ದಾರೆ ಎಂದು ವಿವರಿಸಿದರು.

ಈ ಬಾರಿಯ ಕಾರ್ಯಕ್ರಮದಲ್ಲಿ ನಮ್ಮ ರಾಜ್ಯದಲ್ಲಿ ಹೂಡಿಕೆ ಮಾಡುವ ಕಂಪನಿಗಳ ಜೊತೆಗಿನ ಒಪ್ಪಂದಕ್ಕೆ ಅಲ್ಲಿ ಸಹಿ ಹಾಕುವುದು ಬೇಡ ಎಂದು ನಿರ್ಧರಿಸಿದ್ದೇವೆ. ಹೊರ ದೇಶಗಳ ಕಂಪನಿಗಳು

**ಎಲ್ಲಾ ನಗರಗಳಲ್ಲಿ ವರ್ತುಲ ರಸ್ತೆಗಳಿಗೆ ಯೋಜನೆ**

ಮುಂದಿನ 25 ವರ್ಷಕ್ಕೆ ಅಗತ್ಯವಿರುವ ಸಂಚಾರಿ ಮಾರ್ಗದ ಯೋಜನೆ ರೂಪಿಸಬೇಕು. ಎಲ್ಲಾ ನಗರ ಪ್ರದೇಶಗಳಲ್ಲಿ ವರ್ತುಲ ರಸ್ತೆಗಳಿಗೆ ಯೋಜನೆ ರೂಪಿಸಬೇಕು ಎಂದು ಅಧಿಕಾರಿಗಳ ಜೊತೆ ಚರ್ಚೆ ನಡೆಸಲಾಗಿದೆ. ಸಮಯವೇ ಹಣ, ಯಾರೂ ಸಹ ಸಮಯ ವ್ಯರ್ಥ ಮಾಡಿಕೊಳ್ಳಲು ಬಯಸುವುದಿಲ್ಲ. ಹೀಗಾಗಿ ನಾವು ಈಗಿನಿಂದಲೇ ಯೋಜನೆ ರೂಪಿಸಬೇಕಿದೆ. ಈ ಬಗ್ಗೆ ನಾನು, ನಗರಾಭಿವೃದ್ಧಿ ಸಚಿವರು, ಗ್ರಾಮೀಣಾಭಿವೃದ್ಧಿ ಸಚಿವರು, ಪೌರಾಡಳಿತ ಸಚಿವರು ಸಭೆ ಸೇರಿ, ನಗರ ಯೋಜನೆಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ ಎಂದು ತಿಳಿಸಿದರು.

**ಎಐ ಸಿಟಿಗೆ ಅನೇಕರು ಉತ್ಸುಕ**

ಬಿಡದಿಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ಎಐ ಸಿಟಿಗೆ ಅನೇಕರು ಉತ್ಸುಕರಾಗಿದ್ದಾರೆ. ಈ ಯೋಜನೆಗೆ ಅನೇಕರು ವಿರೋಧ ವ್ಯಕ್ತಪಡಿಸುತ್ತಿರಬಹುದು. ಕೆಲವರು ಕೆಲವು ರೈತರಿಂದ ಇದಕ್ಕೆ ವಿರೋಧವಿದೆ ಎನ್ನುವಂತೆ ಮಾಡುತ್ತಿದ್ದಾರೆ. ಅವರಿಗೆ ಒಂದು ಮಾತು ಹೇಳುತ್ತೇನೆ. ರೈತರು ತಾವಾಗಿಯೇ ಜಮೀನು ಬಿಟ್ಟುಕೊಡುವಾಗ ಈ ಅಭಿವೃದ್ಧಿಯನ್ನು ನಿಲ್ಲಿಸಲು ಯಾರಿಂದಲೂ ಸಾಧ್ಯವಿಲ್ಲ. ಬೆಂಗಳೂರು ಬಿಜಿನೆಸ್ ಕಾರಿಡಾರ್ ಯೋಜನೆಯ ಭೂಸಂತ್ರಸ್ತ ರೈತರಿಗೆ ನಾವು ನೀಡಿರುವ ಪರಿಹಾರದ ಅವಕಾಶವನ್ನು ದೇಶದ ಇತರೆ ಯಾವುದೇ ಭಾಗದಲ್ಲಿ ನೀಡಲು ಸಾಧ್ಯವಾಗಿಲ್ಲ ಎಂದರು.

ಇಲ್ಲಿಗೆ ಬಂದು, ಇಲ್ಲಿನ ವಾತಾವರಣ, ಯುವ ಪ್ರತಿಭೆ, ಇಲ್ಲಿನ ಸೌಲಭ್ಯ, ಇಂಧನ, ನೀರಿನ ಸೌಲಭ್ಯ ಗಮನಿಸಬೇಕು. ಇನ್ನು ನಮ್ಮ ರಾಜ್ಯದ ಉದ್ಯಮಿಗಳು ಕೂಡ ಅಲ್ಲಿಗೆ ಬಂದು ತಮ್ಮ ಉದ್ಯಮ ವಿಸ್ತರಣೆಗೆ ತಮ್ಮ ಆಲೋಚನೆ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ 11 ಲಕ್ಷ ಕೋಟಿಯಷ್ಟು ಬಂಡವಾಳ ಹೂಡಿಕೆ ಪ್ರಸ್ತಾವನೆ ಬಂದಿದ್ದು, ಇದರಲ್ಲಿ 50% ನಷ್ಟು ಹೂಡಿಕೆ ಕಾರ್ಯಗತಗೊಳ್ಳುತ್ತಿದೆ. ಹೀಗಾಗಿ ದಾವೋಸ್‌ನಲ್ಲಿ ಒಪ್ಪಂದಕ್ಕೆ ಸಹಿ ಹಾಕದೇ, ಇಲ್ಲೇ ಸಹಿ ಹಾಕಲು ತೀರ್ಮಾನಿಸಿದ್ದೇವೆ ಎಂದು ತಿಳಿಸಿದರು. ನಮ್ಮ ರಾಜ್ಯದಲ್ಲಿ ಆ್ಯಪಲ್ ಫೋನ್ ತಯಾರಿಸಲು ಫಾಕ್ಸ್‌ಕಾನ್ ಕಂಪನಿಗೆ ಜಾಗ ನೀಡಿರುವ ಬಗ್ಗೆ, ಅಲ್ಲಿ 30 ಸಾವಿರ ಜನ ಉದ್ಯೋಗ ಮಾಡುತ್ತಿರುವ ಬಗ್ಗೆ ಅವರು ಗಮನಹರಿಸಿದ್ದಾರೆ. ಚೀನಾ ಹೊರತುಪಡಿಸಿದರೆ, ಭಾರತದ ದಕ್ಷಿಣದ ರಾಜ್ಯಗಳಲ್ಲಿ ಕೆಲಸ ಮಾಡಲು ಉತ್ತಮ ವಾತಾವರಣವಿದೆ ಎಂದು ಅನೇಕ ಉದ್ಯಮಿಗಳು ಭಾವಿಸಿದ್ದಾರೆ.

## ಸರ್ಕಾರಿ ಅಧಿಕಾರಿಗಳಿಗೆ ರಾಜ್ಯ ಸರ್ಕಾರ ಶಾಕ್

• ಉದಯವಾಹಿನಿ, ಬೆಂಗಳೂರು

ಅಧಿಕಾರಿಗಳು ಜನಪ್ರತಿನಿಧಿಗಳ ದೂರವಾಣಿ ಕರೆಯನ್ನು ಸ್ವೀಕರಿಸಲೇಬೇಕು ಎಂಬ ಸುತ್ತೋಲೆಯನ್ನು ಹೊರಡಿಸುವ ಮೂಲಕ ಸರ್ಕಾರಿ ಅಧಿಕಾರಿಗಳಿಗೆ ರಾಜ್ಯ ಸರ್ಕಾರ ಶಾಕ್ ನೀಡಿದೆ. ಸರ್ಕಾರಿ ಅಧಿಕಾರಿಗಳು ಜನಪ್ರತಿನಿಧಿಗಳ ದೂರವಾಣಿ ಕರೆಗಳನ್ನು ಸ್ವೀಕರಿಸದೆ ಇರುವ ಬಗ್ಗೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಸುತ್ತೋಲೆಯೊಂದನ್ನು ಹೊರಡಿಸಿದ್ದಾರೆ.

ಶಾಸಕರು, ಪರಿಷತ್ ಸದಸ್ಯರ, ಸಂಸದರ ಕರೆ ಸ್ವೀಕರಿಸುವ ಸಂಬಂಧ ಸರ್ಕಾರಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ ಎನ್ನಲಾಗಿದೆ. ಸರ್ಕಾರಿ ಅಧಿಕಾರಿಗಳು ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರ ದೂರವಾಣಿ ಕರೆಗಳನ್ನು ಸ್ವೀಕರಿಸದೆ ಇರುವುದು, ಮರಳಿ ಕರೆ ಮಾಡದೇ ಇರುವ ಬಗ್ಗೆ ಕರ್ನಾಟಕ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಮಹತ್ವದ ಸೂಚನೆಯೊಂದನ್ನು ನೀಡಿದ್ದಾರೆ. ಈ ವಿಚಾರವಾಗಿ ಸುತ್ತೋಲೆ ಹೊರಡಿಸಿರುವ ಅವರು,



ಜನಪ್ರತಿನಿಧಿಗಳ ಫೋನ್ ಕರೆ ಸ್ವೀಕರಿಸುವುದು ಕಡ್ಡಾಯ

ಇನ್ನು ಮುಂದೆ ಎಲ್ಲಾ ಸರ್ಕಾರಿ ಅಧಿಕಾರಿಗಳು ಎಂಎಲ್ಎಗಳ ಮತ್ತು ಎಂಎಲ್‌ಸಿಗಳ ದೂರವಾಣಿ ಕರೆಗಳನ್ನು ಸ್ವೀಕರಿಸಲೇಬೇಕು. ಒಂದು ವೇಳೆ ಕರೆ ಬಂದಾಗ ಇತರ ಕೆಲಸಗಳಲ್ಲಿ ನಿರತರಾಗಿದ್ದಲ್ಲಿ, ಮರಳಿ ಕರೆ ಮಾಡಿ ಮಾತನಾಡಬೇಕು ಎಂದು ಸೂಚನೆ ನೀಡಿದ್ದಾರೆ ಎಂದು ತಿಳಿದುಬಂದಿದೆ.

ರಾಜ್ಯದ ವಿವಿಧ ಭಾಗಗಳಿಂದ ಸಾರ್ವಜನಿಕರು ಅವರ ಸಮಸ್ಯೆ, ಕುಂದು ಕೊರತೆಗಳನ್ನು ಪರಿಹರಿಸಿಕೊಳ್ಳುವ ಉದ್ದೇಶದಿಂದ ವಿಧಾನಸಭಾ, ಪರಿಷತ್ತಿನ ಸದಸ್ಯರಿಗೆ ವಿನಂತಿಸಿಕೊಂಡಾಗ ಸಂಬಂಧಿಸಿದ ಅಧಿಕಾರಿಗಳಿಗೆ ಕರೆ ಮಾಡಬೇಕಾಗುತ್ತದೆ. ಅಂತಹ ಸಂದರ್ಭಗಳಲ್ಲಿ ಜನಪ್ರತಿನಿಧಿಗಳ ಕರೆಗಳನ್ನು ಕೆಲವು ಅಧಿಕಾರಿಗಳು ಸ್ವೀಕರಿಸದೇ ಇರುವುದು, ಒಂದು ವೇಳೆ ಆ ಸಮಯದಲ್ಲಿ ತುರ್ತು ಕಾರ್ಯದಲ್ಲಿ ನಿರತರಾಗಿದ್ದಲ್ಲಿ ತದನಂತರ ಸೌಜನ್ಯಕ್ಕಾದರೂ ಮರು ಕರೆ ಮಾಡದಿರುವುದು ನನ್ನ ಗಮನಕ್ಕೆ ಬಂದಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಪತ್ರ ಬರೆದಿದ್ದಾರೆ.


ಈ ಹಿನ್ನೆಲೆಯಲ್ಲಿ ಇನ್ಮುಂದೆ ಎಲ್ಲಾ ಅಧಿಕಾರಿಗಳು ಜನಪ್ರತಿನಿಧಿಗಳಾದ ವಿಧಾನಸಭಾ, ಪರಿಷತ್ತಿನ ಸದಸ್ಯರು, ಸಂಸದರ ದೂರವಾಣಿ ಸಂಖ್ಯೆಯನ್ನು ತಮ ಬಳಿ ಕಡ್ಡಾಯವಾಗಿ ಇಟ್ಟುಕೊಳ್ಳಬೇಕು ಎಂದು ಸೂಚಿಸಲಾಗಿದೆ. ಅವರು ಕರೆ ಮಾಡಿದಾಗ ಕರೆಯನ್ನು ಸ್ವೀಕರಿಸುವುದು, ಒಂದು ವೇಳೆ ಅನ್ಯ ಕರ್ತವ್ಯದಲ್ಲಿ ನಿರತರಾಗಿದ್ದಲ್ಲಿ ಕರ್ತವ್ಯ ಮುಗಿದ ನಂತರ ಮರು ಕರೆಯನ್ನು ಮಾಡಬೇಕು ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸುತ್ತೋಲೆ ಹೊರಡಿಸಿದ್ದಾರೆ.

## ಸಿಎಂ ಭರವಸೆ: ಆಮರಣಾಂತ ಉಪವಾಸ ಅಂತ್ಯ

• ಉದಯವಾಹಿನಿ, ದೊಡ್ಡಬಳ್ಳಾಪುರ

ಒಳಚರಂಡಿ ನೀರು ಶುದ್ಧೀಕರಣ ಘಟಕ ಸ್ಥಾಪನೆಗೆ ಮುಖ್ಯಮಂತ್ರಿಯಿಂದ ಭರವಸೆ ಸಿಕ್ಕ ಹಿನ್ನೆಲೆಯಲ್ಲಿ ತಾಲ್ಲೂಕು ಕಚೇರಿ ಮುಂದೆ ಮೂರು ದಿನಗಳಿಂದ ನಡೆಯುತ್ತಿದ್ದ ಅಮರಣಾಂತ ಉಪವಾಸ ಸತ್ಯಾಗ್ರಹ ಮಧ್ಯಾಹ್ನ ತಹಶೀಲ್ದಾರ್ ಡಾ.ಮಲ್ಲಪ್ಪ ಕೆ.ಯರಗೋಳ ಅವರು ಸತ್ಯಾಗ್ರಹಿಗಳಿಗೆ ಎಳನೀರು ಕುಡಿಸುವ ಮೂಲಕ ಅಂತ್ಯಗೊಳಿಸಿದರು.

ಒಳಚರಂಡಿ ನೀರು ಶುದ್ಧೀಕರಿಸಿ ಬಿಡುವ ಸಲುವಾಗಿ ಎಸ್‌ಟಿಪಿ ಘಟಕ ಸ್ಥಾಪಿಸಬೇಕೆಂದು ಒತ್ತಾಯಿಸಿ ಅರ್ಕಾವತಿ ನದಿ ಪಾತ್ರದ ಕೆರೆ ಸಂರಕ್ಷಣೆ ವೇದಿಕೆ ಹಾಗೂ ದೊಡ್ಡತುಮಕೂರು, ಮಜರಾಹೊಸಹಳ್ಳಿ ಗ್ರಾಮ ಪಂಚಾಯಿತಿ ಕೆರೆ ಹೋರಾಟ ಸಮಿತಿ ನೇತೃತ್ವದಲ್ಲಿ ಮೂರು ದಿನಗಳಿಂದ ತಾಲ್ಲೂಕು ಕಚೇರಿ ಮುಂದೆ ಆಮರಣಾಂತ ಉಪವಾಸ ಸತ್ಯಾಗ್ರಹ ನಡೆಸಲಾಗುತ್ತಿತ್ತು ರಾತ್ರಿ ಅಸ್ವಸ್ಥರಾಗಿದ್ದ ಹೋರಾಟಗಾರರಿಗೆ ಆರೋಗ್ಯ ತಪಾಸಣೆ ನಡೆಸಲಾಗಿತ್ತು. ನಮಗೆ ಇಲ್ಲಿನ ಯಾವುದೇ ಅಧಿಕಾರಿಗಳ ಭರವಸೆ ಬೇಡ. ಎಸ್‌ಟಿಪಿ ಘಟಕಕ್ಕೆ 57ಕೋಟಿ ಮಂಜೂರು ಮಾಡುವ ಸರ್ಕಾರದ ಕಾರ್ಯದರ್ಶಿ ಇಲ್ಲಿಗೆ ಬಂದು ಉತ್ತರ ನೀಡುವವರೆಗೂ ಹೋರಾಟ ಮುಂದುವರಿಯಲಿದೆ ಎಂದು ಉಪವಾಸ ಕೈಬಿಡಿ ಎಂದು ಭರವಸೆ ನೀಡಲು ಬಂದ ಅಧಿಕಾರಿಗಳಿಗೆ ಪ್ರತಿಭಟನಾಕಾರರು ಪ್ರತ್ಯುತ್ತರ ನೀಡಿದ್ದರು.



ಉದಯವಾಹಿನಿ ಚಿತ್ರ

## ತಿಂಗಳೊಳಗೆ ಕಿತ್ತು ಬಂದ ರಸ್ತೆ

• ಉದಯವಾಹಿನಿ, ದೇವನಹಳ್ಳಿ

ಪಟ್ಟಣದ 5ನೇ ವಾರ್ಡ್‌ನ ಮಾರುತಿ ನಗರದಲ್ಲಿ ಹೊಸದಾಗಿ ನಿರ್ಮಾಣಗೊಂಡಿರುವ 30ಲಕ್ಷ ವೆಚ್ಚದ ಕಾಂಕ್ರೀಟ್ ರಸ್ತೆಯು ಸಂಪೂರ್ಣ ಕಳಪೆಯಾಗಿದೆ ಎಂದು ಸ್ಥಳೀಯ ನಿವಾಸಿಗಳು ಆರೋಪಿಸಿದ್ದಾರೆ. ಕಾಮಗಾರಿ ಮುಗಿದು 20 ದಿನ ಕಳೆಯುವುದರ ಒಳಗೆ ರಸ್ತೆಯುದ್ದಕ್ಕೂ ಜಲ್ಲಿ ಕಲ್ಲು, ಮರಳು ಮೇಲೆ ಕಾಣಿಸಿಕೊಂಡಿದೆ. ಇದರಿಂದ ಪಾದಾಚಾರಿಗಳ ಸಂಚಾರಕ್ಕೆ ತೊಂದರೆ ಆಗಿದೆ. ಈ ರಸ್ತೆಯಲ್ಲಿ ಸಾಗುವ ವಾಹನಗಳ ಹಿಂದೆ ಬರುವ ದೂಳಿಗೆ ಸ್ಥಳೀಯ ನಿವಾಸಿಗಳು ಹೈರಾಣಾಗಿದ್ದಾರೆ.

ಅನೇಕ ವರ್ಷಗಳಿಂದ ರಸ್ತೆಯು ಡಾಂಬರೀಕರಣ ಕಾಣದೆ ದೊಡ್ಡ ದೊಡ್ಡ ಗುಂಡಿಗಳಿಂದ ಸಂಚಾರಕ್ಕೆ ಸಂಕಷ್ಟ ಅನುಭವಿಸುವಂತಾಗಿತ್ತು. ಈಗ ಹೊಸ ರಸ್ತೆ ನಿರ್ಮಾಣದಿಂದ ಸಂತೋಷವಾಗಿತ್ತು.ಆದರೆ, ಕಳಪೆ ಕಾಮಗಾರಿ ನಡೆದಿರುವುದು ನೋಡಿದರೆ ಈ ಹೊಸ ರಸ್ತೆ ಬಹಳ ದಿನಗಳ ಬಾಳಿಕೆ ಬರುವುದಿಲ್ಲ ಎಂದು ಗುತ್ತಿಗೆದಾರನ ವಿರುದ್ಧ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಶಾಸಕರ ಅನುದಾನದಡಿ ಕಾಂಕ್ರೀಟ್ ರಸ್ತೆ ಕಾಮಗಾರಿ ನಡೆಸಲಾಗುತ್ತಿದೆ ಎಂದು ಹೇಳಲಾಗುತ್ತಿದೆ. ಆದರೆ,

ಉದಯವಾಹಿನಿ ಚಿತ್ರ



ಗುತ್ತಿಗೆದಾರನ ನಿರ್ಲಕ್ಷ್ಯದಿಂದ ಇಡೀ ರಸ್ತೆ ಕಳಪೆ ಗುಣಮಟ್ಟದಿಂದ ಕೂಡಿದೆ ಎಂದು ಹೆಸರು ಹೇಳದ ಸ್ಥಳೀಯ ನಿವಾಸಿಯೊಬ್ಬರು ಆರೋಪಿಸಿದರು. ರಸ್ತೆ ಕಳಪೆ ಗುಣಮಟ್ಟದ ಕುರಿತು ವಾರ್ಡ್ ಪುರಸಭೆ ಸದಸ್ಯ ರಾಜಣ್ಣಗೆ ಕರೆ ಮಾಡಿ ವಿಚಾರಿಸಿದರೆ, ಮೊದಲಿಗೆ ಸಚಿವರ ಜತೆ ಇರುವ ಮಹೇಶ್ ಅವರು ಸ್ವಂತ ಖರ್ಚಿನಿಂದ ರಸ್ತೆ ಅಭಿವೃದ್ಧಿಪಡಿಸುತ್ತಿದ್ದಾರೆ ಎಂದರು. ನಂತರ ಶಾಸಕರ ಅನುದಾಡಿ ರಸ್ತೆ ಮಾಡಲಾಗುತ್ತಿದೆ ಎಂಬ ಗೊಂದಲ ಹೇಳಿಕೆ ನೀಡಿದರು.

ರಸ್ತೆ ಕಳಪೆಯಿಂದ ಕೂಡಿಲ್ಲ. ಯಾವುದೇ ಸಮಸ್ಯೆ ಇಲ್ಲ. ವಿರೋಧಿಗಳು ಬೇಕಂತಲೇ ಅಪಪ್ರಚಾರ ಮಾಡಲು ತಪ್ಪು ಮಾಹಿತಿ ನೀಡಿದ್ದಾರೆ. ಈ ರಸ್ತೆಯಲ್ಲಿ ದೊಡ್ಡ ಹಳ್ಳಗಳು ಬಿದ್ದಿದ್ದವು. ಈಗ ಆಗಿರುವ ರಸ್ತೆ ಮೇಲೆ 3 ಇಂಚು ಮತ್ತೆ ಕಾಂಕ್ರೀಟ್ ಹಾಕಲಾಗುವುದು ಎಂದು ಹೇಳಿದರು.

## ವಿಪಕ್ಷಗಳಿಗೆ ಮತ್ತೊಂದು ಅಸ್ತ್ರವಾದ ಅಬಕಾರಿ ಇಲಾಖೆಯ ಲಂಚಾವತಾರ

• ಉದಯವಾಹಿನಿ, ಬೆಂಗಳೂರು

ರಾಜ್ಯಪಾಲರ ಭಾಷಣ, ವಿಬಿ -ಜಿ.ರಾಮ್ ಜಿ ವಿವಾದದ ನಡುವೆ ರಾಜ್ಯ ಸರ್ಕಾರಕ್ಕೆ ಮತ್ತೊಂದು ತಲೆನೋವು ಕಾದಿದೆ. ಅಬಕಾರಿ ಇಲಾಖೆಯಲ್ಲಿ ನಡೆದಿದೆ ಎನ್ನಲಾಗಿರುವ ಅಕ್ರಮ ಇದೀಗ ಅಬ್ಕಾರಿ ಸಚಿವ ಆರ್.ಬಿ.ತಿಮಾಪುರ ಅವರಿಗೆ ಸುತ್ತಿಕೊಳ್ಳುವ ಲಕ್ಷಣಗಳು ಗೋಚರಿಸುತ್ತಿವೆ. ಹಾಗಾಗಿ ಇದು ವಿರೋಧ ಪಕ್ಷಗಳಿಗೆ ಸಿಕ್ಕಿರುವ ಬಹುದೊಡ್ಡ ಅಸ್ತ್ರವಾಗಿದೆ. ಈಗಾಗಲೇ ಸದನದಲ್ಲೂ ಈ ಕುರಿತಾದ ಚರ್ಚೆ ಶುರುವಾಗಿದ್ದು, ಸಚಿವರ ರಾಜೀನಾಮೆಗೆ ಪಟ್ಟು ಹಿಡಿಯಲಾಗಿದೆ. ಅಬಕಾರಿ ಇಲಾಖೆಯಲ್ಲಿ 2,500 ಕೋಟಿ ರೂ.ಹಗರಣ ನಡೆದಿದೆ ಎಂದು ಪೆನ್ ಡ್ರೈವ್ ಪ್ರದರ್ಶಿಸಿ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್‌ಗಂಭೀರ ಆರೋಪ ಮಾಡಿದ್ದಾರೆ. ಇದಕ್ಕೆ ಸಂಬಂಧಿಸಿದ ಆಡಿಯೋ ಕೂಡಾ ವೈರಲ್ ಆಗುತ್ತಿದೆ. ಈ ಹಿನ್ನೆಲೆಯಲ್ಲಿ ಆರ್.ಬಿ.ತಿಮ್ಮಾಪುರ ರಾಜೀನಾಮೆ ನೀಡಬೇಕು ಎಂದು ಅವರು ಆಗ್ರಹಿಸಿದ್ದಾರೆ.



ಅಬಕಾರಿ ಇಲಾಖೆಯಲ್ಲಿ ಪರವಾನಗಿಗಳನ್ನು ಹರಾಜು ಹಾಕಲಾಗುತ್ತಿದೆ. ಇದೇ ಸಂದರ್ಭದಲ್ಲಿ ಅಬಕಾರಿ ಉಪ ಆಯುಕ್ತ ಜಗದೀಶ್ ನಾಯಕ್ ಎಂಬವರು 25 ಲಕ್ಷ ರೂ.ಲಂಚ ಪಡೆಯುತ್ತಿದ್ದಾಗ ಲೋಕಾಯುಕ್ತ ಪೊಲೀಸರ ಬಲೆಗೆ ಸಿಕ್ಕಿಬಿದ್ದಿದ್ದಾರೆ.

ಹೀಗಾಗಿ ರಾಜೀನಾಮೆ ನೀಡದೆ ಇದ್ದರೆ, ಸಿಎಂ ಅವರನ್ನೇ ಹೊಣೆಗಾರರನ್ನಾಗಿ ಪರಿಗಣಿಸಬೇಕಾಗುತ್ತದೆ ಎಂದು ಅಶೋಕ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ವಿಧಾನಸಭೆಯಲ್ಲಿ ಅಶೋಕ್ ಈ ವಿಚಾರ ಪ್ರಸ್ತಾಪಿಸಿ ಅಬಕಾರಿ ಸಚಿವರ ರಾಜೀನಾಮೆಗೆ ಆಗ್ರಹಿಸಿದ್ದರು.

ಅಲ್ಲದೆ, ಬಿಜೆಪಿ, ಜೆಡಿಎಸ್‌ಸದಸ್ಯರು ಎದ್ದು ನಿಂತು ಧ್ವನಿಗೂಡಿಸಿದ್ದರು. ಅಬಕಾರಿ ಇಲಾಖೆಯಲ್ಲಿ ನಡೆದಿದೆ ಎನ್ನಲಾದ ಹಗರಣದಲ್ಲಿ ತಿಮಾಪುರ ಹೆಸರು ತಳುಕು ಹಾಕಿಕೊಂಡ ಹಿನ್ನೆಲೆಯಲ್ಲಿ ವಿಪಕ್ಷಗಳಿಗೆ ಸಿಕ್ಕಿರುವ ಬಹುದೊಡ್ಡ ಅಸ್ತ್ರ. ಈ ಹಿಂದೆ ಮಾಡಲಾಗಿದ್ದ ಶೇ.40 ರಷ್ಟು ಆರೋಪಕ್ಕೆ ತಿರುಗೇಟು ಕೊಡಲು ಬಿಜೆಪಿ ಸಜ್ಜಾಗಿದೆ. ಅಬಕಾರಿ ಇಲಾಖೆಯಿಂದ ಲೂಟಿ ಮಾಡಿದ ಹಣವನ್ನು ಕಾಂಗ್ರೆಸ್ ಸರ್ಕಾರ ಶೀಘ್ರದಲ್ಲೇ ವಿಧಾನಸಭಾ ಚುನಾವಣೆ ಎದುರಿಸುತ್ತಿರುವ ಅಸ್ಸಾಂ, ಕೇರಳ, ತಮಿಳುನಾಡಿಗೆ ರವಾನಿಸುತ್ತಿದೆ ಎಂದು ಆರೋಪಿಸಿ, ಬಿಜೆಪಿ ಸದಸ್ಯರು ವಿಧಾನಸಭೆಯಲ್ಲಿ ಅಬಕಾರಿ ಸಚಿವ ತಿಮ್ಮಾಪುರ ಅವರ ರಾಜೀನಾಮೆಗೆ ಒತ್ತಾಯಿಸಿದ್ದರು. ಅಬಕಾರಿ ಇಲಾಖೆಯ ಹಗರಣದ ಹಣ ಚುನಾವಣೆಗೆ ಹೋಗುತ್ತಿರುವುದು ನಿಜ ಮತ್ತು ನಾವು ಅದನ್ನು ಬಹಿರಂಗಪಡಿಸುತ್ತೇವೆ ಎಂದು ಅಶೋಕ್‌ಹೇಳಿದ್ದರು. ತಿಮ್ಮಾಪುರ ಮತ್ತು ಅವರ ಪುತ್ರ ಭಾಗಿಯಾಗಿದ್ದಾರೆ ಎನ್ನಲಾದ ಮದ್ಯ ಹಗರಣದ ಕುರಿತು ಚರ್ಚೆಗೆ ಸ್ಪೀಕರ್ ಯು.ಟಿ. ಖಾದರ್ ಅವಕಾಶ ನೀಡಿದ್ದು, ಮಂಗಳವಾರದ ಸದನದ ಕಾರ್ಯಕಲಾಪಗಳ ಪಟ್ಟಿಯಲ್ಲಿದೆ.

ಸದನದಲ್ಲಿ ಈ ವಿಚಾರದ ಬಗ್ಗೆ ಪ್ರಸ್ತಾಪಿಸಿದ್ದ ಅಶೋಕ್, ಲೋಕಾಯುಕ್ತದಲ್ಲಿ ಸಚಿವರ ವಿರುದ್ಧ ದೂರು ದಾಖಲಿಸಲಾಗಿದೆ. ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ, ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಅವರು ಇದೇ ರೀತಿಯ ಆರೋಪಗಳನ್ನು ಎದುರಿಸಿದ ನಂತರ ತನಿಖೆಗೆ ಮುನ್ನ ರಾಜೀನಾಮೆ ನೀಡಿದ್ದರು ಎಂದರು.

### ದ್ವೇಷ ಭಾಷಣ ವಿಧೇಯಕಕ್ಕೆ ರಾಜ್ಯಪಾಲರ ಅಂಕಿತ ಬಿದ್ದಿಲ್ಲ, ಅಷ್ಟರಲ್ಲೇ ಬಿಜೆಪಿ ಮುಖಂಡಗೆ ಪೊಲೀಸ್ ನೋಟಿಸ್: ಸುರೇಶ್ ಪ್ರಶ್ನೆ

# ನೋಟಿಸ್ ನೀಡಿರುವುದು ಎಲ್ಲರ ಹುಬ್ಬೇರುವಂತೆ ಮಾಡಿದೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ದ್ವೇಷ ಭಾಷಣ, ದ್ವೇಷ ಅಪರಾಧ (ತಡೆ) ವಿಧೇಯಕ 2025 ಸರ್ಕಾರದ ಮಟ್ಟದಲ್ಲಿ ಕ್ಯಾಬಿನೆಟ್‌ಅಂಗೀಕಾರ ಪಡೆದುಕೊಂಡಿದೆ. ಆದರೆ, ರಾಜ್ಯಪಾಲರ ಅಂಕಿತ ಬಿದ್ದಿಲ್ಲ. ಆದರೂ, ಗೃಹ ಇಲಾಖೆ ಬಿಜೆಪಿ ಮುಖಂಡ ವಿಕಾಸ ಪುತ್ತೂರ್ ಅವರಿಗೆ ದ್ವೇಷ ಭಾಷಣ ಕಾಯ್ದೆಯ ಅನ್ವಯ ಎಚ್ಚರಿಕೆ ನೋಟಿಸ್ ನೀಡಿದೆ.

**ಮಸೂದೆಗಿನ್ನೂ ಬಿದ್ದಿಲ್ಲ ರಾಷ್ಟ್ರಪತಿಗಳ ಅಂಕಿತ**

ಚಿಕ್ಕಮಗಳೂರು ಜಿಲ್ಲೆಯ ತರೀಕೆರೆಯಲ್ಲಿ ನಡೆಯಬೇಕಿದ್ದ ಹಿಂದೂ ಸಮಾಜೋತ್ಸವ ಕಾರ್ಯಕ್ರಮಕ್ಕೆ ಮುನ್ನವೇ ಈ ನೋಟಿಸ್ ನೀಡಲಾಗಿದೆ. ಇದು ರಾಜ್ಯಪಾಲರ ಅಂಕಿತವಿಲ್ಲದ ಮಸೂದೆಯ ಅನ್ವಯ ಕ್ರಮ ಕೈಗೊಂಡಿರುವುದು ಹಲವರಲ್ಲಿ ಅಚ್ಚರಿ ಮೂಡಿಸಿದೆ. ಈ ಬಗ್ಗೆ ಬಿಜೆಪಿ ಶಾಸಕ ಸುರೇಶ್ ಕುಮಾರ್ ಅವರು ಗೃಹ ಇಲಾಖೆಯ ನಡೆಯನ್ನು ಪ್ರಶ್ನಿಸಿದ್ದಾರೆ. ಆದರೆ, ಈ ಮಸೂದೆ ಇನ್ನೂ ಕಾನೂನಾಗಿ ಜಾರಿಗೆ ಬಾರದೆಯೇ ಪೊಲೀಸರು ಬಿಜೆಪಿ ಮುಖಂಡನಿಗೆ ಎಚ್ಚರಿಕೆ ನೋಟಿಸ್ ನೀಡಿರುವುದು ಎಲ್ಲರ ಹುಬ್ಬೇರುವಂತೆ ಮಾಡಿದೆ. ಶಾಸಕ ಸುರೇಶ್ ಕುಮಾರ್ ಪ್ರಶ್ನೆ: ನೋಟಿಸ್ ಜಾರಿಯಾಗಿರುವುದನ್ನು ಶಾಸಕ ಸುರೇಶ್ ಕುಮಾರ್ ಪ್ರಶ್ನೆ ಮಾಡಿದ್ದಾರೆ. ವಿಕಾಸ ಪುತ್ತೂರ್ ನಮ್ಮ ಪಕ್ಷದ ಹಿರಿಯ ಕಾರ್ಯಕರ್ತರು. ನನ್ನ ಆತ್ಮೀಯ ಸಹಕಾರಿಗಳೂ ಸಹ. ಪಕ್ಷದಲ್ಲಿನ ಅನ್ಯಾನ್ಯ ಜವಾಬ್ದಾರಿಗಳನ್ನು ಬಹಳ ಶ್ರದ್ದೆಯಿಂದ ನಿರ್ವಹಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ತರೀಕೆರೆಯಲ್ಲಿ ನಡೆಯಲಿರುವ ಹಿಂದೂ ಸಮಾಜೋತ್ಸವದಲ್ಲಿ ಪಾಲ್ಗೊಳ್ಳಲು ಅವರು ಬಂದಾಗ ಅವರಿಗೆ ಪೊಲೀಸರು ನೀಡಿರುವ ಪ್ರೇಮಪತ್ರ ಇದು. ಅಂದಹಾಗೆ ರಾಜ್ಯದ ಗೃಹ ಸಚಿವರಿಗೆ ಹಾಗೂ ವಿಕಾಸ ಪುತ್ತೂರು ಅವರಿಗೆ ನೋಟಿಸ್ ಕೊಟ್ಟ ಚಿಕ್ಕಮಗಳೂರು ಜಿಲ್ಲಾ ಪೊಲೀಸರಿಗೆ ಇಬ್ಬರಿಗೂ ನನ್ನದೊಂದು ಪ್ರಶ್ನೆ ದ್ವೇಷ ಭಾಷಣ ಮಸೂದೆ ಕಾಯ್ದೆಯಾಗಿದೆಯೇ? ರಾಜ್ಯಪಾಲರಿಂದ ಇದಕ್ಕೆ ಅಂಕಿತ ಸಿಕ್ಕಿದೆಯೇ? ನಿರೀಕ್ಷಣಾ ಜಾಮೀನು ಎಂಬುದು ಗೊತ್ತಿತ್ತು. ಆದರೆ ಕಾಯ್ದೆ ಜಾರಿಯಾಗುವ ಮೊದಲೇ ನಿರೀಕ್ಷಣಾ ಜಾಮೀನು ನಿಜಕ್ಕೂ ಗೃಹ ಇಲಾಖೆಯ ಹೊಸ ಕಾರ್ಯ ವೈಖರಿ.ಇಷ್ಟೊಂದು ಎಚ್ಚರಿಕೆಯಿಂದ ಮತ್ತು ಜತನದಿಂದ ಕಾರ್ಯ ನಿರ್ವಹಿಸುವ ಪೊಲೀಸರಿಗೆ ಶಿಷ್ಟಘಟ್ಟದ ಕಾಂಗ್ರೆಸ್ ಮುಖಂಡ ರಾಜೀವ್ ಗೌಡ ರವರನ್ನು ಇನ್ನೂ ಬಂಧಿಸಲು ಏಕೆ ಸಾಧ್ಯವಾಗಿಲ್ಲ? ಎಂದು ಪ್ರಶ್ನಿಸಿದ್ದಾರೆ.



**ತಪ್ಪಿದ್ದಲ್ಲಿ ಸೂಕ್ತ ಕಾನೂನು ಕ್ರಮ**

ಚಿಕ್ಕಮಗಳೂರು ಜಿಲ್ಲೆಯ ತರೀಕೆರೆಯಲ್ಲಿ ಹಿಂದೂ ಸಮಾಜೋತ್ಸವ ಶೋಭಾಯಾತ್ರೆ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ವಿಕಾಸ ಪುತ್ತೂರ್ ಅವರು ಭಾಷಣಕಾರರಾಗಿ ಭಾಗವಹಿಸಬೇಕಿತ್ತು. ಹೀಗಾಗಿ, ಚಿಕ್ಕಮಗಳೂರು ಪೊಲೀಸರು ವಿಕಾಸ ಪುತ್ತೂರ್ ಅವರಿಗೆ ನೋಟಿಸ್ ಜಾರಿ ಮಾಡಿದ್ದಾರೆ. ಕರ್ನಾಟಕ ಸರ್ಕಾರ ಜಾರಿಗೆ ತಂದಿರುವ ದ್ವೇಷ ಭಾಷಣ ಮಸೂದೆ-2025ರ ಅನ್ವಯ, ಕಾಯ್ದೆಯನ್ನು ಉಲ್ಲಂಘಿಸದಂತೆ ಕಾರ್ಯಕ್ರಮ ನಡೆಸಬೇಕು. ತಪ್ಪಿದ್ದಲ್ಲಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ನೋಟಿಸ್‌ನಲ್ಲಿ ತಿಳಿಸಲಾಗಿದೆ.

**ವಿಕಾಸ್ ಪುತ್ತೂರು ಅವರಿಗೆ ನೀಡಿರುವ ನೋಟಿಸ್ ನಲ್ಲಿರುವುದೇನು?**

- ವಿಕಾಸ್ ಪುತ್ತೂರು ಅವರಿಗೆ ನೀಡಿರುವ ನೋಟಿಸ್ ನಲ್ಲಿ ಪೊಲೀಸರು ಹಾಕಿರುವ ಸೂಚನೆಗಳು ಹೀಗಿವೆ:
- ನೀವುಗಳು ಸಭೆಯನ್ನು ಉದ್ದೇಶಿಸಿ ಭಾಷಣ ಮಾಡುವ ಸಮಯದಲ್ಲಿ ಅನ್ಯ ಕೋಮಿನ ಸಮುದಾಯದವರ ಭಾವನೆಗಳಿಗೆ ದಕ್ಕೆ ಉಂಟಾಗದಂತೆ ನೋಡಿಕೊಳ್ಳುವುದು.
- ತಾವು ಮಾಡುವ ಭಾಷಣವು ಯಾವುದೇ ಗುಂಪಿನ ವಿರುದ್ಧ ದ್ವೇಷ ಹಿಂಸೆ ಪ್ರಚೋದನೆಗೆ ಒಳಪಡಬಾರದು.
- ಶೋಭಾಯಾತ್ರೆಯ ಸಮಯದಲ್ಲಿ ತಾವುಗಳು ತರೀಕೆರೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಕಾರ್ಯಕ್ರಮಮ ಹಮ್ಮಿಕೊಂಡಿದ್ದು ಶಾಂತ ರೀತಿಯಲ್ಲಿ ಸಾರ್ವಜನಿಕರಿಗೆ ಮತ್ತು ಸುಗುಮ ಸಂಚಾರಕ್ಕೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳುವುದು.

# ಬಟವಾಡಿ- ಮಲ್ಲಸಂದ್ರ ವೈಟ್ ಟಾಪಿಂಗ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ತುಮಕೂರು

ನಗರದಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ 206ರ ಬಟವಾಡಿ- ಮಲ್ಲಸಂದ್ರ ನಡುವಿನ 12 ಕಿ.ಮೀ ರಸ್ತೆಯ ವೈಟ್ ಟಾಪಿಂಗ್, ದ್ವಿಪಥವನ್ನು ಚತುಷ್ಪಥ ರಸ್ತೆಯನ್ನಾಗಿ ಅಭಿವೃದ್ಧಿಪಡಿಸುವ ಕಾಮಗಾರಿಗೆ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಚಾಲನೆ ನೀಡಿದರು. ನಗರದ ಹೊರ ವಲಯದ ಹೆಗ್ಗೆರೆಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಗುದ್ದಲಿಪೂಜೆ ನೆರವೇರಿಸಿದರು. 85.48 ಕೋಟಿ ವೆಚ್ಚದಲ್ಲಿ ಕಾಮಗಾರಿ ಕೈಗೆತ್ತಿಕೊಂಡಿದ್ದು, ಮೂರು ತಿಂಗಳಲ್ಲಿ ಮುಗಿಸುವಂತೆ ಗಡುವು ನೀಡಲಾಗಿದೆ. ನಂತರ ಮಾತನಾಡಿದ ಸೋಮಣ್ಣ. ಒಮ್ಮೆ ಶಾಲೆ ಮಗುವಿಗೆ ಅಪಘಾತವಾಗಿದ್ದನ್ನು ಗಮನಿಸಿದೆ. ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ಸಲುವಾಗಿ ಕೇಂದ್ರ ಹೆದ್ದಾರಿ ಹಾಗೂ ಭೂಸಾರಿಗೆ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿ ಮಾಡಿದೆ. ಸಚಿವರು 85.48 ಕೋಟಿ ಹಣ ನೀಡಿದ್ದಾರೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಹೆಗ್ಗೆರೆಯನ್ನು ಒಂದು ನಗರವಾಗಿ ಅಭಿವೃದ್ಧಿ ಪಡಿಸಲಾಗುವುದು. ತುಮಕೂರಿಗೆ ಮೆಟ್ರೊ ರೈಲು ತರಲು ಸಚಿವ ಪರಮೇಶ್ವರ ಪ್ರಯತ್ನ ನಡೆಸಿದ್ದಾರೆ. ರೈಲ್ವೆ ಹಾಗೂ ರಸ್ತೆಗಳು ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಈ ಎರಡೂ ಕ್ಷೇತ್ರಗಳು ಅಭಿವೃದ್ಧಿಯಾಗಬೇಕು ಎಂದರು. ತುಮಕೂರು- ಬೆಂಗಳೂರು ನಡುವಿನ ದ್ವಿಪಥ ರೈಲ್ವೆ ಮಾರ್ಗವನ್ನು ಚತುಷ್ಪಥ ಮಾರ್ಗವನ್ನಾಗಿ ವಿಸ್ತರಿಸುವ ಪ್ರಯತ್ನ ನಡೆದಿದೆ. ಈ ಸಂಬಂಧ ವಿಸ್ತ್ರತ ಯೋಜನಾ ವರದಿ ಸಿದ್ಧಪಡಿಸಲಾಗಿದೆ. ಕ್ಷೇತ್ರದ ವ್ಯಾಪ್ತಿಯಲ್ಲಿ 30ಕ್ಕೂ ಹೆಚ್ಚು ರೈಲ್ವೆ ಮೇಲು ಸೇತುವೆ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದು ತಿಳಿಸಿದರು.

### ಯಾವುದೇ ಕಾರಣಕ್ಕೂ ಜೆಡಿಎಸ್, ಬಿಜೆಪಿ ಅಧಿಕಾರಕ್ಕೆ ಬರಲ್ಲ

# 2028ಕ್ಕೂ ನಮ್ಮದೇ ಅಧಿಕಾರ: ಸಿಎಂ

• ಉದಯವಾಹಿನಿ, ಮೈಸೂರು

ಯಾವುದೇ ಕಾರಣಕ್ಕೂ ಜೆಡಿಎಸ್ ಅಧಿಕಾರಕ್ಕೆ ಬರುವುದಿಲ್ಲ. ಸುಮ್ಮನೆ ರಾಜಕೀಯವಾಗಿ ಭಾಷಣ ಮಾಡಿದ್ದಾರೆ ಅಷ್ಟೇ. ಬಿಜೆಪಿ ಜೊತೆ ಸೇರಿಕೊಂಡಿರುವ ಕಾರಣ ಅಧಿಕಾರಕ್ಕೆ ಬರಬಹುದು ಎಂದುಕೊಂಡಿದ್ದಾರೆ. ಬಹುಮತ ಬಂದರೆ ಬಿಜೆಪಿ ಅವರು ಜೆಡಿಎಸ್ ಗೆ ಯಾಕೆ ಅಧಿಕಾರ ಬಿಟ್ಟುಕೊಡ್ತಾರೆ. ಜೆಡಿಎಸ್, ಬಿಜೆಪಿ ಇಬ್ಬರಿಗೂ ಬಹುಮತ ಬರುವುದಿಲ್ಲ. ಒಂದು ವೇಳೆ ಬಂದರೂ ಜೆಡಿಎಸ್‌ಗೆ ಅಧಿಕಾರ ಕೊಡುವುದಿಲ್ಲ. 2028ಕ್ಕೂ ನಮ್ಮದೇ ಅಧಿಕಾರ. ನಾಯಕತ್ವ ಯಾರದ್ದು ಎಂಬುದನ್ನ ಹೈ ಕಮಾಂಡ್ ನಿರ್ಧಾರ ಮಾಡುತ್ತದೆ ಎಂದು ಮೈಸೂರಿನಲ್ಲಿ ಸಿಎಂ ಸಿದ್ದರಾಮಯ್ಯ ಹೇಳಿದರು.

ಹೆಚ್ ಡಿ ರೇವಣ್ಣ ಬಂಧಿಸಿದ ಪ್ರಕರಣ ವಿಚಾರವಾಗಿ ಪ್ರತಿಕ್ರಿಯಿಸಿ, ನಾವು ಯಾವತ್ತೂ ಯಾರ ಪ್ರಕರಣದಲ್ಲಿಯೂ ತಲೆ ಹಾಕುವುದಿಲ್ಲ. ಕಾನೂನಿನ ಪ್ರಕಾರ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಸುಮ್ಮನೆ ಇವರು ಏನೇನೋ ಸುಳ್ಳು ಹೇಳುತ್ತಾರೆ ಅಷ್ಟೇ. ನಾವೇಕೆ ರೇವಣ್ಣ ಅವರ ಮೇಲೆ ದ್ವೇಷ ಮಾಡಲಿ ಎಂದರು.

**ರಾಜ್ಯಪಾಲರ ವಿಚಾರ**

**ರಾಜ್ಯಪಾಲರು ರಾಷ್ಟ್ರಪತಿಗಳಿಗೆ ನಡೆದ ಘಟನೆ ವಿವರಣೆ ಕೊಟ್ಟಿದ್ದಾರೆ, ಕೊಡಲಿ ಬಿಡಿ. ಅವತ್ತು ಏನೇನು ನಡೆಯಿತು ಎಂಬುದನ್ನು ರಾಷ್ಟ್ರಪತಿಗಳಿಗೆ ರಾಜ್ಯಪಾಲರು ವಿವರಿಸಬಹುದು. ನಾವೇನೂ ವಿವರಣೆ ಕೊಡುವುದಿಲ್ಲ. ಇಂದು ಗಣರಾಜ್ಯೋತ್ಸವದಲ್ಲೂ ರಾಜ್ಯಪಾಲರು ಭಾಷಣ ಮಾಡಬೇಕಿದೆ. ನಾವು ಬರೆದು ಕೊಟ್ಟ ಭಾಷಣವನ್ನು ರಾಜ್ಯಪಾಲರು ಗಣರಾಜ್ಯೋತ್ಸವದ ಭಾಷಣದಲ್ಲಿ ಓದಬೇಕು ಎಂಬ ನಿಯಮ ಇಲ್ಲ. ಅದರಲ್ಲಿ ಕೆಲವು ಬದಲಾವಣೆಗಳನ್ನು ಕೂಡ ಮಾಡಿಕೊಳ್ಳಬಹುದು. ರಾಜ್ಯಪಾಲರು ಇಂದು ಏನು ಮಾಡುತ್ತಾರೋ ನಮಗೆ ಗೊತ್ತಿಲ್ಲ. ಜಂಟಿ ಸದನದ ಅಧಿವೇಶನದಲ್ಲಿ ಮಾತ್ರ ಸರ್ಕಾರ ಬರೆದುಕೊಟ್ಟಿದ್ದನ್ನೇ ಓದಬೇಕು ಎನ್ನುವ ನಿಯಮ ಇದೆ ಎಂದರು.**

**ಫೆ.2 ರಿಂದ ಬಜೆಟ್ ತಯಾರಿ ಅಧಿಕೃತ ಸಭೆ:** ಫೆ.2 ರಿಂದ ಬಜೆಟ್ ತಯಾರಿ ಅಧಿಕೃತ ಸಭೆ ಆರಂಭ ಮಾಡುತ್ತೇನೆ. ಈಗಾಗಲೇ ತಯಾರಿ ಪ್ರಕ್ರಿಯೆ ನಡೆದಿದೆ. ಅಧಿಕೃತ ಸಭೆಗಳನ್ನು ಫೆ.2 ರಿಂದ ಶುರು ಮಾಡುತ್ತೇನೆ. ರಾಜ್ಯದಲ್ಲಿ ಬಂಡವಾಳ ಹೂಡಿಕೆ ಮಾಡಲು ಮುಕ್ತ ವಾತಾವರಣ ಇದೆ. ಹೀಗಾಗಿ ಹೆಚ್ಚಿನ ಬಂಡವಾಳ ಹೂಡಿಕೆ ಆಗುತ್ತಿದೆ. ದಾಬಸ್‌ನ ಸಮಾವೇಶದಲ್ಲೂ ಕೂಡ ಈ ವಿಚಾರದಲ್ಲಿ ಮಹತ್ವದ ಚರ್ಚೆಯಾಗಿದೆ ಎಂದರು.



**ಬಜೆಟ್ ಸಿದ್ಧತೆ ಫೆಬ್ರವರಿ 2ರಿಂದ**

**ಮುಂದಿನ ಚುನಾವಣೆಯಲ್ಲಿ ಜೆಡಿಎಸ್ ಅಧಿಕಾರಕ್ಕೆ ಬರುವುದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬಿಜೆಪಿ ಜೊತೆ ಸೇರಿ ಅಧಿಕಾರಕ್ಕೆ ಬರಲು ಜೆಡಿಎಸ್ ಯೋಚಿಸುತ್ತಿದೆ. ಬಹುಮತ ಬಂದರೆ ಬಿಜೆಪಿ ಜೆಡಿಎಸ್‌ಗೆ ಅಧಿಕಾರ ಬಿಟ್ಟುಕೊಡುವುದಿಲ್ಲ. 2028ರಲ್ಲೂ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ. ರೇವಣ್ಣ ಬಂಧನ ಪ್ರಕರಣದಲ್ಲಿ ಸರ್ಕಾರದ ಹಸ್ತಕ್ಷೇಪ ಇಲ್ಲ. ಬಜೆಟ್ ಸಿದ್ಧತೆ ಫೆಬ್ರವರಿ 2ರಿಂದ ಆರಂಭವಾಗಲಿದೆ. ರಾಜ್ಯಪಾಲರ ಭಾಷಣದ ಬಗ್ಗೆಯೂ ಅವರು ಮಾತನಾಡಿದರು.**

# ಶಿಕ್ಷಣದಿಂದ ಮಾತ್ರ ಪ್ರಗತಿ ಸಾಧ್ಯ: ಬಿ.ಎಲ್.ಸಂತೋಷ್

### ಭಾರತೀಯ ಸಂಸ್ಕೃತಿಯಲ್ಲಿ ವಿದ್ಯೆ, ಸಮರ್ಪಣೆಗೆ ಮಹತ್ವ ಇದೆ, ವ್ಯಕ್ತಿ ಎಷ್ಟೇ ದೊಡ್ಡವನಾದರೂ ವಿದ್ಯೆ ಕಲಿಸಿದ ಗುರುವನ್ನು ಮರೆಯುವುದಿಲ್ಲ

• ಉದಯವಾಹಿನಿ, ಗುಂಡ್ಲುಪೇಟೆ

ಪ್ರತಿಯೊಬ್ಬರು ಕೂಡ ಶಿಕ್ಷಣಕ್ಕೆ ಮೊದಲ ಆದ್ಯತೆ ನೀಡಬೇಕು ಆಗಿದ್ದಲ್ಲಿ ಮಾತ್ರ ಪ್ರಗತಿ ಸಾಧ್ಯ ಎಂದು ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಸಲಹೆ ನೀಡಿದರು. ತಾಲ್ಲೂಕಿನ ದೊಡ್ಡತುಪ್ಪೂರು ಬಳಿ ಜ್ಞಾನ ಸಂಗಮ ಪ್ರತಿಷ್ಠಾಪನದ ವತಿಯಿಂದ ನಡೆದ ರೇಡಿಯಂಟ್ ಸ್ಕೂಲ್ ಆಫ್ ಎಕ್ಸಲೆನ್ಸ್, ಪಿಯು ಕಾಲೇಜು, ಅಕಾಡೆಮಿ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಭಾರತೀಯ ಸಂಸ್ಕೃತಿಯಲ್ಲಿ ವಿದ್ಯೆ, ಸಮರ್ಪಣೆಗೆ ವಿಶೇಷ ಮಹತ್ವ ಇದೆ. ವ್ಯಕ್ತಿ ಎಷ್ಟೇ ದೊಡ್ಡವನಾದರೂ ವಿದ್ಯೆ ಕಲಿಸಿದ ಗುರುವನ್ನು ಮರೆಯುವುದಿಲ್ಲ. ಅದೇ ರೀತಿ ಸಮಾಜಕ್ಕಾಗಿ ಸಮರ್ಪಿಸಿಕೊಂಡವರಿಗೆ ಗೌರವಗಳು ಸಲ್ಲುತ್ತವೆ ಎಂದರು.

ಸಂಸ್ಥೆಯ ಚೇರ್ಮನ್ ಜಿ.ನಿಜಗುಣರಾಜು ಮಾತನಾಡಿ, ಉದ್ಯಮಿಯಾಗಿ ಲಾಭ ಬರುವ ಬಂಡವಾಳ ತೊಡಗಿಸದೇ ಶಿಕ್ಷಣ ಸಂಸ್ಥೆ ತೆರೆಯಲು ತಂದೆಯವರ ಆಶಯವೇ ಕಾರಣ. ಬೆಂಗಳೂರು ಮತ್ತು ಮಂಗಳೂರು ಮಾದರಿ ಸೌಲಭ್ಯಗಳನ್ನು ಒದಗಿಸುವ ಜತೆಗೆ ಜಿಲ್ಲೆಯ ಮಕ್ಕಳ ಓದಿಗೆ ಪೋಷಕರು ಸಾಧಾರಣ ಹಣ ವ್ಯಯಿಸುವಂತೆ ಮಾಡುವ ಉದ್ದೇಶ ಹೊಂದಲಾಗಿದೆ. ಸಿದ್ದಗಂಗಾ ಶಿವಕುಮಾರ ಮಹಾಸ್ವಾಮೀಜಿ, ಶ್ರೀ ರಾಜೇಂದ್ರ ಶ್ರೀ ಗಳ ಶಿಕ್ಷಣ ಕ್ರಾಂತಿಯನ್ನು ಸ್ಮರಿಸಿದರು. ಕಾರ್ಯಕ್ರಮದಲ್ಲಿ ಸಿದ್ದಗಂಗಾ ಸಿದ್ದಲಿಂಗ ಮಹಾಸ್ವಾಮೀಜಿ, ಕನಕಗಿರಿ ಭುವನಕೀರ್ತಿ ಭಟ್ಟಾರಕ ಸ್ವಾಮೀಜಿ, ಶಾಸಕರಾದ ಎಚ್.ಎಂ.ಗಣೇಶಪ್ರಸಾದ್, ಎಚ್.ಕೆ.ಸುರೇಶ್, ಶ್ರೀವತ್ಸ, ಮಾಜಿ ಶಾಸಕರಾದ ಸಿ.ಎಸ್.ನಿರಂಜನ್ ಕುಮಾರ್, ಬೆಳ್ಳಿಪ್ರಕಾಶ್, ಮಾಜಿ ಸಚಿವ ಎನ್.ಮಹೇಶ್, ಶರಣ ಸಾಹಿತ್ಯ ಪರಿಷತ್ತು ರಾಜ್ಯಾಧ್ಯಕ್ಷ ಸಿ.ಸೋಮಶೇಖರ್, ಸಂಸ್ಥೆಯ ಚೇರ್ಮನ್ ಮಂಜುಳರಾಜ್, ಕಾರ್ಯದರ್ಶಿ ಡಿ.ಶ್ವೇತಾ ಸೇರಿದಮತೆ ಹಲವು ಮಂದಿ ಗಣ್ಯರು ಹಾಜರಿದ್ದರು. ಕಾರ್ಯಕ್ರಮ ಆರಂಭಕ್ಕೂ ಮೊದಲು ಖ್ಯಾತ ಗಾಯಕಿ ಸಂಗೀತಾ ಕಟ್ಟಿರವರಿಂದ ವಚನ ಮತ್ತು ಭಾವಗೀತೆಗಳ ಗಾಯನ ಏರ್ಪಡಿಸಲಾಗಿತ್ತು.


ಉದಯವಾಹಿನಿ ಚಿತ್ರ

**ಅಭಿವೃದ್ಧಿ ವಿಷಯದಲ್ಲಿ ಮಾನವ ಶಕ್ತಿ ದೊಡ್ಡದು, ಇದರ ಸಹಾಯದಿಂದಲೇ ಹೊಸ ದಿಕ್ಕನ್ನು ನಮ್ಮ ದೇಶ ಕೊಟ್ಟಿದ್ದು, ಈಗ ಮೇಡ್ ಇನ್ ಇಂಡಿಯಾ ಆಗಿದೆ. ಚಂದ್ರನ ಮೇಲೆ ಪಾದಾರ್ಪಣೆ, ಕೃಷಿ ಕ್ಷೇತ್ರದ ಸಾಧನೆ, ಹೈನುಗಾರಿಕೆ ಎಲ್ಲದಕ್ಕೂ ಮೂಲ ಕಾರಣ ಶಿಕ್ಷಣ. ಹೀಗಾಗಿ ಕ್ವಾಲಿಟಿ ಎಜುಕೇಷನ್ ಕಡೆಗೆ ಗಮನ ಕೊಡಬೇಕು. ಉತ್ತಮ ಸಮಾಜ ನಿರ್ಮಾಣಕ್ಕೆ ಅನ್ನ, ಅಕ್ಷರ, ಆರೋಗ್ಯ ವ್ಯವಸ್ಥಿತವಾಗಿರಬೇಕು. ಶಿಕ್ಷಣ ಅಂತಃಶಕ್ತಿ ಬೆಳೆಸುವುದರಿಂದ ಸಮಾಜ ಉತ್ತಮವಾಗಿ ಮೂಡಿ ಬರುತ್ತದೆ.**
**- ಡಿ.ವಿ.ಸದಾನಂದಗೌಡ, ಮಾಜಿ ಮುಖ್ಯಮಂತ್ರಿ**

**ಕುವೆಂಪು ಅವರು ಮೈಸೂರು ವಿವಿಗೆ ನಹೀಜ್ಞಾನೇನ ಸದೃಶ್ಯಂ ಘೋಷ ವಾಕ್ಯ ಕೊಟ್ಟಿದ್ದಾರೆ. 12 ನೆ ಶತಮಾನದಲ್ಲಿ ಜ್ಞಾನ ಗಳಿಸುವುದು ಮನುಷ್ಯನ ಧ್ಯೇಯ ಎಂದಿದ್ದಾರೆ. ಅದರಂತೆ ಜ್ಞಾನ ಸಂಗಮ ಹೆಸರಿಗೆ ತಕ್ಕಂತೆ ಮೂರು ಸಂಸ್ಥೆಗಳ ಸಮ್ಮಿಲನವಾಗಿದೆ. ಜ್ಞಾನದ ಮೂಲಕ ಜಗತ್ತನ್ನು ಬೆಳಗುವ ಅವಕಾಶ ಇದೆ. ತಂದೆ ತಾಯಿ ಅಪೇಕ್ಷೆ ಪಡುವಂತ ಉತ್ತಮ ಶಿಕ್ಷಣ ಕೊಡುವ ಸಂಸ್ಥೆ ಮನೆ ಬಾಗಿಲಲ್ಲೇ ಆರಂಭವಾಗಿರುವುದು ಉತ್ತಮ ವಿಚಾರ.**
**- ಸುತ್ತೂರು ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ**

## ರಾಜ್ಯಪಾಲರಿಗೆ ಅಡ್ಡಿ: ಕೈ ಶಾಸಕರ ಅಮಾನತಿಗೆ ಒತ್ತಾಯ

• ಉದಯವಾಹಿನಿ, ರಾಮನಗರ

ವಿಧಾನ ಮಂಡಳ ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರ ಕರ್ತವ್ಯಕ್ಕೆ ಅಡ್ಡಿಪಡಿಸಿ ಗೂಂಡಾಗಳಂತೆ ವರ್ತಿಸಿದ ಕಾಂಗ್ರೆಸ್ ಶಾಸಕರನ್ನು ಅಮಾನತ್ತು ಮಾಡಬೇಕು ಎಂದು ರಾಜ್ಯ ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ಒತ್ತಾಯಿಸಿದ್ದಾರೆ. ನಗರದ ಖಾಸಗಿ ಕಲ್ಯಾಣ ಮಂಟಪದಲ್ಲಿ ವಿಕಸಿತ ಭಾರತ ಉದ್ಯೋಗ ಖಾತ್ರಿ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣಾ) ಕಾಯ್ದೆ (ವಿಬಿ-ಜಿ-ರಾಮ್ ಜಿ) ಜಾಗೃತಿ ಸಮಾವೇಶದ ಬಳಿಕ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ವರ್ಷದ ಮೊದಲ ಅಧಿವೇಶನದ ವೇಳೆ ರಾಜ್ಯ ಸರ್ಕಾರ ಕೇಂದ್ರದ ಜನಪರ ಯೋಜನೆಯನ್ನು ವಿರೋಧಿಸಲು ರಾಜ್ಯಪಾಲರಿಗೆ ಭಾಷಣ ಬರೆದುಕೊಟ್ಟಿದ್ದಾರೆ. ಹಾಗಾಗಿ ಅವರು ಓದದೆ ವಾಪಾಸ್ ಬಂದಿದ್ದಾರೆ. ಇದರಲ್ಲಿ ತಪ್ಪೇನಿಲ್ಲ. ಕಾಂಗ್ರೆಸ್ ನಾಯಕ ಬಿ.ಕೆ.ಹರಿಪ್ರಸಾದ್ ಅವರು ರಾಜ್ಯಪಾಲರನ್ನು ಅಡ್ಡಗಟ್ಟಿ ಬಲವಂತವಾಗಿ ಭಾಷಣ ಓದಿಸಲು ಮುಂದಾಗಿದ್ದಾರೆ. ಇದು ಆ ಪಕ್ಷದ ಸಂಸ್ಕೃತಿ ತೋರಿಸುತ್ತದೆ ಎಂದು ಟೀಕಿಸಿದರು. ರಾಜ್ಯಪಾಲರನ್ನು ಅಡ್ಡಗಟ್ಟಿ ಅವರ ಮೇಲೆ ಬಲ ಪ್ರಯೋಗಿಸಲು ಮುಂದಾಗಿರುವುದು ಪ್ರಜಾಪ್ರಭುತ್ವದ ಕಗ್ಗೊಲೆ.

ಈ ಹಿಂದೆ ಜಂಟಿ ಸದನದಲ್ಲಿ ಸ್ಪೀಕರ್ ಅವರನ್ನು ಅಭಿವೃದ್ಧಿ ದೃಷ್ಟಿಯಿಂದ ಪ್ರಶ್ನಿಸಿದ ಬಿಜೆಪಿಯ 16 ಶಾಸಕರನ್ನು 6 ತಿಂಗಳು ಸದನದಿಂದ ಬಹಿಷ್ಕಾರ ಮಾಡಲಾಗಿತ್ತು. ಇದೇ ರೀತಿ ಕಾಂಗ್ರೆಸ್ ಸರ್ಕಾರ ತಮ್ಮ ಶಾಸಕರ ವಿರುದ್ಧ ಕ್ರಮ ಕೈಗೊಳ್ಳಬೇಕು. ಅಸಾಂವಿಧಾನಿಕವಾಗಿ ವರ್ತಿಸಿದ ಕಾಂಗ್ರೆಸ್ ಶಾಸಕರನ್ನು ಸ್ಪೀಕರ್ ತಕ್ಷಣ ಅಮಾನತ್ತು ಪಡಿಸಿ ಶಾಸಕಾಂಗ ಸಭೆಯಿಂದ ಹೊರಗಿಡಬೇಕು ಎಂದು ಒತ್ತಾಯಿಸಿದರು.

**ಕಾಂಗ್ರೆಸ್ ಪಕ್ಷ ರಾಮನ ವಿರೋಧಿ:** ಬ್ರಿಟಿಷರು ಸ್ಥಾಪಿಸಿದ ಕಾಂಗ್ರೆಸ್ ಶ್ರೀರಾಮನನ್ನು ವಿರೋಧಿಸುವ ಮನಸ್ಥಿತಿಯ ಪಕ್ಷ. ಆ ಪಕ್ಷದ ನಾಯಕರು, ಮುಖಂಡರು ರಾಮಚಂದ್ರನ ಹೆಸರು ಕೇಳುತ್ತಿದ್ದಂತೆಯೇ ಆಕ್ರೋಶಕ್ಕೆ ಒಳಗಾಗುತ್ತಾರೆ ಎಂದು ನಡಹಳ್ಳಿ ಟೀಕಿಸಿದರು. ಈ ಹಿಂದಿನ ನರೇಗಾ ಯೋಜನೆಯಲ್ಲಿದ್ದ ನ್ಯೂನತೆ ತೆಗೆದುಹಾಕಿ ಹೊಸ ಕಾಯ್ದೆ ಜಾರಿಗೆ ತರಲಾಗಿದೆ. ಇದು ಗ್ರಾಮೀಣಾಭಿವೃದ್ಧಿಗೆ ಆದ್ಯತೆ ನೀಡಲಿದೆ. ಜೊತೆಗೆ ವಿಬಿ-ಜಿ-ರಾಮ್ ಜಿ ಕಾಯ್ದೆಯಲ್ಲಿ ಆದ್ಯತೆ ಇರುವರಿಗೆ ಕೆಲಸ ನೀಡಲಾಗುತ್ತದೆ. ಬಯೋಮೆಟ್ರಿಕ್ ಹಾಜರಾತಿ ಜೊತೆಗೆ ವಾರಕ್ಕೊಮ್ಮೆ ಕೂಲಿ ಪಾವತಿ ಮಾಡಲಾಗುತ್ತದೆ. ಇದಕ್ಕೆ ರಾಮನ ಹೆಸರು ಇಟ್ಟರೆ ಕಾಂಗ್ರೆಸ್ ವಿರೋಧಿಸುತ್ತಿದೆ ಎಂದರು.


ಉದಯವಾಹಿನಿ ಚಿತ್ರ


## ಧರ್ಮ ಪ್ರಚಾರದ ಕರಪತ್ರ ಹಂಚಲು ಸರ್ಕಾರಿ ವಾಹನ ಬಳಕೆ

• ಉದಯವಾಹಿನಿ, ಬಂಗಾರಪೇಟೆ

ತಾಲ್ಲೂಕಿನ ಗುಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಸ ಸಂಗ್ರಹಿಸುವ ಸೋಗಿನಲ್ಲಿ ಸರ್ಕಾರಿ ವಾಹನದಲ್ಲಿ ಧರ್ಮ ಪ್ರಚಾರದ ಕರಪತ್ರಗಳನ್ನು ಹಂಚಿಕೆ ಮಾಡಲಾಗುತ್ತಿತ್ತು. ಇದನ್ನು ಗಮನಿಸಿದ ಸಾರ್ವಜನಿಕರು, ಸರ್ಕಾರಿ ವಾಹನವನ್ನು ತಡೆದು ಸಿಬ್ಬಂದಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ತಾಲ್ಲೂಕಿನ ಬೂದಿಕೋಟೆ ಹೋಬಳಿಯ ಗುಲ್ಲಹಳ್ಳಿ ಗ್ರಾಮ ಪಂಚಾಯಿತಿ ಸ್ವಚ್ಛತಾ ವಾಹನದಲ್ಲಿ ಸಿಬ್ಬಂದಿ ಶಶಿಕಲಾ, ನಾಗವೇಣಿ, ವೆಂಕಟರತ್ನ ಅವರು ಮನೆ, ಮನೆಗೆ ತೆರಳಿ ಕಸ ಸಂಗ್ರಹಿಸುವ ಜೊತೆಗೆ ಧಾರ್ಮಿಕ ಸಭೆಯೊಂದರ ಕರಪತ್ರಗಳನ್ನು ಹಂಚುತ್ತಿದ್ದರು ಎಂದು ಸಾರ್ವಜನಿಕರು ಆರೋಪಿಸಿದ್ದಾರೆ.

ಇದೇ 26ರಂದು ಕೆಜಿಎಫ್‌ನಲ್ಲಿ ನಡೆಯಲಿರುವ ಕ್ರಿಶ್ಚಿಯನ್ ಧರ್ಮದ ಸಭೆಗೆ ಸಂಬಂಧಿಸಿದ ಕರಪತ್ರಗಳನ್ನು ಹಂಚಿಕೆ ಮಾಡಲಾಗುತ್ತಿತ್ತು ಎನ್ನಲಾಗಿದೆ. ಸಾರ್ವಜನಿಕ ಕೆಲಸಕ್ಕೆ ಮೀಸಲಿರುವ ವಾಹನ ಮತ್ತು ಸಮಯವನ್ನು ಒಂದು ನಿರ್ದಿಷ್ಟ ಧರ್ಮದ ಪ್ರಚಾರಕ್ಕೆ ಬಳಸುತ್ತಿರುವುದು ಸರಿಯಲ್ಲ. ಇದು ಮತಾಂತರಕ್ಕೆ ಪ್ರಚೋದನೆ ಎಂದು ಗ್ರಾಮಸ್ಥರು ಕಿಡಿ ಕಾರಿದ್ದಾರೆ. ಸಿಬ್ಬಂದಿ ಕೈಯಲ್ಲಿದ್ದ ಕರಪತ್ರಗಳನ್ನು ಸಾರ್ವಜನಿಕರು ಕಸಿದರು. ಪಂಚಾಯಿತಿ ಸಿಬ್ಬಂದಿಯ ಈ ನಡೆಯನ್ನು ಜನರು ಖಂಡಿಸಿದರು.

ಸರ್ಕಾರಿ ವಾಹನದಲ್ಲಿ ಇಂತಹ ಧಾರ್ಮಿಕ ಪ್ರಚಾರಕ್ಕೆ ಅವಕಾಶ ನೀಡಿದ ಅಧಿಕಾರಿಗಳ ವಿರುದ್ಧ ಮತ್ತು ಕರಪತ್ರ ಹಂಚಿದ ಸಿಬ್ಬಂದಿ ವಿರುದ್ಧ ಬೂದಿಕೋಟೆ ಪೊಲೀಸರು ಹಾಗೂ ಪಂಚಾಯಿತಿ ಮೇಲಧಿಕಾರಿಗಳು ತಕ್ಷಣವೇ ಶಿಸ್ತುಕ್ರಮ ಜರುಗಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.


ಉದಯವಾಹಿನಿ ಚಿತ್ರ

**ಸರ್ಕಾರಿ ವಾಹನವನ್ನು ಧರ್ಮ ಪ್ರಚಾರಕ್ಕೆ ಬಳಸಿರುವುದು ಕಾನೂನುಬಾಹಿರ. ಈ ಕುರಿತು ಪರಿಶೀಲಿಸಿ ಸಂಬಂಧಪಟ್ಟ ಸಿಬ್ಬಂದಿ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುತ್ತೇವೆ**
**-ಎಚ್. ರವಿಕುಮಾರ್**
**ಕಾರ್ಯನಿರ್ವಹಣಾಧಿಕಾರಿ**

# ನೀರಾವರಿ, ಪಶುಪಾಲನೆ, ಶಿಕ್ಷಣ ಬಲವಾಗಲಿ: ಆಲೂರು ದೊಡ್ಡನಿಂಗಪ್ಪ ಆಶಯ

• ಉದಯವಾಹಿನಿ, ತಿಪಟೂರು

ತಾಲ್ಲೂಕಿನ ಹೊನ್ನವಳ್ಳಿ ಕೆಪಿಎಸ್ ಶಾಲೆ ಆವರಣದಲ್ಲಿ 7ನೇ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನ ವಿಜೃಂಭಣೆಯಿಂದ ನಡೆಯಿತು.ಹೊನ್ನವಳ್ಳಿಯ ಪ್ರಮುಖ ಬೀದಿಗಳಲ್ಲಿ ಸಮ್ಮೇಳನ ಅಧ್ಯಕ್ಷ ಆಲೂರು ದೊಡ್ಡನಿಂಗಪ್ಪ ದಂಪತಿಯನ್ನು ಕೋಲಾಟ, ವೀರಗಾಸೆ, ಡೊಳ್ಳು ಕುಣಿತ, ಬಸವ ನಗಾರಿ, ಲಂಬಾಣಿ ನೃತ್ಯ ಸೇರಿದಂತೆ ವಿವಿಧ ಜನಪದ ಕಲಾತಂಡಗಳೊಂದಿಗೆ ವೈಭವಯುತ ಮೆರವಣಿಗೆಯಲ್ಲಿ ವೇದಿಕೆಗೆ ಕರೆತರಲಾಯಿತು.

ಸಮ್ಮೇಳನದಲ್ಲಿ 'ಭಾವಮಂಥನ' ಕವನ ಸಂಕಲನ, 'ಹೊನ್ನವಳ್ಳಿಯ ಒಂದು ಸಾಂಸ್ಕೃತಿಕ ಅಧ್ಯಯನ', 'ಗಂಗಾಪಾನಿ' ಸ್ಮರಣ ಸಂಚಿಕೆ ಬಿಡುಗಡೆ ಮಾಡಲಾಯಿತು. ಸಮ್ಮೇಳನಾಧ್ಯಕ್ಷ ಆಲೂರು ದೊಡ್ಡನಿಂಗಪ್ಪ ಮಾತನಾಡಿ, ಪಶುಪಾಲನೆ ಗ್ರಾಮೀಣ ಬದುಕಿಗೆ ಆಧಾರಸ್ತಂಭ. ಇದಕ್ಕೆ ಪೂರಕವಾಗಿ ನೀರಾವರಿ ವ್ಯವಸ್ಥೆ ಬಲಪಡಿಸುವ ಅಗತ್ಯವಿದೆ. ಎತ್ತಿನಹೊಳೆಯ ಸಾಮರ್ಥ್ಯ ಹೆಚ್ಚಿಸುವ ಮೂಲಕ ಇನ್ನಷ್ಟು ಪ್ರದೇಶಗಳನ್ನು ನೀರಾವರಿ ವ್ಯಾಪ್ತಿಗೆ ಒಳಪಡಿಸುವುದರಿಂದ ಕೃಷಿ, ಪಶುಪಾಲನೆ ಮತ್ತು ಗ್ರಾಮೀಣ ಆರ್ಥಿಕತೆ ಚೈತನ್ಯಗೊಳ್ಳಲಿದೆ ಎಂದರು.

ತಾಲ್ಲೂಕಿನ ಅನೇಕ ಸಮುದಾಯ ಭವನಗಳು ಬೀಗ ಹಾಕಿರುವ ಸ್ಥಿತಿಯಲ್ಲಿವೆ. ಇವುಗಳಲ್ಲಿ ಕನ್ನಡ ಪತ್ರಿಕೆ, ನಿಯತಕಾಲಿಕೆ ಹಾಗೂ ಪುಸ್ತಕಗಳನ್ನು ಒದಗಿಸುವ ಮೂಲಕ ಜ್ಞಾನ ಕೇಂದ್ರಗಳಾಗಿ ರೂಪಿಸಬೇಕು. ದೇಸಿ ರಾಸುಗಳ ಸಂರಕ್ಷಣೆಗೆ ಪಶುಸಂಗೋಪನಾ ಇಲಾಖೆ ಮುಂದಾಗಬೇಕು. ಹೊನ್ನವಳ್ಳಿಯಲ್ಲಿ ಪ್ರಥಮ ದರ್ಜೆ ಕಾಲೇಜು ಸ್ಥಾಪಿಸುವ ಅಗತ್ಯವಿದೆ ಎಂದರು. ತಾಲ್ಲೂಕಿನ ಜನಪದ ಕಲಾವಿದರಿಗೆ ಪ್ರೋತ್ಸಾಹ, ಐತಿಹಾಸಿಕ ಅಯ್ಯನಬಾವಿಯನ್ನು ಸಂರಕ್ಷಿಸಬೇಕು ಎಂದು ಹೇಳಿದರು.

ಗುರುಕರಿಸಿದ್ದೇಶ್ವರ ಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಸರ್ಕಾರ ಜಾತಿ ಆಧಾರಿತ ವ್ಯವಸ್ಥೆ ತೆಗೆದುಹಾಕುವ ದಿಕ್ಕಿನಲ್ಲಿ ಚಿಂತನೆ ನಡೆಸಬೇಕು. ಕನ್ನಡ ಪ್ರೇಮದ ಜೊತೆಗೆ ಭ್ರಾತೃತ್ವ ಬೆಳೆಸುವ ಮನೋಭಾವ ಅಗತ್ಯವಿದೆ. ಪ್ರತಿ ಹಳ್ಳಿ ಹಾಗೂ ಪಂಚಾಯಿತಿ ಮಟ್ಟದಲ್ಲಿ ಸಾಹಿತ್ಯ ಭಂಡಾರ ಕೇಂದ್ರಗಳನ್ನು ತೆರೆದು ದಾಸೋಹಕ್ಕೆ ಒತ್ತು ನೀಡಬೇಕು ಎಂದು ಹೇಳಿದರು. ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅಗ್ರಹಾರ ಕೃಷ್ಣಮೂರ್ತಿ, ಕವಿ ಬಿ.ಎಂ.ಶ್ರೀಕಂಠಯ್ಯ ಕನ್ನಡ ಜಾಗೃತಿಗೆ ಅಪಾರ ಕೊಡುಗೆ ನೀಡಿದ್ದಾರೆ. ವಿಶ್ವವಿದ್ಯಾಲಯಗಳಲ್ಲಿ ಕನ್ನಡ ಭಾಷೆಗೆ ಸ್ಥಾನ ಕಲ್ಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿ, ನವೋದಯ ಸಾಹಿತ್ಯ ಚಳವಳಿಗೆ ಬಲ ನೀಡಿದರು.

ಪ್ರಾಚೀನ ಸಾಹಿತ್ಯ ಪ್ರಕಾರಗಳಿಗೆ ಹೊಸ ರೂಪ ನೀಡಿ, ಕಾವ್ಯ ಮತ್ತು ಕಾದಂಬರಿಗಳ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದರು. ಶಿಕ್ಷಣ ಎತ್ತ ಸಾಗುತ್ತಿದೆ', 'ಹೊನ್ನವಳ್ಳಿ ಅಂದು ಇಂದು' ವಿಚಾರ ಗೋಷ್ಠಿ, ಕವಿಗೋಷ್ಠಿಗಳು ನಡೆದವು. ತಹಶೀಲ್ದಾರ್ ಮೋಹನಕುಮಾರ್ ರಾಷ್ಟ್ರಧ್ವಜ, ತಾ.ಪಂ ಕಾರ್ಯನಿರ್ವಹಣಾಧಿಕಾರಿ ಎಚ್.ಎಂ.ಸುದರ್ಶನ್ ನಾಡಧ್ವಜ, ಹೊನ್ನವಳ್ಳಿ ಗ್ರಾ.ಪಂ ಅಧ್ಯಕ್ಷ ಎಚ್.ಆರ್.ಪುರುಷೋತ್ತಮ್ ಪರಿಷತ್ತಿನ ಧ್ವಜಾರೋಹಣ ನೆರವೇರಿಸಿದರು.


ಉದಯವಾಹಿನಿ ಚಿತ್ರ

# ಧರ್ತಿ ಅಭಾ ಜನಜಾತೀಯ ಗ್ರಾಮ ಉತ್ಕರ್ಷ್ ಅಭಿಯಾನದಡಿ ನಾಲ್ವರ ಆಯ್ಕೆ

### ● ಗಣರಾಜ್ಯೋತ್ಸವ ಸಮಾರಂಭದಲ್ಲಿ ಭಾಗವಹಿಸಲು ದೆಹಲಿಗೆ ಹೊರಟ ಹಾಡುಕೇ ಅಮ್ಮ ಮಾದಮ್ಮ

• ಉದಯವಾಹಿನಿ, ಯಳಂದೂರು

ತಾಲ್ಲೂಕಿನ ಬಿಳಿಗಿರಿಬೆಟ್ಟದ ಸೋಲಿಗ ಸಮುದಾಯದ ಮಹಿಳೆ ಮಾದಮ್ಮ ಅವರು ನವದೆಹಲಿಯಲ್ಲಿ ಜ.26 ರಂದು ನಡೆಯುವ ಗಣರಾಜ್ಯೋತ್ಸವ ಸಮಾರಂಭದಲ್ಲಿ ಭಾಗವಹಿಸಲು ಆಯ್ಕೆಯಾಗಿದ್ದಾರೆ.

ದುರ್ಬಲ ಬುಡಕಟ್ಟು ಗುಂಪು (ಪಿವಿಜಿಟಿ) ಅಡಿ ಮಾದಮ್ಮ ದಂಪತಿ ಆಯ್ಕೆಯಾಗಿದ್ದಾರೆ. ಮಾದಮ್ಮ 'ಹಾಡುಕೇ' ಕಲಾವಿದೆ. ಕಾಡು ಜನರ ಸಂಸ್ಕೃತಿ ಹಾಗೂ ಪರಿಸರ ಸಂರಕ್ಷಣೆ, ಜೇನು ಸಂಸ್ಕರಣೆ ಮುಂತಾದ ಕಿರು ಅರಣ್ಯ ಸಂಗ್ರಹದ ಮೂಲಕ ಸೋಲಿಗರಿಗೆ ಆದಾಯ ತಂದುಕೊಡುವ ನಿಟ್ಟಿನಲ್ಲಿ ಮುಂಚೂಣಿಯಲ್ಲಿ ಇದ್ದಾರೆ.

ನಲವತ್ತೈದು ವರ್ಷದ ಮಾದಮ್ಮ ಹೆಚ್ಚು ಕಲಿತಿಲ್ಲ ಗಿರಿವಾಸಿಗಳ ಸಮಾಜದಲ್ಲಿ ಹಾಡು-ಹಸೆ, ಕುಣಿತ ಮತ್ತು ಜನಪದ ಕಥೆಗಳನ್ನು ಪ್ರಸ್ತುತಪಡಿಸುತ್ತಾರೆ. ಪ್ರಸ್ತುತ ವನವಾಸಿಗಳೇ ನಿರ್ವಹಿಸುವ 'ಅಡವಿ' ಸಂಘದ ಅಧ್ಯಕ್ಷರಾಗಿ ಜನ ಮೆಚ್ಚುಗೆ ಗಳಿಸಿದ್ದಾರೆ. ಅರಣ್ಯ, ಪ್ರಾಣಿ, ಪಕ್ಷಿ, ಗುಡ್ಡ, ಕಣಿವೆ, ಹೊಳೆ, ಹಳ್ಳಿ ಸಮುದಾಯದ ಗಾಡ ಸಂಬಂಧಗಳನ್ನು ಜನಪದ ಸಾಂಸ್ಕೃತಿಕ ಪರಂಪರೆಯೊಡನೆ ಬೆಸೆದು ಹಾಡುತ್ತಾರೆ. ಕಾನನ ಮತ್ತು ವನ್ಯ ಜೀವಿಗಳ ಸಹವರ್ತನೆಯ ಸಂಕಥನಗಳನ್ನು ಇಡೀ ರಾತ್ರಿ ಹಾಡುತ್ತಾರೆ. ಹಬ್ಬಗಳ ಸಂದರ್ಭದಲ್ಲಿ ಲವಲಿಕೆಯಿಂದ ಕುಣಿಯುತ್ತಾರೆ.

**ಇಡೀ ರಾತ್ರಿ ಹಾಡುತ್ತಾರೆ**

ಪ್ರಾರ್ಥಿಸುತ್ತಾರೆ. ಜಿಲ್ಲಾ ಬುಡಕಟ್ಟು ಸಂಘದ ನಿರ್ದೇಶಕರಾಗಿ ಮಾದಮ್ಮ ಸೋಲಿಗ ಮಹಿಳೆಯರ ಸಬಲೀಕರಣಕ್ಕೆ ನೆರವು ಕಲ್ಪಿಸಿದ್ದಾರೆ. ಗೋರುಕಾನಾ, ಹಾಡುಕೇ, ಓಲಗ, ಕಗ್ಗ ಪ್ರಾರ್ಥನಾ ಗೀತೆಗಳನ್ನು ಹಾಡಿ ಮಂದಿಗೆ ಪರಿಚಯಿಸಿದ್ದು, ಇವರು ಜ.26 ರಂದು ಬಿಳಿಗಿರಿಬೆಟ್ಟದ ಸೋಲಿಗ ಮಹಿಳೆಯಾಗಿ ಪ್ರತಿನಿಧಿಸಿರುವುದು ಸಂತಸ ತಂದಿದೆ. ಈ ಬಾರಿ ಮಾದಮ್ಮ ದಂಪತಿ ಆಯ್ಕೆಯಾಗಿದ್ದಾರೆ ಎಂದು ಬುಡಕಟ್ಟು ಜಿಲ್ಲಾ ಸಂಘದ ಕಾರ್ಯದರ್ಶಿ ಸಿ.ಮಾದೇಗೌಡ ತಿಳಿಸಿದ್ದಾರೆ. ಭಾರತದಾದ್ಯಂತ ಆಯ್ಕೆಯಾಗಿರುವ ವಿವಿಧ ಬುಡಕಟ್ಟು ಜನರ ಜೊತೆ ಕುಳಿತು ಪರೇಡ್ ವೀಕ್ಷಿಸಿ, ರಾಷ್ಟ್ರಪತಿ ಮತ್ತು ಪ್ರಧಾನಿ ಜೊತೆ ಕುಳಿತು ಚಹಾ ಸವಿಯುವ ಕನಸಿನಲ್ಲಿ ಇದ್ದೇನೆ ಎನ್ನುತ್ತಾರೆ ಮಾದೇಗೌಡ,

**ಮಾದೇವಿ ಹಾಗೂ ಮಹದೇವ್:** ಚಾಮರಾಜನಗರ ತಾಲ್ಲೂಕಿನ ಬೇಡುಗುಳಿ ಕಾಲೋನಿಯ ದಂಪತಿ ಮಾದೇವಿ ಹಾಗೂ ಮಹದೇವ್ ಜ.26ರ ನಡೆಯುವ ಗಣರಾಜ್ಯೋತ್ಸವ ಕಾರ್ಯಕ್ರಮಕ್ಕೆ ಆಯ್ಕೆಯಾಗಿದ್ದಾರೆ. ಪ್ರೌಢ ಶಿಕ್ಷಣ ಪಡೆದಿರುವ ಇವರು ತಾಲ್ಲೂಕು ಮಟ್ಟದ ಸೋಲಿಗ ಸಮುದಾಯದ ನಾಯಕರಾಗಿ ಗುರುತಿಸಿಕೊಂಡಿದ್ದಾರೆ. ಅರಣ್ಯ ಹಕ್ಕು ಸಮಿತಿ ಕಾರ್ಯದರ್ಶಿ ಹಾಗೂ ಪಂಚಾಯಿತಿ ಸದಸ್ಯರಾಗಿ ಜನಪರ ಹೋರಾಟಗಳಲ್ಲಿ ತೊಡಗಿದ್ದಾರೆ.


ಉದಯವಾಹಿನಿ ಚಿತ್ರ

**ಕಾಫಿ ಕೃಷಿಕ ಎಚ್.ಪಿ.ಮಾದೇಗೌಡ**

**ಬಿಳಿಗಿರಿಬೆಟ್ಟದಲ್ಲಿ ಕಾಫಿ ಕೃಷಿಯಲ್ಲಿ ತೊಡಗಿರುವ ಎಚ್.ಪಿ.ಮಾದೇಗೌಡ ಜ.26ರಂದು ದೆಹಲಿಯಲ್ಲಿ ನಡೆಯುವ ಪರೇಡ್ ವೀಕ್ಷಣೆಗೆ ಆಯ್ಕೆಯಾಗಿದ್ದಾರೆ. ಸಾವಯವ ಕೃಷಿಯನ್ನು ಜನರಿಗೆ ಪರಿಚಯಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದಾರೆ.**

**ನಾಲ್ವರು ಸೋಲಿಗ ಪ್ರತಿನಿಧಿಗಳ ಆಯ್ಕೆ: ಮಾದೇಗೌಡ**

**ಧರ್ತಿ ಅಭಾ ಜನಜಾತೀಯ ಗ್ರಾಮ ಉತ್ಕರ್ಷ್ ಅಭಿಯಾನದಡಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ ವತಿಯಿಂದ ಬುಡಕಟ್ಟು ಪ್ರತಿನಿಧಿಗಳನ್ನು ಗಣರಾಜ್ಯೋತ್ಸವಕ್ಕೆ ಆಹ್ವಾನಿಸಿದ್ದು ಜಿಲ್ಲೆಯಿಂದ 4 ಮಂದಿ ಆಯ್ಕೆಯಾಗಿದ್ದಾರೆ. ಯಳಂದೂರು ಮತ್ತು ಚಾಮರಾಜನಗರ ತಾಲ್ಲೂಕು ವ್ಯಾಪ್ತಿಯಲ್ಲಿ ಅರಣ್ಯ ಹಕ್ಕು, ವಸತಿ, ಸಂಘಟನೆ, ಶಿಕ್ಷಣ, ಕೃಷಿ ಹಾಗೂ ವನವಾಸಿಗಳ ಶ್ರೇಯೋಭಿವೃದ್ಧಿಗೆ ಇವರು ಶ್ರಮಿಸಿದ್ದು, ಜ.26ರ ಗಣರಾಜ್ಯೋತ್ಸವ ಪರೇಡ್ಗೆ ಆಯ್ಕೆಗೆ ಕಾರಣವಾಗಿದೆ ಎನ್ನುತ್ತಾರೆ ಜಿಲ್ಲಾ ಬುಡಕಟ್ಟು ಸಂಘದ ಕಾರ್ಯದರ್ಶಿ ಸಿ.ಮಾದೇಗೌಡ.**

## ಮಿನಿ ನ್ಯೂಸ್

## ಮಾವಿಗೆ ಬೂದಿ ರೋಗ

• ಉದಯವಾಹಿನಿ, ಮಾಗಡಿ

ಮಾವು ಬೆಂಗಳೂರು ದಕ್ಷಿಣ ಜಿಲ್ಲೆಯ ಪ್ರಮುಖ ಬೆಳೆಯಾದ ಮಾವು ಹೂ ಬಿಡುವ ಹಂತದಲ್ಲಿದ್ದು ಬೂದಿ ಶಿಲೀಂಧ್ರ ರೋಗ ಕಾಣಿಸಿಕೊಂಡಿದೆ. ಸುಮಾರು 32,000 ಹೆಕ್ಟೇರ್ ಪ್ರದೇಶದಲ್ಲಿ ಮಾವು ಬೆಳೆಯಲಾಗಿದ್ದು, ಉತ್ತಮ ಹೂ ಬಿಟ್ಟಿದೆ. ಪರಾಗಸ್ಪರ್ಶ ಕ್ರಿಯೆ ಸಕ್ರಿಯವಾಗಿದೆ. ಕೆಲವೆಡೆ ಪೀಚು ಅಥವಾ ಗೋಲಿ ಗಾತ್ರದ ಹಣ್ಣು ಕಂಡು ಬಂದಿವೆ. ಆದರೆ, ತಣ್ಣನೆಯ ಹವಾಮಾನ ಹಾಗೂ ತಾಪಮಾನದ ಹಠಾತ್ ಬದಲಾವಣೆಯಿಂದ ಬೂದಿ ರೋಗ ಕಾಣಿಸಿಕೊಂಡಿದೆ.

ಮೋಡ ಮುಸುಕಿದ ವಾತಾವರಣ, ಚಳಿ ಹೆಚ್ಚಾದರೆ ಬೂದಿ ರೋಗ ಹೆಚ್ಚಾಗುವ ಜೊತೆಗೆ ಹೂವು ಹಾಗೂ ಕಾಯಿ ಉದುರುವ ಆತಂಕ ಎದುರಾಗಿದೆ. ಸೂಕ್ತ ಶಿಲೀಂಧ್ರ ನಾಶಕ ಬಳಕೆಯಿಂದ ಬೂದಿರೋಗ ತಡೆಗಟ್ಟಬಹುದು. ಮಾಹಿತಿಗೆ ರೈತರು ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಬಹುದು.

## ಕಾರಿಗೆ ಬಸ್ ಡಿಕ್ಕಿ: ದಂಪತಿಯ ಜೀವ ಉಳಿಸಿದ ಸೀಟ್ ಬೆಲ್ಟ

• ಉದಯವಾಹಿನಿ, ರಾಮನಗರ

ತಾಲ್ಲೂಕಿನ ಸಂಗಬಸವನದೊಡ್ಡಿ ಬಳಿ ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಇತ್ತೀಚೆಗೆ ಬಸ್ ಡಿಕ್ಕಿಯಿಂದಾಗಿ ಕಾರೊಂದು ಪಲ್ಟಿಯಾಗಿದ್ದು, ಕಾರಿನಲ್ಲಿದ್ದ ವೃದ್ಧ ದಂಪತಿ ಆಶ್ಚರ್ಯಕರ ರೀತಿಯಲ್ಲಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಇದಕ್ಕೆ ಕಾರಣವಾಗಿದ್ದು ಅವರ ಧರಿಸಿದ್ದ ಸೀಟ್ ಬೆಲ್ಟ್. ವೃದ್ಧ ಅಬ್ದುಲ್ ಫಜಲ್ ಅವರು ಪತ್ನಿಯೊಂದಿಗೆ ಸಂಬಂಧಿಕರ ಮದುವೆ ಸಮಾರಂಭದಲ್ಲಿ ಪಾಲ್ಗೊಳ್ಳಲು ಮೈಸೂರಿಗೆ ಕಾರಿನಲ್ಲಿ ಹೋಗುತ್ತಿದ್ದರು. ರಾಷ್ಟ್ರೀಯ ಹೆದ್ದಾರಿಯಲ್ಲಿ ಹೊರಟಿದ್ದ ಅವರ ಕಾರು ಸಂಗಬಸವನದೊಡ್ಡಿ ಬಳಿಗೆ ಬರುವಾಗ ವೇಗವಾಗಿ ಬಂದ ಕೆಎಸ್ಆರ್‌ಟಿಸಿ ಬಸ್ ಡಿಕ್ಕಿ ಹೊಡೆದಿದೆ.

ಡಿಕ್ಕಿಯ ರಭಸಕ್ಕೆ ಕಾರು ಪಲ್ಟಿಯಾಗಿ ಪಕ್ಕದ ರಸ್ತೆ ವಿಭಜಕದ ಮೇಲೆ ಬಿದ್ದಿದೆ. ಘಟನೆಯಲ್ಲಿ ಕಾರು ಸಂಪೂರ್ಣ ನಜ್ಜುಗುಜ್ಜಾದರೂ, ದಂಪತಿಗೆ ಸಣ್ಣಪುಟ್ಟ ಗಾಯವಾಗಿರುವುದು ಬಿಟ್ಟರೆ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಕೂಡಲೇ ಸ್ಥಳೀಯರು ಸ್ಥಳಕ್ಕೆ ತೆರಳಿ ಇಬ್ಬರನ್ನೂ ಕಾರಿನಿಂದ ಹೊರಕ್ಕೆ ಎಳೆದಿದ್ದಾರೆ. ದಂಪತಿ ಸೀಟ್ ಬೆಲ್ಟ್ ಧರಿಸಿದ್ದರಿಂದ ಹೆಚ್ಚಿನ ಅನಾಹುತ ಸಂಭವಿಸಿಲ್ಲ. ವಾಹನ ಸವಾರರು ಚಾಲನೆ ಮಾಡುವಾಗ ತಪ್ಪದೆ ಸೀಟ್ ಬೆಲ್ಟ್ ಧರಿಸುವ ಜೊತೆಗೆ ಸಂಚಾರ ನಿಯಮಗಳನ್ನು ಪಾಲಿಸಬೇಕು ಎಂದು ರಾಮನಗರ ಗ್ರಾಮಾಂತರ ಠಾಣೆ ಪೊಲೀಸರು ತಿಳಿಸಿದರು.

## ಜೋಳ ಖರೀದಿ ಕೇಂದ್ರ ಆರಂಭ

• ಉದಯವಾಹಿನಿ, ಗುಡಿಬಂಡೆ

ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಜೋಳ ಖರೀದಿ ಕೇಂದ್ರ ಸ್ಥಾಪನೆ ಮಾಡಿರುವುದು ಸ್ವಾಗತಾರ್ಹ ಎಂದು ಎಕೆಆರ್‌ಎಸ್‌ರೈತ ಸಂಘ ಜಿಲ್ಲಾ ಸಹ ಸಂಚಾಲಕ ಎಚ್.ಪಿ ಲಕ್ಷ್ಮಿನಾರಾಯಣ ಹೇಳಿದರು. ಅಖಿಲ ಕರ್ನಾಟಕ ರೈತ ಸಂಘಟನೆಯಿಂದ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಕ್ಷೇತ್ರದಲ್ಲಿ ಸಾವಿರಾರು ರೈತರು ಜೋಳ ಬೆಳೆಯುತ್ತಾರೆ. ಆದರೆ ಆ ಜೋಳವನ್ನು ಮಾರಾಟ ಮಾಡಬೇಕಾದರೆ ಸರ್ಕಾರದಿಂದ ಖರೀದಿ ಕೇಂದ್ರ ಇರಲಿಲ್ಲ. ಜೋಳ ಖರೀದಿ ಕೇಂದ್ರ ಪ್ರಾರಂಭ ಮಾಡಬೇಕು ಎಂದು ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ ಮಾಡಿದ್ದರ ಭಾಗವಾಗಿ ರಾಜ್ಯ ಸರ್ಕಾರದ ಮೇಲೆ ಶಾಸಕ ಎಸ್.ಎನ್ ಸುಬ್ಬಾರೆಡ್ಡಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಸಿ ಸುಧಾಕರ್ ಒತ್ತಡ ಹಾಕಿ ಜೋಳ ಖರೀದಿ ಕೇಂದ್ರವನ್ನು ತೆರೆದಿದ್ದಾರೆ ಎಂದರು.

ಬಾಗೇಪಲ್ಲಿ ಎಪಿಎಂಸಿ ಕೇಂದ್ರದಲ್ಲಿ ಜೋಳ ಖರೀದಿ ಪ್ರಾರಂಭ ಮಾಡಿದ್ದಾರೆ. ರೈತರು ನೋಂದಣಿ ಮಾಡಿಸಿಕೊಂಡು ರೈತರು ಈ ಅವಕಾಶವನ್ನು ಉಪಯೋಗಿಸಿಕೊಳ್ಳುವಂತೆ ಆಗಬೇಕಾಗಿದೆ ಎಂದರು.

## ನಗರಸಭೆ ಪೌರಾಯುಕ್ತಗೆ ಧಮ್ಕಿ ರಾಜೀವ್ ಗೌಡ ಜಾಮೀನು ಅರ್ಜಿ ವಜಾ

• ಉದಯವಾಹಿನಿ, ಚಿಂತಾಮಣಿ

ಶಿಡ್ಲಘಟ್ಟದ ನಗರಸಭೆ ಪೌರಾಯುಕ್ತ ಅಮೃತಾಗೌಡ ಅವರಿಗೆ ಧಮ್ಕಿ ಹಾಕಿ ತಲೆಮರೆಸಿಕೊಂಡಿರುವ ಕಾಂಗ್ರೆಸ್ ಮುಖಂಡ ರಾಜೀವ್ ಗೌಡ ಅವರ ನಿರೀಕ್ಷಣಾ ಜಾಮೀನು ಅರ್ಜಿಯನ್ನು ಇಲ್ಲಿಯ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ವಜಾಗೊಳಿಸಿದೆ. ರಾಜೀವ್ ಗೌಡ ಜ.17ರಂದು ವಕೀಲರ ಮೂಲಕ ನಿರೀಕ್ಷಣಾ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು.

ಅರ್ಜಿ ವಿಚಾರಣೆ ನಡೆಸಿದ್ದ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ಪ್ರಭಾರ ನ್ಯಾಯಾಧೀಶ ಕಾಂತರಾಜು ಜ. 22ರಂದು ವಿಚಾರಣೆ ಮುಗಿಸಿ, 24ರಂದು ತೀರ್ಪು ಕಾಯ್ದಿರಿಸಿದ್ದರು. ರಾಜೀವ್ ಗೌಡ ಪರ ವಿವೇಕ ರೆಡ್ಡಿ ವಾದ ಮಂಡಿಸಿದರೆ, ಸರ್ಕಾರಿ ಅಭಿಯೋಜಕಿ ಸುಮತಿ ಶಾಂತಾ ಮೇರಿ ಜಾಮೀನು ಅರ್ಜಿ ವಿರೋಧಿಸಿ ವಾದ ಮಾಡಿದ್ದರು. ಪೌರಾಯುಕ್ತ ಜಿ. ಅಮೃತ ಗೌಡ ಅವರು ರಾಜೀವ್ ಗೌಡ ವಿರುದ್ಧ ಶಿಡ್ಲಘಟ್ಟ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು. ದೂರಿನ ಆಧಾರದ ಮೇಲೆ ಪೊಲೀಸರು ಬಿಎನ್‌ಎಸ್ ಸೆಕ್ಷನ್ 132, 224, 352, 351(3) ಮತ್ತು 56ರ ಅಡಿ ಎಫ್‌ಐಆರ್ ದಾಖಲಿಸಿದ್ದರು. ಬಂಧನದಿಂದ ತಪ್ಪಿಸಿಕೊಳ್ಳಲು ರಾಜೀವ್ ಗೌಡ ತಲೆ ಮರೆಸಿಕೊಂಡಿದ್ದು, ವಕೀಲರ ಮೂಲಕ ನಿರೀಕ್ಷಣಾ ಜಾಮೀನಿಗೆ ಅರ್ಜಿ ಸಲ್ಲಿಸಿದ್ದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಬೆಳಿಗ್ಗೆ | 01:30 ರಿಂದ 03:00 |
| ಯಮಗಂಡ ಕಾಲ | ಮಧ್ಯಾಹ್ನ | 10:30 ರಿಂದ 12:00 |

**ಮೇಷ** ನೀವು ಮಾನಸಿಕವಾಗಿ ಅತ್ಯಂತ ದುರ್ಬಲರಾಗಿರುತ್ತೀರಿ – ಆದ್ದರಿಂದ ನೀವು ನೋವಿಗೀಡಾಗಬಹುದಾದ ಸಂದರ್ಭಗಳಿಂದ ದೂರ ಉಳಿಯಿರಿ. ಹಣಕಾಸು ಖಂಡಿತವಾಗಿಯೂ ವೃದ್ಧಿಯಾಗುತ್ತದೆ.

**ವೃಷಭ** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ.

**ಮಿಥುನ** ದುಃಖಿತರಾಗಿ, ಖಿನ್ನರಾಗಿರಬೇಡಿ. ದೀರ್ಘಕಾಲದವರೆಗೆ ಆರ್ಥಿಕ ಬಿಕ್ಕಟ್ಟಿನಲ್ಲಿ ಸಿಲುಕಿದ್ದವರು, ಅವರು ಎಲ್ಲಿಂದಲಾದರೂ ಹಣವನ್ನು ಪಡೆಯಬಹುದು, ಇದು ಜೀವನದ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ.

**ಕರ್ಕಾಟಕ** ಈ ರಾಶಿಚಕ್ರದ ಜನರು ತಮ್ಮ ಸಹೋದರ–ಸಹೋದರಿಯರೊಂದಿಗೆ ಮನೆಯಲ್ಲಿ ಯಾವುದೇ ಚಲನ ಚಿತ್ರ ಅಥವಾ ಮ್ಯಾಚ್ ನೋಡಬಹುದು. ಇದನ್ನು ಮಾಡುವುದರಿಂದ ನಡುವಿನ ಪ್ರೀತಿಯಲ್ಲಿ ಹೆಚ್ಚಳವಾಗುತ್ತದೆ.

**ಸಿಂಹ** ನಿಮ್ಮ ಮನಸ್ಸು ಇತ್ತೀಚಿನ ಘಟನೆಗಳಿಂದ ತೊಂದರೆಗೊಳಗಾಗುತ್ತದೆ. ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗೆ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ.

**ಕನ್ಯಾ** ಬಾಕಿಯಿರುವ ಯೋಜನೆಗಳು ಅಂತಿಮ ರೂಪ ಪಡೆಯುತ್ತವೆ. ಬಿಡುವಿಲ್ಲದ ದಿನಚರಿಯ ನಂತರವೂ ನಿಮಗಾಗಿ ಸಮಯವೂ ಸಿಗುತ್ತಿದ್ದರೆ, ಈ ಸಮಯವನ್ನು ಸರಿಯಾಗಿ ಬಳಸಿಕೊಳ್ಳಲು ಕಲಿಯಬೇಕು.

**ತುಲಾ** ವಿಶೇಷವಾಗಿ ತಿರುವುಗಳಲ್ಲಿ ವಾಹನ ಚಾಲನೆ ಮಾಡುವಾಗ ಎಚ್ಚರಿಕೆಯಿಂದಿರಿ. ಬೇರೆಯವರ ಉದಾಸೀನತೆ ನಿಮಗೆ ಸಮಸ್ಯೆಗಳನ್ನು ಉಂಟುಮಾಡಬಹುದು. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ.

**ವೃಶ್ಚಿಕ** ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು.

**ಧನಸ್ಸು** ನೀವು ಸಮಯವೇ ಹಣವೆಂದು ನಿಮ್ಮ ಅತ್ಯುತ್ತಮ ಸಂಭಾವ್ಯತೆಯನ್ನು ತಲುಪಲು ಹೆಜ್ಜೆಗಳನ್ನಿಡಬೇಕು. ನೀವು ಉಚಿತ ಸಮಯದಲ್ಲಿ ನಿಮಗೆ ನೆಚ್ಚಿದ ಕೆಲಸವನ್ನು ಮಾಡಲು ಇಷ್ಟಪಡುತ್ತೀರಿ.

**ಮಕರ** ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು.

**ಕುಂಭ** ಕಿಕ್ಕಿರಿದ ಬಸ್‌ನಲ್ಲಿ ಪ್ರಯಾಣಿಸುವಾಗ ರಕ್ತದೊತ್ತಡವಿರುವ ರೋಗಿಗಳು ಅವರ ಆರೋಗ್ಯದ ಬಗ್ಗೆ ಹೆಚ್ಚು ಎಚ್ಚರಿಕೆ ವಹಿಸಬೇಕು. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ.

**ಮೀನ** ಭಾವನಾತ್ಮಕ ಅಪಾಯ ನಿಮ್ಮ ಪರವಾಗಿರುತ್ತದೆ. ನಿಮ್ಮ ಪ್ರೀತಿಪಾತ್ರರೊಡನೆ ನಿಮ್ಮ ವೈಯಕ್ತಿಕ ಭಾವನೆಗಳು / ರಹಸ್ಯಗಳನ್ನು ಹಂಚಿಕೊಳ್ಳಲು ಇದು ಸರಿಯಾದ ಸಮಯವಲ್ಲ.

### ವಿಶಾಖಪಟ್ಟಣದ ಉಕ್ಕಿನ ಕಾರ್ಖಾನೆಯ ಮಾದರಿಯಲ್ಲಿಯೇ ಭದ್ರಾವತಿಯ ವಿಐಎಲ್ ಪುನಶ್ಚೇತನ

# ವಿಐಎಸ್‌ಎಲ್‌ನಲ್ಲಿ ಉತ್ಕೃಷ್ಟ ದರ್ಜೆ ಉಕ್ಕು ಉತ್ಪಾದನೆ: ಎಚ್‌ಡಿಕೆ

• ಉದಯವಾಹಿನಿ ಭದ್ರಾವತಿ

ಆಂಧ್ರ ಪ್ರದೇಶದ ವಿಶಾಖಪಟ್ಟಣದ ಉಕ್ಕಿನ ಕಾರ್ಖಾನೆಯ ಮಾದರಿಯಲ್ಲಿಯೇ ಭದ್ರಾವತಿಯ ವಿಐಎಲ್ ಪುನಶ್ಚೇತನಗೊಳಿಸಿ. ವಿದೇಶದಿಂದ ಈಗ ಆಮದು ಮಾಡಿಕೊಳ್ಳುತ್ತಿರುವ ಉತ್ಕೃಷ್ಟ ದರ್ಜೆಯ ಉಕ್ಕನ್ನು ಇಲ್ಲಿಯೇ ಉತ್ಪಾದಿಸಲು ನಿರ್ಧರಿಸಿದ್ದೇವೆ ಎಂದು ಕೇಂದ್ರದ ಉಕ್ಕು ಹಾಗೂ ಬೃಹತ್ ಕೈಗಾರಿಕೆ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದರು. ಭದ್ರಾವತಿಯಲ್ಲಿ ಆರಂಭವಾದ ತರಳಬಾಳು ಹುಣ್ಣಿಮೆ ಮಹೋತ್ಸವದಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಹಾಗೂ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಒಪ್ಪಿಸಿ ವಿಶಾಖಪಟ್ಟಣದ ಉಕ್ಕಿನ ಕಾರ್ಖಾನೆಯ ರೂ.35,000 ಕೋಟಿ ಸಾಲ ತೀರಿಸಿ ಪುನರ್ ಆರಂಭಿದ್ದೇನೆ. ಈಗ ಅಲ್ಲಿ ನಿತ್ಯ 21 ಟನ್ ಉಕ್ಕು ಉತ್ಪಾದನೆ ಆಗುತ್ತಿದೆ. ಅದೇ ರೀತಿ ವಿಐಎಸ್‌ಎಲ್ ಕೂಡ ಉಕ್ಕು ಉತ್ಪಾದನೆ ಮಾಡಲಿದೆ ಎಂದರು. ಕಾರ್ಯಕ್ರಮದ ಆರಂಭದಲ್ಲಿ ಮಾತನಾಡಿದ ತರಳಬಾಳು ಮಠದ ಜಗದ್ಗುರು ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ, 1923ರಲ್ಲಿ ಸರ್ ಎಂ.ವಿಶ್ವೇಶ್ವರಯ್ಯ ಕಾರ್ಖಾನೆ ರಾಜಪ್ರಭುತ್ವದಲ್ಲಿಯೇ ಚೆನ್ನಾಗಿತ್ತು. ಈಗ ಪ್ರಜಾಪ್ರಭುತ್ವದ ಕಾಲದಲ್ಲಿ ಹಾಳು ಹಂಪೆಯಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಯಡಿಯೂರಪ್ಪ ಸಿಎಂ ಆಗಿದ್ದಾಗ ಜಗಳೂರು, ಭರಮಸಾಗರ, ಹಳೇಬೀಡು ಏತ ನೀರಾವರಿ ಯೋಜನೆಗಳಿಗೆ ನೂರಾರು ಕೋಟಿ ಕೊಟ್ಟಿದ್ದಾರೆ. ಅಧಿಕಾರದಲ್ಲಿ ಇರಲಿ, ಇಲ್ಲದೇ ಇರಲಿ ಅವರ ನೆರವು ಸ್ಮರಿಸುತ್ತೇವೆ. ಅದೇ ರೀತಿ ಕುಮಾರಸ್ವಾಮಿ ಕೂಡ ಈಗ ವಿಐಎಸ್‌ಎಲ್ ವಿಚಾರದಲ್ಲಿ ನೆರವು ನೀಡಲಿ ಎಂದರು. ಚಿತ್ರದುರ್ಗ ಸಂಸದ ಗೋವಿಂದ ಕಾರಜೋಳ ಮಾತನಾಡಿ, ಯಡಿಯೂರಪ್ಪ ಅವರು ಸಿಎಂ ಆಗಿದ್ದಾಗ ರೈತರ ಬಗ್ಗೆ ಕಳಕಳಿಯಿಂದ ಏತ ನೀರಾವರಿ ಯೋಜನೆ ಜಾರಿ ಮಾಡಿದರು. ರೈತರ ಕಲ್ಯಾಣ ಮಾಡಿ ಸಿರಿಗೆರೆ ಶ್ರೀಗಳು ಇತಿಹಾಸ ನಿರ್ಮಿಸಿದ್ದಾರೆ. ಶೂದ್ರರಿಗೆ ಶಿಕ್ಷಣ ದೊರೆಯದ ಕಾಲಘಟ್ಟದಲ್ಲಿ, ಅವರನ್ನು ಒಳಗಡೆಯೂ ಸೇರಿಸದ ಸ್ಥಿತಿ ಇದ್ದಾಗ ಎಲ್ಲಾ ಮಕ್ಕಳಿಗೆ ಒಂದೇ ಶಾಲೆ–ಕಾಲೇಜು ಹಾಸ್ಟೆಲ್ ವ್ಯವಸ್ಥೆ ಕಲ್ಪಿಸುವ ಕಾರ್ಯವನ್ನು ಮಠ ಮಾಡುತ್ತಾ ಬಂದಿದೆ ಎಂದು ಶ್ಲಾಘಿಸಿದರು. ಉಡುಪಿ ಪುತ್ತಿಗೆ ಮಠದ ಸುಗುಣೇಂದ್ರ ತೀರ್ಥ ಶ್ರೀಗಳು ಸಾನ್ನಿಧ್ಯ ವಹಿಸಿದ್ದರು. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಶಿವಮೊಗ್ಗ ಗ್ರಾಮಾಂತರ ಕ್ಷೇತ್ರದ ಶಾಸಕಿ ಶಾರದಾ ಪೂರ್ಯಾನಾಯ್ಕ, ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ, ಶಿವಮೊಗ್ಗ ಸಂಸದ ಬಿ.ವೈ.ರಾಘವೇಂದ್ರ, ವಿಧಾನ ಪರಿಷತ್ ಸದಸ್ಯ ಎಸ್. ಎನ್. ಭೋಜೇಗೌಡ, ಶಾಸಕ ಬಿ.ಕೆ.ಸಂಗಮೇಶ್ವರ, ಭದ್ರಾವತಿ ನಗರಸಭೆ ಅಧ್ಯಕ್ಷೆ ಗೀತಾ ರಾಜಕುಮಾರ್, ಉಪನ್ಯಾಸ ನೀಡಿದರು.



ಉದಯವಾಹಿನಿ ಚಿತ್ರ

### ಮಹಾಮಂಟಪದ ಸುತ್ತಲೂ ಮಿನಿ ಮಾರ್ಕೆಟ್

ಮೈದಾನದ ಸುತ್ತಲೂ ಅಪಾರ ಸಂಖ್ಯೆಯಲ್ಲಿ ತಿಂಡಿ–ತಿನಿಸಿನ ಅಂಗಡಿಗಳ ತೆರೆದಿದ್ದು ಮಲೆನಾಡು ಮಧ್ಯ ಕರ್ನಾಟಕ ಉತ್ತರ ಕರ್ನಾಟಕ ಭಾಗದ ಊಟೋಪಹಾರದ ಗಮ್ಮತ್ತು ಅಲ್ಲಿ ಕಾಣಸಿಕ್ಕಿತು. ಖಾರ ಮಂಡಕ್ಕಿ ಮಿರ್ಚಿ ಬಜಿ ಬೆಣ್ಣೆದೋಸೆಯ ಘಮ ಕೂಡ ಇತ್ತು. ಮಧ್ಯಾಹ್ನದಿಂದಲೇ ಮಹಾಮಂಟಪಕ್ಕೆ ಬರುತ್ತಿದ್ದವರು ಚಹಾ ಊಟೋಪಹಾರಕ್ಕೆ ಅವುಗಳನ್ನು ಆಶ್ರಯಿಸಿದರು. ಹೋಟೆಲ್ ಮಾತ್ರವಲ್ಲದೇ ಟ್ರ್ಯಾಕ್ಟರ್ ಕೃಷಿ ಉಪಕರಣ ವೈವಿಧ್ಯಮಯ ಸಾಮಗ್ರಿಗಳ ಮಾರಾಟವೂ ಭರದಿಂದ ನಡೆದಿದ್ದು ಮಿನಿ ಮಾರುಕಟ್ಟೆಯೇ ಸೃಷ್ಟಿಯಾಗಿತ್ತು. ಮಹಾಮಂಟಪದ ಭಿತ್ತಿಯ ಮೇಲೆ ಮಠಕ್ಕೆ ಭೇಟಿ ಕೊಟ್ಟಿದ್ದ ಗಣ್ಯರು ಮಠದ ಇತಿಹಾಸ ಬಿಂಬಿಸುವ ಚಿತ್ರಗಳನ್ನು ಹಾಕಿದ್ದು ಅದನ್ನು ವೀಕ್ಷಿಸಿ ಸೆಲ್ಫಿ ತೆಗೆದುಕೊಂಡು ಮುನ್ನಡೆದರು. ಪೂರ್ಣಕುಂಭ ಹೊತ್ತ ಮಹಿಳೆಯರು ಗಣ್ಯರನ್ನು ವೇದಿಕೆಗೆ ಕರೆತಂದರು. ನಾಡಗೀತೆಯೊಂದಿಗೆ ಆರಂಭವಾದ ಕಾರ್ಯಕ್ರಮವನ್ನು ಚುಮು ಚುಮು ಚಳಿಯ ನಡುವೆ ಕುಳಿತು ನೆರೆದ ಸಾವಿರಾರು ಜನರು ಕಣ್ತುಂಬಿಕೊಂಡರು. ತರಳಬಾಳು ಕಲಾ ಸಂಘದ ವಿದ್ಯಾರ್ಥಿಗಳು ಪ್ರದರ್ಶಿಸಿದ ಮಲ್ಲಿಹಗ್ಗ ಕ್ರೀಡೆ ನೆರೆದವರ ಮೈನವಿರೇಳಿಸಿತು. ಸಿರಿಗೆರೆ ಸಿಬಿಎಸ್‌ಸಿ ಶಾಲೆ ಭದ್ರಾವತಿಯ ನಟರಾಜ ಸಂಗೀತ ಕಲಾಕೇಂದ್ರದ ಮಕ್ಕಳು ಭರತನಾಟ್ಯ ಪ್ರದರ್ಶಿಸಿದರು.

> ವಿಐಎಸ್‌ಎಲ್ ಪುನಶ್ಚೇತನಗೊಂಡು ಭದ್ರಾವತಿಯ ಭವ್ಯ ಇತಿಹಾಸ ಮರುಕಳಿಸುವ ಸಮಯ ಹತ್ತಿರ ಬಂದಿದೆ. ಬಂಡವಾಳ ಹಿಂತೆಗೆತ ಕಾಲದಿಂದಲೂ ಅದರ ಜೀವ ಉಳಿಸುವ ಕೆಲಸ ಮಾಡುತ್ತಿದ್ದೇನೆ. ಶ್ರೀಗಳು ಮೊದಲ ಕಾಣಿಕೆ ಆಗಿ ರೂ.5 ಕೋಟಿ ಘೋಷಣೆ ಮಾಡಿರುವುದು ಶ್ಲಾಘನೀಯ. -ಬಿ.ವೈ.ರಾಘವೇಂದ್ರ, ಸಂಸದ

> ಕೇಂದ್ರ ಸರ್ಕಾರದ ಆತ್ಮನಿರ್ಭರ ಯೋಜನೆಗೆ ಭಗವದ್ಗೀತೆಯ ಬಲ ಇದೆ. ಗೀತೆ ವಚನಗಳ ಸಾರವನ್ನು ಜ್ಞಾಪಿಸಿಕೊಂಡು ಜಾಗೃತರಾಗಲು ತರಳಬಾಳು ಹುಣ್ಣಿಮೆಯಂತಹ ಕಾರ್ಯಕ್ರಮಗಳು. - ಸುಗುಣೇಂದ್ರ ತೀರ್ಥ ಸ್ವಾಮೀಜಿ ಪುತ್ತಿಗೆ ಮಠ ಉಡುಪಿ

> ವಿಐಎಸ್‌ಎಲ್‌ನ 150 ಎಕರೆಯಷ್ಟು ಈ ಜಾಗ ಕಸದ ಗುಂಡಿಯಾಗಿತ್ತು. ತರಳಬಾಳು ಹುಣ್ಣಿಮೆಯ ಕಾರಣಕ್ಕೆ ಸ್ವಚ್ಛಗೊಂಡಿದೆ. ಮತ್ತೆ ಕಸ ಬೀಳದಂತೆ ಬೇಲಿ ಹಾಕಿ ರಕ್ಷಿಸಲಿ. -ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಸಿರಿಗೆರೆ ಮಠ


> ಶರಣರ 22000 ವಚನಗಳನ್ನು ಇ–ತಂತ್ರಾಂಶದಲ್ಲಿ ಅಳವಡಿಸಿ ಜನರಿಗೆ ಸಿಗುವಂತೆ ಮಾಡಿದ ಶ್ರೇಯ ಸಿರಿಗೆರೆ ಮಠದ ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಅವರಿಗೆ ಸಲ್ಲುತ್ತದೆ. -ಗೋವಿಂದ ಕಾರಜೋಳ ಸಂಸದ

## ರಥಸಪ್ತಮಿ: 108 ಸೂರ್ಯನಮಸ್ಕಾರ, ಅಗ್ನಿಹೋತ್ರ, ಅರ್ಘ್ಯೋದಕ ಸಮರ್ಪಣೆ

• ಉದಯವಾಹಿನಿ ಚಿತ್ರದುರ್ಗ

ರಥಸಪ್ತಮಿ ದಿನದ ಅಂಗವಾಗಿ ಭಾನುವಾರ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ವತಿಯಿಂದ ನಗರದ ತುರುವನೂರು ರಸ್ತೆಯ ಶ್ರೀಪ್ರಸನ್ನ ವೆಂಕಟೇಶ್ವರಸ್ವಾಮಿ ದೇವಸ್ಥಾನ ಆವರಣದಲ್ಲಿ ಸೂರ್ಯದೇವರ ಆರಾಧನೆ ಕಾರ್ಯಕ್ರಮ ಆಯೋಜಿಸಲಾಗಿತ್ತು ಮುಂಜಾನೆ ಸಮಯ 5ರಿಂದ7:30 ರವರೆಗೆ ನಡೆದ ಕಾರ್ಯಕ್ರಮದಲ್ಲಿ ಯೋಗ ಸಂಸ್ಥೆಯ ಸದಸ್ಯರು ಹಾಗೂ ಸೂರ್ಯದೇವರ ಉಪಾಸಕರು ಶ್ರದ್ಧಾಭಕ್ತಿಯಿಂದ ಸೂರ್ಯದೇವರಿಗೆ ಪ್ರಿಯವಾದ ಅಗ್ನಿಹೋತ್ರ ಹೋಮ ನಡೆಸಿ ಅನಾಯಾಸವಾಗಿ 108 ಸೂರ್ಯನಮಸ್ಕಾರ ಪ್ರದರ್ಶನ ನೀಡಿ ಅರ್ಘ್ಯವನ್ನು ಸಮರ್ಪಿಸಿದರು.

ಕಾರ್ಯಕ್ರಮ ಕುರಿತು ಮಾತನಾಡಿದ ಯೋಗ ಪ್ರಚಾರಕ ರವಿ ಕೆ.ಅಂಬೇಕರ್ ಸೂರ್ಯದೇವರ ಆರಾಧನೆಯಿಂದ ಆಯುಷ್ಯ ಆರೋಗ್ಯ, ಸಂಪತ್ತು, ಆತ್ಮವಿಶ್ವಾಸ ದೊರೆಯುತ್ತದೆ ಹಾಗೆಯೇ ರಥಸಪ್ತಮಿಯಂದು ಸೂರ್ಯೋದಯದ ಮೊದಲೇ ಬ್ರಹ್ಮ ಮುಹೂರ್ತದಲ್ಲಿ ಎದ್ದು, ಎಕ್ಕದ ಗಿಡದ 7 ಎಲೆಗಳನ್ನು ಅಕ್ಷತೆಯೊಂದಿಗೆ ತಲೆ, ಎರಡು ಭುಜಗಳು, ಬೆನ್ನು, 2 ತೊಡೆಗಳು ಮತ್ತು ಎರಡು ಕಾಲುಗಳ ಮೇಲಿಟ್ಟುಕೊಂಡು ಸ್ನಾನ ಮಾಡಿ ಸೂರ್ಯೋದಯದ ಸಮಯದಲ್ಲಿ ಅಥವಾ ಒಂದು ಗಂಟೆಯೊಳಗೆ ಸೂರ್ಯನಿಗೆ ನೀರನ್ನು ಅರ್ಘ್ಯವಾಗಿ ಅರ್ಪಿಸುವುದು ಶುಭಪ್ರದವಾಗಿದೆ. ನಿಯಮಿತವಾಗಿ ಇದನ್ನು ಮಾಡಿದರೆ ಪೂರ್ವ ಜನ್ಮಗಳ ಪಾಪಗಳು ನಿವಾರಣೆಯಾಗಿ, ದುಃಖಗಳು ದೂರವಾಗುತ್ತವೆ ಎಂದು ನಮ್ಮ ಸನಾತನ ಹಿಂದೂ ಧರ್ಮದಲ್ಲಿ ಪ್ರತೀತಿ ಇದೆ ಅದಕ್ಕಾಗಿ ನಮ್ಮ ಹಿರಿಯರು ಪ್ರತಿದಿನ ಈ ಪದ್ಧತಿಯನ್ನು ಅನುಸರಿಸುತ್ತಿದ್ದರು ಈಗಲೂ ಕೆಲವೊಂದು ಮನೆಗಳಲ್ಲಿ ಕಾಣಬಹುದಾಗಿದೆ ಅದರಂತೆ ಸೂರ್ಯದೇವರನ್ನು ಆರಾಧಿಸುವಸೂರ್ಯ ನಮಸ್ಕಾರ ಪ್ರತಿದಿನ ಮಾಡುವುದು ಶ್ರೇಷ್ಠ ಎಂದು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ 108 ಸೂರ್ಯನಮಸ್ಕಾರ ಪೂರ್ಣಪ್ರದರ್ಶನ ನೀಡಿದ ಯೋಗ ಸಾಧಕರಿಗೆ ಯೋಗ ಸಂಸ್ಥೆ ವತಿಯಿಂದ ಅಭಿನಂದನಾಪತ್ರ ನೀಡಿ ಗೌರವಿಸಲಾಯಿತು.



ಉದಯವಾಹಿನಿ ಚಿತ್ರ

**ಭಾರತೀಯ ಯೋಗ ಶಿಕ್ಷಣ ಸಂಸ್ಥೆಯಿಂದ ಕಾರ್ಯಕ್ರಮ ಆಯೋಜನೆ**

## ಹಣ ಬಿಡುಗಡೆ ಬಿಳಂಬ: ಟಿಬಿ ಡ್ಯಾಂ ಗೇಟ್ ದುರಸ್ಥಿ ವಿಳಂಬ

• ಉದಯವಾಹಿನಿ ಬಳ್ಳಾರಿ

ತುಂಗಭದ್ರ ಜಲಾಶಯಕ್ಕೆ ಹೊಸ ಗೇಟುಗಳ ಅಳವಡಿಕೆ ಕಾರ್ಯ ಆರಂಭವಾಗಿದೆ. ಆದರೆ ಕಾಮಗಾರಿಗೆ ಕರ್ನಾಟಕ ರಾಜ್ಯ ಸರ್ಕಾರ ಹಣ ವಿಳಂಬ ಮಾಡಿರುವುದರಿಂದ ಹೊಸ ಗೇಟುಗಳ ಅಳವಡಿಕೆ ವಿಳಂಬವಾಗಲಿದೆಂದು ಡ್ಯಾಂ ತಜ್ಞ ಕನ್ನಯ್ಯ ನಾಯ್ಡು ಹೇಳಿದ್ದಾರೆಂದು ತುಂಗಭದ್ರ ರೈತ ಸಂಘ ಹೇಳಿದೆ.

ಸಂಘದ ಅಧ್ಯಕ್ಷ ದರೂರು ಪುರುಷೋತ್ತಮಗೌಡ ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ. ಜಲಾಶಯ ನಿರ್ಮಾಣಗೊಂಡು ಏಳು ದಶಕ ಕಳೆದಿರುವುದರಿಂದ ಜಲಾಶಯದ ಗೇಟುಗಳು ತನ್ನ ಗುಣಮಟ್ಟ ಕಳೆದು ಕೊಂಡಿರುವುದರಿಂದ ಅವನ್ನು ಬದಲಿಸಲು ಈಗ ಮುಂದಾಗಿದೆ. ಇನ್ನೂ ಮೂರು ಗೇಟ್ ಮಾತ್ರ ಅಳವಡಿಸಿದೆ. ಇದೇ ರೀತಿ ಆದರೆ ವಿಳಂಬವಾಗಲಿದೆ ಅದಕ್ಕಾಗಿ ತ್ವರಿತಗತಿಯಲ್ಲಿ ಆಗಬೇಕು ಈ ದಿಶೆಯಲ್ಲಿ ರಾಜ್ಯ ಸರ್ಕಾರ ಮುಂದಾಗಬೇಕು ಎಂದರು. ಎಲ್ಲಾ ಗೇಟುಗಳನ್ನು ಬದಲಿಸಲು 54 ಕೋಟಿ ರೂಗಳ ಟೆಂಡರ್ ಕರೆದು ಕಾಮಗಾರಿ ಆರಂಭಿಸಿದೆ. ಇದಕ್ಕೆ ಆಂದ್ರಪ್ರದೇಶ ಸರ್ಕಾರ ತನ್ನ ಪಾಲಿನ 20 ಕೋಟಿ ರೂ ನೀಡಿದೆ. ಕರ್ನಾಟಕ ಸರ್ಕಾರ ಕೇವಲ 10 ಕೋಟಿ ರೂ ನೀಡಿದೆ. ಉಳಿದ ಹಣವನ್ನು ಕರ್ನಾಟಕ ಸರ್ಕಾರ ಬಿಡುಗಡೆ ಮಾಡದ ಕಾರಣ ಕಾಮಗಾರಿ ವಿಳಂಬವಾಗಲಿದೆಂದು ಹೇಳಿದೆ.

ಅದಕ್ಕಾಗಿ ಕೂಡಲೇ ರಾಜ್ಯ ಸರ್ಕಾರ ಬಾಕಿ ಹಣವನ್ನು ಬಿಡುಗಡೆ ಮಾಡಬೇಕು ಇಲ್ಲದಿದ್ದರೆ ಹೋರಾಟ ಮಾಡಲಿದೆಂದು ಹೇಳಿದರು.




ಉದಯವಾಹಿನಿ ಚಿತ್ರ

## ಮಾಣಿಕ್ಕಮ್ಮ ಶಿಕ್ಷಕಿಗೆ ಒಲಿದು ಬಂದ ಸಾಹಿತ್ಯ ರತ್ನ ಪ್ರಶಸ್ತಿ

• ಉದಯವಾಹಿನಿ ಕೆಂಭಾವಿ

ಕೊಟ್ಟೂರಿನ ಇಂದಿರಾ ಚಾರಿಟೇಬಲ್ ಮತ್ತು ಎಜುಕೇಷನ್ ಟ್ರಸ್ಟ ವತಿಯಿಂದ ಕನ್ನಡ ಶಿಕ್ಷಕರ ಅನನ್ಯ ಸೇವೆಯನ್ನು ಪರಿಗಣಿಸಿ ಕೊಡಮಾಡುವ ಸಾಹಿತ್ಯ ರತ್ನ ಪ್ರಶಸ್ತಿಯನ್ನು ರವಿವಾರ ಪದವಿ ಪೂರ್ವ ಕಾಲೇಜು ಕೊಟ್ಟೂರುದಲ್ಲಿ ನಡೆದ ಸಮಾರಂಭದಲ್ಲಿ ಟ್ರಸ್ಟನ ಅಧ್ಯಕ್ಷರು ಮಾಣಿಕ್ಕಮ್ಮ ಕನ್ನಡ ಶಿಕ್ಷಕರು ಸರಕಾರಿ ಪ್ರೌಢ ಶಾಲೆ ಕೆಂಭಾವಿ ಇವರಿಗೆ ಪ್ರದಾನ ಮಾಡಿ ಗೌರವಿಸಿದರು. ಪ್ರಶಸ್ತಿಗೆ ಭಾಜನರಾಗಿದ್ದಕ್ಕೆ ಶಾಲೆಯ ಮುಖ್ಯಗುರುಗಳು, ಸಿಬ್ಬಂದಿವರ್ಗ ಮತ್ತು ವಿದ್ಯಾರ್ಥಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.



ಉದಯವಾಹಿನಿ ಚಿತ್ರ



ಉದಯವಾಹಿನಿ ಚಿತ್ರ

**ಬಸವನಬಾಗೇವಾಡಿ: ಪಟ್ಟಣದಲ್ಲಿ ಭಾನುವಾರ ಕರ್ಕಶವಾದ ಶಬ್ದವನ್ನು ಉಂಟುಮಾಡುತ್ತಿದ್ದ ಬೈಕುಗಳ ಸೈಲೆನ್ಸರನ್ನು ಕಿತ್ತುಹಾಕಿ ಸೀಸ್ ಮಾಡಿ ಪ್ರಕರಣಗಳನ್ನು ದಾಖಲಿಸಲಾಯಿತು. ಈ ಸಂದರ್ಭದಲ್ಲಿ ಸಿ. ಪಿ. ಆಯ್ ಗುರುಶಾಂತ ದಾಸ್ಯಾಳ ಹಾಗೂ ಸಿಬ್ಬಂದಿಗಳು ಹಾಜರಿದ್ದರು.**

## ಹಾಲು ಉತ್ಪಾದಕರ ಸಹಕಾರ ಸಂಘ ನಿ, ಸೊರಟೂರ ಆಡಳಿತ ಮಂಡಳಿ ಚುನಾವಣೆ

• ಉದಯವಾಹಿನಿ ಗದಗ

ತಾಲ್ಲೂಕಿನ ಸೊರಟೂರು ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘ ನಿ, ದ 2026 ರಿಂದ 5 ವರ್ಷ ಅವಧಿಯ ಆಡಳಿತ ಮಂಡಳಿಯ ಚುನಾವಣೆ ಸಂಘದ ಕಚೇರಿಯಲ್ಲಿ ನೆರವೇರಿತು. ಚುನಾವಣೆಯಲ್ಲಿ ಶಂಕರ ಪವಾರ. ಎಸ್ ಸಿ, ಜಗದೀಶ ಬೋಳನವರ. ಬ ವರ್ಗ, ಎಲ್ಲಪ್ಪ ಜಂಗವಾಡ. ಅ ವರ್ಗ, ಸಾವಕ್ಕ ಬಸಪ್ಪ ತಳವಾರ. ಎಸ್ ಟಿ, ಎಲ್ಲವ್ವ ನಿಂಗಪ್ಪ ತಳವಾರ. ಹಾಗೂ ಶಾಂತವ್ವ ಹುಲಿ. ಮಹಿಳಾ ಮೀಸಲು ಕ್ಷೇತ್ರದಲ್ಲಿ ಅವಿರೋಧ ಆಯ್ಕೆಯಾದರು.

ಸಾಮಾನ್ಯ ಕ್ಷೇತ್ರದ ಅಭ್ಯರ್ಥಿಗಳಿಂದ ಚುನಾವಣೆ ಜರುಗಿತು. ಚುನಾವಣೆಯಲ್ಲಿ ಮಲ್ಲಪ್ಪ ಪಕೀರಪ್ಪ ಕಲಗುಡಿ. ಅಡಿವೆಪ್ಪ ಬಸಪ್ಪ ಕನ್ನೂರ. ತಿರಕಪ್ಪ ಶಂಕ್ರಪ್ಪ ಬಂಕಾಪುರ. ಪರಶುರಾಮ ಪಕೀರಪ್ಪ ತೋಪಿನ. ಪ್ರಕಾಶ್ ವಿರುಪಾಕ್ಷಯ್ಯ ಪೂಜಾರ. ಬಸವಣ್ಣೆಪ್ಪ ವಿರೂಪಾಕ್ಷಪ್ಪ ಕುಸ್ಲಾಪುರ. ಮಹಾದೇವಪ್ಪಕೃಷ್ಣಪ್ಪಉಪ್ಪಾರ ಬಹುಮತದಿಂದ ಆಯ್ಕೆಯಾದರು.



ಉದಯವಾಹಿನಿ ಚಿತ್ರ

## ಉಪನಯನ ಸಂಸ್ಕಾರದ ಜನಕರು ಶ್ರೀ ಸವಿತಾ ಮಹರ್ಷಿಗಳು

• ಉದಯವಾಹಿನಿ ಮುದ್ದೇಬಿಹಾಳ

ಇಡೀ ಜಗತ್ತಿಗೆ ಅಜ್ಞಾನದ ಕತ್ತಲೆ ಕಳೆದು ಸುಜ್ಞಾನದ ದಾರಿ ತೋರಿಸಿದ ಉಪನಯನ ಸಂಸ್ಕಾರದ ಜನಕರು ಶ್ರೀ ಸವಿತ ಮಹರ್ಷಿಗಳು. ಸವಿತಾ ಸಮಾಜವು ಕೇವಲ ಒಂದು ಸಮುದಾಯವಲ್ಲ, ಅದು ವಿಶ್ವದ ಪ್ರಥಮ ವೈದ್ಯಕೀಯ ಪರಂಪರೆಯ ತಾಯಿಬೇರು ಎಂದು ಸಂಶೋಧಕ ಮಹೇಶ ಕುಮಾರ್ ತೇಲಂಗಿ ಹೇಳಿದರು.

ತಾಲ್ಲೂಕು ಆಡಳಿತದ ವತಿಯಿಂದ ಆಡಳಿತ ಸೌಧದಲ್ಲಿ ಹಮ್ಮಿಕೊಳ್ಳಲಾಗಿದ್ದ ಶ್ರೀ ಸವಿತ ಮಹರ್ಷಿ ಜಯಂತಿ ಕಾರ್ಯಕ್ರಮದಲ್ಲಿ ಅವರು ದಿಕ್ಸೂಚಿ ಭಾಷಣ ಮಾಡಿದರು. ಸವಿತ ಮಹರ್ಷಿಗಳ ಕೊಡುಗೆಯನ್ನು ವಿವರಿಸಿದ ಅವರು, ಸಾಮವೇದವನ್ನು ಗಾಯನ ರೂಪದಲ್ಲಿ ನೀಡಿದ ಕೀರ್ತಿ ಈ ಮಹರ್ಷಿಗಳಿಗೆ ಸಲ್ಲುತ್ತದೆ. ಋಗ್ವೇದ ಪಠಣ ಪುರೋಹಿತರಿಗೆ ಸೀಮಿತವಾದರೆ, ನಾದಸ್ವರದ ಮೂಲಕ ಸಾಮವೇದ ಮೊಳಗಿಸುವ ಸವಿತಾ ಸಮಾಜದ ಕಲೆ ಸರ್ವರಿಗೂ ತಲುಪಿದೆ. ನಂದವಂಶದ ಸ್ಥಾಪಕ ಮಹಾಪದ್ಮನಂದರು, ಪ್ಲಾಸ್ಟಿಕ್ ಸರ್ಜರಿ ಪರಿಚಯಿಸಿದ ಆದಿ ವೈದ್ಯರು ಇದೇ ಸಮಾಜದವರು ಎಂಬುದು ಹೆಮ್ಮೆಯ ಇತಿಹಾಸ ಎಂದರು.

ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ, ಸವಿತಾ ಸಮಾಜವು ನಾಟಿ ವೈದ್ಯಪದ್ಧತಿಯ ಮೂಲಕ ಜನಸಾಮಾನ್ಯರ ಜೊತೆ ಬೆರೆತ 'ಸ್ನೇಹ ಸಮಾಜ' ಎಂದು ಶ್ಲಾಘಿಸಿದರು. ಅಧ್ಯಕ್ಷತೆ ವಹಿಸಿದ್ದ ತಹಶೀಲ್ದಾರ ಶ್ರೀಮತಿ ಕೀರ್ತಿ ಚಾಲಕ ಅವರು, ಮಹರ್ಷಿಗಳ ಆದರ್ಶಗಳನ್ನು ಅಳವಡಿಸಿಕೊಂಡು ಯುವಕರು ಶಿಕ್ಷಣದತ್ತ ಮುಖ ಮಾಡಬೇಕು, ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಶಿರಸ್ತೇದಾರ ಎಂ. ಎ.ಬಾಗೇವಾಡಿ, ಮುಖ್ಯ ಪಶುವೈದ್ಯಾಧಿಕಾರಿ ಶಿವಾನಂದ ಮೇಟಿ, ಎಎಸ್ಐ ಅಮರಪ್ಪ ಸಾಲಿ, ಕಂದಾಯ ನಿರೀಕ್ಷಕ ಪವನ ತಳವಾರ, ಸಮಾಜದ ಅಧ್ಯಕ್ಷ ರವಿ ತೇಲಂಗಿ ಹಾಗೂ ಗೌರವ ಅಧ್ಯಕ್ಷ ಮಲ್ಲಣ್ಣ ತೇಲಂಗಿ ಉಪಸ್ಥಿತರಿದ್ದರು. ಸಮಾಜದ ಪ್ರಮುಖರಾದ ದೇವೇಂದ್ರ ಶಹಾಪೂರ, ಈರಣ್ಣ ಈಡ್ಲೂರ, ಅಪ್ಪು ಶಹಾಪೂರ, ಶರಣಪ್ಪ ಮಸಾಲಜಿ, ಶ್ರೀನಿವಾಸ ಶಹಾಪೂರ, ಪ್ರವೀಣ ಮಸಾಲಜಿ, ಶ್ರೀಕಾಂತ ತೇಲಂಗಿ, ಕುಮಾರ್ ತೇಲಂಗಿ, ಸುರೇಶ್ ಮಸಾಲಜಿ, ಶಂಕ್ರಪ್ಪ ಹಡಪದ, ಭೀಮಣ್ಣ ಬಳವಾಟ, ಶಂಕರಪ್ಪ ಅಮರಗೋಳ, ತಿಪ್ಪಣ್ಣ ಶಹಾಪೂರ, ರಾಘವ್ ತೇಲಂಗಿ, ಗೌತಮ್ ಚಿಗನೂರ ಮತ್ತು ಕಾರ್ಮಿಕ ಇಲಾಖೆಯ ಸಿದ್ದು ನಾವಿ ಸೇರಿದಂತೆ ಸವಿತಾ ಹಾಗೂ ಹಡಪದ ಸಮಾಜದ ಬಂಧುಗಳು ಭಾಗವಹಿಸಿದ್ದರು. ಶಿಕ್ಷಕ ಎಂ.ಬಿ. ಗುಡಗುಂಟಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಸವಿತ ಮಹರ್ಷಿ ವೃತ್ತದಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು.



ಉದಯವಾಹಿನಿ ಚಿತ್ರ

> ಶಿವನ ಬಲಗಣ್ಣಿನಿಂದ ಉದ್ಭವಿಸಿದ ಸವಿತ ಮಹರ್ಷಿಗಳು 1875 ಶ್ಲೋಕಗಳ ಮೂಲಕ ಜ್ಞಾನದೀಪ್ತಿ ಬೆಳಗಿದ್ದಾರೆ. -ಎಂ.ಎಂ. ಬೆಳಗಲ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ

## ಬಗರ್ ಹುಕುಂ ಸಾಗುವಳಿದಾರರ ಸಕ್ರಮಕ್ಕೆ ಆಗ್ರಹ

• ಉದಯವಾಹಿನಿ ಬೀದರ್

ಬಗರ್ ಹುಕುಂ ಸಾಗುವಳಿದಾರರನ್ನು ಸಕ್ರಮಗೊಳಿಸಬೇಕು, ಫಾರಂ ನಂ.57 ಸಲ್ಲಿಕೆಗೆ ಅವಧಿ ವಿಸ್ತರಿಸಬೇಕು ಹಾಗೂ ಅಕ್ರಮ–ಸಕ್ರಮ ಸಮಿತಿ ಸಭೆಗಳನ್ನು ತಕ್ಷಣ ಕರೆಯಬೇಕು ಎಂದು ಭಾರತ ಕಮ್ಯೂನಿಸ್ಟ್ ಪಕ್ಷ ಜಿಲ್ಲಾ ಮಂಡಳಿ, ಬೀದರ್ ವತಿಯಿಂದ ಅಂಬೇಡ್ಕರ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿ ವರೆಗೆ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ್ದಾರೆ.

ಫಾರಂ ನಂ.50, 53 , 57 ಅರ್ಜಿಗಳು ವಿಲೇವಾರಿಯಾಗದೆ ಬಾಕಿ ಉಳಿದಿರುವುದರಿಂದ ದಲಿತರು, ಹಿಂದುಳಿದವರು ಮತ್ತು ಅಲ್ಪಸಂಖ್ಯಾತ ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ. ಅರಣ್ಯ ಇಲಾಖೆ ದಬ್ಬಾಳಿಕೆ ಆರೋಪವೂ ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಇಲ್ವಾಳ, ಹೊನ್ನಿಕೇರಿ, ಕಪಲಾಪೂರ (ಜೆ), ಬೇಳಕೇರಾ, ಶಮಶಾನಗರ, ಟಿ. ಮಿರ್ಜಾಪೂರ, ಜಕನಾಳ, ನಂದಿಹಾಳ, ಸುಂಧಾಳ ಹಾಗೂ ಹಂದಿಕೇರಾ ಗ್ರಾಮಗಳಲ್ಲಿ ಅರಣ್ಯ ಇಲಾಖೆ ಹಾಗೂ ಕಂದಾಯ ಇಲಾಖೆಯ ಕಿರುಕುಳ ಹೆಚ್ಚಾಗಿದೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

ಕೇಂದ್ರ ಸರ್ಕಾರ ಕಾರ್ಪೋರೇಟ್ ಸಂಸ್ಥೆಗಳಿಗೆ ಸಾವಿರಾರು ಎಕರೆ ಭೂಮಿ ನೀಡುತ್ತಿರುವಾಗ, ಬಡ ಜನರು ದಶಕಗಳಿಂದ ಕಾಸ್ತು ಮಾಡುತ್ತಿರುವ ಭೂಮಿಯನ್ನು ಕಸಿದುಕೊಳ್ಳಲಾಗುತ್ತಿದೆ ಎಂದು ಸಂಘ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಬಗರ್ ಹುಕುಂ ಅಕ್ರಮ–ಸಕ್ರಮ ಸಮಿತಿ ಸಭೆಗಳನ್ನು ತಕ್ಷಣ ನಡೆಸಿ, ಫಾರಂ ನಂ. 50, 53 ಮತ್ತು 57 ಅರ್ಜಿಗಳನ್ನು ವಿಲೇವಾರಿ ಮಾಡುವಂತೆ ಒತ್ತಾಯಿಸಲಾಗಿದೆ. ಸಮಸ್ಯೆಗಳಿಗೆ ಶೀಘ್ರ ಪರಿಹಾರ ನೀಡದಿದ್ದಲ್ಲಿ ಫೆಬ್ರವರಿ 12 ರಂದು ರಾಷ್ಟ್ರವ್ಯಾಪಿ ಮುಷ್ಕರ ನಡೆಸಲಾಗುವುದು ಎಂದು ಸಂಘಟನೆ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಭಾರತ ಕಮ್ಯೂನಿಸ್ಟ್ ಪಕ್ಷದ ಕಾರ್ಯಕಾರಿ ಸಮಿತಿ ಸದಸ್ಯ ಬಾಬುರಾವ ಹೊನ್ನಾ, ಜಿಲ್ಲಾ ಕಾರ್ಯದರ್ಶಿ ನಜೀರ ಅಹ್ಮದ, ಸರ್ವೋದಯ ಪಕ್ಷದ ಅಧ್ಯಕ್ಷ ಕೋಂಡಿಬಾ ಪಾಂಡ್ರೆ, ಕೆ.ಆರ್.ಆರ್.ಎಸ್‌ಪ್ರಧಾನ ಕಾರ್ಯದರ್ಶಿ ಬಸವರಾಜ ಅಷ್ಟೂರೆ, ಸೂರ್ಯಕಾಂತ ಮದಕಟ್ಟಿ, ಜೈಶೀಲಕುಮಾರ, ಶೀಲಾ ಸಾಗರ, ಮೋಹಿದಮಿಯ್ಯಾ, ವೀರಶೆಟ್ಟಿ ವಟಂಬೆ, ಫಾಳೆಪ್ಪಾ ಕಪಲಾಪೂರ.ಜೆ., ಪ್ರಭು ಹುಚಕನಳ್ಳಿ, ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

# ಪ್ರತಿಯೊಂದು ಮತಕ್ಕೂ ಪ್ರಾಶಸ್ತ್ಯವಿದೆ: ನಾಗೇಂದ್ರ ಪ್ರಸಾದ್

### 18 ವರ್ಷ ತುಂಬಿದ ಯುವಕ–ಯುವತಿಯರು ತಪ್ಪದೇ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಬೇಕು

• ಉದಯವಾಹಿನಿ ಬಳ್ಳಾರಿ

ಚುನಾವಣೆ ಪ್ರಕ್ರಿಯೆಯಲ್ಲಿ ಒಂದೊಂದು ಮತಕ್ಕೂ ಪ್ರಾಶಸ್ತ್ಯವಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಹೇಳಿದರು. ಅವರು ನಗರದ ಜಿಲ್ಲಾ ಪಂಚಾಯ್ತಿಯ ಸಭಾಂಗಣದಲ್ಲಿ ಚುನಾವಣಾ ಆಯೋಗ, ಜಿಲ್ಲಾ ಚುನಾವಣಾಧಿಕಾರಿಗಳ ಕಾರ್ಯಾಲಯ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರತಿ ವರ್ಷ ಜ.01 ರಂದು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣಿ, ತಿದ್ದುಪಡಿ, ಹೆಸರು ತೆಗೆದುಹಾಕುವಿಕೆ ಕುರಿತ ವಿವಿಧ ಅರ್ಜಿ ನಮೂನೆ ಒಳಗೊಂಡು ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ನಡೆಯಲಿದ್ದು, 18 ವರ್ಷ ತುಂಬಿದ ಯುವಕ–ಯುವತಿಯರು ತಪ್ಪದೇ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಬೇಕು ಹಾಗೂ ಈ ಪ್ರಕ್ರಿಯೆ ಕುರಿತು ತಮ್ಮ ಮನೆ ಹಾಗೂ ಸುತ್ತಮುತ್ತಲಿನವರಿಗೂ ಮಾಹಿತಿ ನೀಡಬೇಕು. ಶೇಕಡವಾರು ಮತದಾನದ ಪ್ರಮಾಣ ಹೆಚ್ಚಿಸಲು ತಪ್ಪದೇ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಬೇಕು ಎಂದರು.

ಪ್ರಸ್ತುತದಲ್ಲಿ ಚುನಾವಣೆಗಳು ಜಾತಿ, ಸಮುದಾಯಗಳ ಆಧಾರದಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡುವುದು ಕಂಡುಬರುತ್ತಿದ್ದು, ಇದರಿಂದ ಕೆಲಸ ಮಾಡುವ ಯೋಗ್ಯರಿಗೆ ಅನ್ಯಾಯವಾಗಲಿದೆ. ಹಾಗಾಗಿ ಮತದಾರರು ವಿವೇಚನೆಯಿಂದ ಅರ್ಹರನ್ನು ಆಯ್ಕೆ ಮಾಡಬೇಕು ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಮಾತನಾಡಿ, ದೇಶದ ಯುವಜನತೆ ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಲು ಉತ್ತೇಜಿಸುವ ದೃಷ್ಟಿಯಿಂದ ರಾಷ್ಟ್ರೀಯ ಮತದಾರರದಿನವನ್ನು ಆಚರಿಸುತ್ತಿದೆಂದರು.

ಮತದಾನದಲ್ಲಿ ಯುವಪೀಳಿಗೆಯ ಪಾತ್ರ ಮುಖ್ಯವಾಗಿದೆ. ಮತ ಚಲಾಯಿಸದಿದ್ದರೆ ಆ ಅಮೂಲ್ಯವಾದ ಹಕ್ಕನ್ನು ಕಳೆದುಕೊಂಡಂತೆ. ಹಾಗಾಗಿ ಇದರಿಂದ ಯಾರೂ ಹೊರಗುಳಿಯಬಾರದು ಎಂದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್. ಎನ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಉತ್ತಮ ನಾಯಕರನ್ನು ಆರಿಸುವುದು. ದೇಶವನ್ನು ಭದ್ರ-ಬುನಾದಿಯಾಗಿಸಲು ಅವರ ಭಾಗವಹಿಸುವಿಕೆ ಕುರಿತು ತಿಳಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದರು.

ಈ ವೇಳೆ 18 ವರ್ಷ ತುಂಬಿ ಹೊಸದಾಗಿ ನೋಂದಾಯಿಸಿಕೊಂಡ ಯುವ ಮತದಾರರಿಗೆ ಸಾಂಕೇತಿಕವಾಗಿ ಮತದಾರರ ಗುರುತಿನ ಚೀಟಿ ವಿತರಿಸಲಾಯಿತು.

ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದ ಜಿಲ್ಲೆಯ ವಿವಿಧ ವಿಧಾನಸಭಾ ಕ್ಷೇತ್ರದ ಬೂತ್ ಮಟ್ಟದ ಅಧಿಕಾರಿಗಳಿಗೆ ಪ್ರಶಂಸನಾ ಪತ್ರ ವಿತರಿಸಿತು. ಬಳಿಕ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಜಿಲ್ಲಾ ಸ್ವೀಪ್ ಸಮಿತಿಯಿಂದ ಮತದಾನ ಜಾಗೃತಿ ಕುರಿತು ಶಾಲಾ–ಕಾಲೇಜುಗಳಲ್ಲಿ ಏರ್ಪಡಿಸಿದ್ದ ಪ್ರಬಂಧ ಹಾಗೂ ವಿವಿಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಈ ವೇಳೆ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್, ಮಹಾನಗರ ಪಾಲಿಕೆಯ ಆಯುಕ್ತ ಪಿ.ಎಸ್.ಮಂಜುನಾಥ, ಬಳ್ಳಾರಿ ತಾಲ್ಲೂಕು ತಹಶೀಲ್ದಾರರಾದ ಟಿ.ರೇಖಾ, ತಾಪಂ ಇಓ ಶ್ರೀಧರ ಐ ಬಾರಿಕರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಜಿಲ್ಲಾ ಚುನಾವಣಾಧಿಕಾರಿ ಕಚೇರಿಯ ಅಧಿಕಾರಿ ಮತ್ತು ಸಿಬ್ಬಂದಿ ವರ್ಗ, ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.




ಉದಯವಾಹಿನಿ ಚಿತ್ರ

**ರಾಷ್ಟ್ರೀಯ ಮತದಾರರ ದಿನಾಚರಣೆ**

> ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್ ಮತದಾರರ ಪ್ರತಿಜ್ಞಾ ವಿಧಿ ಭೋದಿಸಿ. ನನ್ನ ಒಂದು ಮತದಿಂದ ಏನಾಗಲಿದೆ ಎಂದು ಉದಾಸೀನತೆ ತೋರದೇ, ತಪ್ಪದೇ ಮತದಾನ ಪ್ರಕ್ರಿಯೆಯಲ್ಲಿ ಸರ್ವರೂ ಪಾಲ್ಗೊಳ್ಳಬೇಕು. ಇದರಿಂದ ಸುಭದ್ರ ರಾಷ್ಟ್ರ ನಿರ್ಮಾಣಕ್ಕೆ ಮುನ್ನಡೆಯಾಗಲಿದೆ. -ಮಹಮ್ಮದ್ ಹಾರಿಸ್ ಸುಮೇರ್

# ತಮಿಳುನಾಡಿನಲ್ಲಿ ಹಿಂದಿ ಭಾಷೆಗೆ ಜಾಗವಿಲ್ಲ: ಎಂ.ಕೆ. ಸ್ಟಾಲಿನ್

**ಚೆನ್ನೈ:** ಹಿಂದಿ ವಿರೋಧಿ ಚಳವಳಿ ಸಂದರ್ಭದಲ್ಲಿ ಪ್ರಾಣತೆತ್ತ ಹೋರಾಟಗಾರರನ್ನು ಸ್ಮರಿಸಿರುವ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ರಾಜ್ಯದಲ್ಲಿ ಹಿಂದಿ ಭಾಷೆಗೆ ಎಂದಿಗೂ ಜಾಗವಿಲ್ಲ ಎಂದು ಹೇಳಿದ್ದಾರೆ. ನಾವು ಯಾವಾಗಲೂ ಹಿಂದಿ ಹೇರಿಕೆಯನ್ನು ವಿರೋಧಿಸುತ್ತೇವೆ. ತಮಿಳು ಭಾಷೆಯ ಮೇಲಿನ ನಮ್ಮ ಪ್ರೀತಿ ಅಜರಾಮರ ಹಿಂದಿಯನ್ನು ನಮ್ಮ ಮೇಲೆ ಹೇರಿದಾಗಲೆಲ್ಲಾ ಅದನ್ನು ಅಷ್ಟೇ ತೀವ್ರವಾಗಿ ವಿರೋಧಿಸಲಾಗುವುದು ಎಂದು ಸ್ಟಾಲಿನ್ ಹೇಳಿದ್ದಾರೆ. ತಮಿಳಿಗಾಗಿ ತಮ್ಮ ಅಮೂಲ್ಯ ಪ್ರಾಣವನ್ನು ಅರ್ಪಿಸಿದ ಹುತಾತ್ಮರಿಗೆ ನಾನು ನನ್ನ ಕೃತಜ್ಞತಾಪೂರ್ವಕ ನಮನಗಳನ್ನು ಸಲ್ಲಿಸುತ್ತೇನೆ. ಭಾಷಾ ಯುದ್ಧದಲ್ಲಿ ಇನ್ನು ಯಾವುದೇ ಜೀವಗಳು ಬಲಿಯಾಗುವುದಿಲ್ಲ ಎಂದು ಮುಖ್ಯಮಂತ್ರಿ ಒತ್ತಿ ಹೇಳಿದ್ದಾರೆ.

ಭಾಷಾ ಹುತಾತ್ಮರ ದಿನವಾದ ತಮಿಳುನಾಡು ಮುಖ್ಯಮಂತ್ರಿ ಹಿಂದಿ ವಿರೋಧಿ ಚಳವಳಿಯ ಇತಿಹಾಸದ ಕುರಿತು ಒಂದು ಸಣ್ಣ ವೀಡಿಯೊವನ್ನು ಎಕ್ಸ್ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಇದು 1965 ರ ಹಿಂದಿ ವಿರೋಧಿ ಹೋರಾಟದ ಚಿತ್ರಗಳನ್ನು ಒಳಗೊಂಡಿದೆ. ಡಿಎಂಕೆಯ ದಿವಂಗತ ನಾಯಕರಾದ ಸಿಎನ್ ಅಣ್ಣಾದೊರೈ ಮತ್ತು ಎಂ ಕರುಣಾನಿಧಿ ಅವರ ಕೊಡುಗೆಗಳನ್ನು ಮುಖ್ಯಮಂತ್ರಿ ಸ್ಮರಿಸಿದ್ದಾರೆ.

ಹಿಂದಿ ವಿರೋಧಿ ಚಳವಳಿಯನ್ನು ಮುನ್ನಡೆಸುವ ಮೂಲಕ ತಮಿಳುನಾಡು ಉಪಖಂಡದ ವಿವಿಧ ಭಾಷಾ ರಾಷ್ಟ್ರೀಯ ಜನಾಂಗಗಳ ಹಕ್ಕುಗಳು ಮತ್ತು ಗುರುತನ್ನು ರಕ್ಷಿಸಿದೆ ಎಂದು ಸ್ಟಾಲಿನ್ ಹೇಳಿದ್ದಾರೆ.



1964-65ರಲ್ಲಿ ತಮಿಳುನಾಡಿನಾದ್ಯಂತ ನಡೆದ ಹಿಂದಿ ವಿರೋಧಿ ಚಳವಳಿಯ ಸಂದರ್ಭದಲ್ಲಿ ತಮ್ಮ ಪ್ರಾಣವನ್ನು ಬಲಿದಾನ ಮಾಡಿದವರನ್ನು, ಮುಖ್ಯವಾಗಿ ಸ್ವಯಂ ದಹನದ ಮೂಲಕ ತ್ಯಾಗ ಮಾಡಿದವರನ್ನು ಭಾಷಾ ಹುತಾತ್ಮರು ಎಂದು ಕರೆಯಲಾಗುತ್ತದೆ.

ಹೊಸ ಶಿಕ್ಷಣ ನೀತಿ (ಎನ್‌ಇಪಿ) 2020 ರ ಮೂಲಕ ಕೇಂದ್ರ ಸರ್ಕಾರ ಹಿಂದಿ ಹೇರುತ್ತಿದೆ ಎಂದು ಡಿಎಂಕೆ ನಿರಂತರವಾಗಿ ಆರೋಪಿಸುತ್ತಿದೆ.

ತಮಿಳುನಾಡಿನ ಸ್ಟಾಲಿನ್ ಸರ್ಕಾರ ಮತ್ತು ಕೇಂದ್ರ ಸರ್ಕಾರವು ರಾಜ್ಯದಲ್ಲಿ ಹಿಂದಿ ಭಾಷೆಯ ಬಳಕೆಯ ಬಗ್ಗೆ ಬಹಳ ಹಿಂದಿನಿಂದಲೂ ಭಿನ್ನಾಭಿಪ್ರಾಯ ಹೊಂದಿವೆ.

ಕಳೆದ ವರ್ಷದ ಮಾರ್ಚ್‌ನಲ್ಲಿ, ಮುಖ್ಯಮಂತ್ರಿ ಸ್ಟಾಲಿನ್ ರೂಪಾಯಿ ಚಿಹ್ನೆ ''₹'' ತಮಿಳು ಅಕ್ಷರ ರೂ. (ತಮಿಳಿನಲ್ಲಿ ರೂಪಾಯಿಯನ್ನು ಪ್ರತಿನಿಧಿಸುವ ತಮಿಳು ಪದ ''ರುಬಾಯಿ''ಯ ಮೊದಲ ಅಕ್ಷರ) ದಿಂದ ಬದಲಾಯಿಸಿದ್ದಾರೆ. ಕೇಂದ್ರ ಸರ್ಕಾರದ ತ್ರಿಭಾಷಾ ನೀತಿಯನ್ನು ಸಿಎಂ ಸ್ಟಾಲಿನ್ ವಿರೋಧಿಸುತ್ತಿದ್ದಾರೆ. ಬಿಜೆಪಿ ರಾಜ್ಯದ ಜನರ ಮೇಲೆ ಹಿಂದಿ ಹೇರುತ್ತಿದೆ ಎಂದು ಅವರು ಪದೇ ಪದೇ ಆರೋಪಿಸಿದ್ದಾರೆ. ರಾಜ್ಯದ ದ್ವಿಭಾಷಾ ನೀತಿ ಶಿಕ್ಷಣ, ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯೋಗಕ್ಕೆ ಪ್ರಯೋಜನವನ್ನು ನೀಡಿದೆ ಎಂದು ಅವರು ಹೇಳಿದ್ದಾರೆ.

## ಆರ್‌ಜೆಡಿ ನೂತನ ರಾಷ್ಟ್ರೀಯ ಕಾರ್ಯಕಾರಿ ಅಧ್ಯಕ್ಷರಾಗಿ ತೇಜಸ್ವಿ ಯಾದವ್ ನೇಮಕ




**ಪಾಟ್ನಾ :** ರಾಷ್ಟ್ರೀಯ ಜನತಾ ದಳವು ತೇಜಸ್ವಿ ಯಾದವ್ ಅವರನ್ನು ಪಕ್ಷದ ನೂತನ ರಾಷ್ಟ್ರೀಯ ಕಾರ್ಯಕಾರಿ ಅಧ್ಯಕ್ಷರನ್ನಾಗಿ ನೇಮಿಸಿದೆ. ಈ ಮಹತ್ವದ ನಿರ್ಧಾರವನ್ನು ಪಕ್ಷದ ಹಿರಿಯ ನಾಯಕ ಲಾಲು ಪ್ರಸಾದ್ ಯಾದವ್ ಅವರು ಪತ್ನಿ ಮಾಜಿ ಮುಖ್ಯಮಂತ್ರಿ ರಾಬ್ರಿ ದೇವಿ ಅವರ ಸಮ್ಮುಖದಲ್ಲಿ ಭಾನುವಾರ ಪ್ರಕಟಿಸಿದರು. ಈ ಮೂಲಕ ಪಕ್ಷದಲ್ಲಿ ಹೊಸ ಅಧ್ಯಾಯವೊಂದು ಆರಂಭವಾಗಿದೆ ಎಂದು ಆರ್‌ಜೆಡಿ ಹೇಳಿದೆ.

ಈ ನೇಮಕವು ಆರ್‌ಜೆಡಿಯ ರಾಷ್ಟ್ರೀಯ ಕಾರ್ಯಕಾರಿ ಸಭೆಯ ಉದ್ಘಾಟನಾ ಅಧಿವೇಶನದಲ್ಲಿ ನಡೆಯಿತು. ಪಕ್ಷದ ಪ್ರಮುಖ ನಾಯಕರು ಈ ಸಭೆಯಲ್ಲಿ ಭಾಗವಹಿಸಿದ್ದರು. ಕಳೆದ ವರ್ಷ ವಿಧಾನಸಭಾ ಚುನಾವಣೆಯಲ್ಲಿ ಪಕ್ಷವು ಎದುರಿಸಿದ ಹಿನ್ನಡೆಯನ್ನು ಗಮನದಲ್ಲಿಟ್ಟುಕೊಂಡು, ಲಾಲು ಪ್ರಸಾದ್ ಯಾದವ್ ಅವರ ಆರೋಗ್ಯದ ಸ್ಥಿತಿಯನ್ನು ಪರಿಗಣಿಸಿ, ತೇಜಸ್ವಿ ಯಾದವ್ ಅವರನ್ನು ಶೀಘ್ರದಲ್ಲೇ ರಾಷ್ಟ್ರೀಯ ಕಾರ್ಯಕಾರಿ ಅಧ್ಯಕ್ಷರನ್ನಾಗಿ ಮಾಡುವ ಯೋಜನೆಯನ್ನು ಪಕ್ಷವು ಕಳೆದ ವಾರವೇ ಅಂತಿಮಗೊಳಿಸಿತ್ತು.

ಇತ್ತೀಚೆಗೆ, ಜನವರಿ 16 ಮತ್ತು 17 ರಂದು ನಡೆದಿದ್ದ ಆರ್‌ಜೆಡಿಯ ಮೊದಲ ಪರಿಶೀಲನಾ ಸಭೆಯಲ್ಲಿ, ಕಳೆದ ವರ್ಷದ ವಿಧಾನಸಭಾ ಚುನಾವಣಾ ಸೋಲಿನ ನಂತರ ಪಕ್ಷದ ಮುಂದಿನ ಹೆಜ್ಜೆಗಳ ಬಗ್ಗೆ ಚರ್ಚಿಸಲಾಯಿತು. 2020 ರಲ್ಲಿ 80 ಸ್ಥಾನಗಳನ್ನು ಪಡೆದಿದ್ದ ಪಕ್ಷವು, ಕಳೆದ ವರ್ಷ ಕೇವಲ 35 ಸ್ಥಾನಗಳಿಗೆ ಕುಸಿದಿತ್ತು. ಈ ಕುಸಿತದ ಹಿನ್ನೆಲೆಯಲ್ಲಿ, ಪಕ್ಷವು ತನ್ನ ಕಾರ್ಯತಂತ್ರವನ್ನು ಬದಲಾಯಿಸಿಕೊಳ್ಳುವ ಸೂಚನೆ ನೀಡಿತು.

ಸಭೆಗೆ ಒಂದು ದಿನ ಮೊದಲು, ತೇಜಸ್ವಿ ಯಾದವ್ ಅವರು ಪಕ್ಷದ ನಾಲ್ವರು ಲೋಕಸಭಾ ಸದಸ್ಯರು ಮತ್ತು ಐವರು ರಾಜ್ಯಸಭಾ ಸದಸ್ಯರೊಂದಿಗೆ ಸಂಸತ್ತಿನ ಮುಂಬರುವ ಬಜೆಟ್ ಅಧಿವೇಶನಕ್ಕೆ ಕಾರ್ಯತಂತ್ರ ರೂಪಿಸಲು ಸಮಾಲೋಚನೆ ನಡೆಸಿದ್ದರು. ಈ ಎಲ್ಲಾ ಬೆಳವಣಿಗೆಗಳ ನಡುವೆಯೇ, ತೇಜಸ್ವಿ ಯಾದವ್ ಅವರ ನೇಮಕವು ಪಕ್ಷದ ಭವಿಷ್ಯಕ್ಕೆ ಮಹತ್ವದ ತಿರುವನ್ನು ನೀಡಿದೆ. ಲಾಲು ಪ್ರಸಾದ್ ಯಾದವ್ ಅವರ ಮಾರ್ಗದರ್ಶನದಲ್ಲಿ, ತೇಜಸ್ವಿ ಯಾದವ್ ಅವರು ಪಕ್ಷವನ್ನು ಮುನ್ನಡೆಸಲಿದ್ದಾರೆ ಎಂದು ನಿರೀಕ್ಷಿಸಲಾಗಿದೆ. ಈ ನೇಮಕವು ಯುವ ನಾಯಕತ್ವಕ್ಕೆ ಪಕ್ಷದಲ್ಲಿ ಸಿಗುತ್ತಿರುವ ಪ್ರಾಮುಖ್ಯತೆಯನ್ನು ತೋರಿಸುತ್ತದೆ.

## ನೂರು ಸಾಂಸ್ಕೃತಿಕ ಕಲಾವಿದರಿಂದ ವಿವಿಧತೆಯಲ್ಲಿ ಏಕತೆ ಥೀಮ್‌ನಲ್ಲಿ ಪ್ರದರ್ಶನ

# ಈ ಬಾರಿಯ ರಿಪಬ್ಲಿಕ್ ಪೆರೇಡ್ ಅದ್ಭುತ

**ನವದೆಹಲಿ:** ನಾಳೆ ಸೋಮವಾರ ಭಾರತದ 77ನೇ ಗಣತಂತ್ರ ದಿನ . ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿನ ಕರ್ತವ್ಯ ಪಥದಲ್ಲಿ ರಾಷ್ಟ್ರೀಯ ಸಂಭ್ರಮ. ರಾಷ್ಟ್ರಪತಿ ದ್ರೌಪದಿ ಮುರ್ಮು ನೇತೃತ್ವದಲ್ಲಿ ಹಲವಾರು ಕಾರ್ಯಕ್ರಮಗಳು ನಡೆಯಲಿವೆ. ದೇಶದ ಮಿಲಿಟರಿ ಶಕ್ತಿಯ ದೈತ್ಯ ದರ್ಶನಾಗಲಿದೆ.

ಯುವಜನರು, ಕಲಾವಿದರು, ಕ್ರೀಡಾಪಟುಗಳು, ಕಾರ್ಮಿಕರು, ಮಹಿಳೆಯರು ಈ ಸಂಭ್ರಮದಲ್ಲಿ ಭಾಗಿಯಾಗಲಿದ್ದಾರೆ, ಸಾಕ್ಷಿಯೂ ಆಗಲಿದ್ದಾರೆ. ಯೂರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವೋನ್ ಡರ್ ಲೆಯೆನ್ ಮತ್ತು ಯೂರೋಪಿಯನ್ ಕೌನ್ಸಿಲ್ ಅಧ್ಯಕ್ಷ ಆಂಟೋನಿಯೋ ಕೋಸ್ಟ ಅವರು ಭಾರತದ ಗಣರಾಜ್ಯೋತ್ಸವ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿದ್ದಾರೆ. ಭಾರತದ ಈ ಮಹೋನ್ನತ ಸಂಭ್ರಮದಲ್ಲಿ ಏನೆಲ್ಲಾ ಇರಲಿದೆ? ಇಲ್ಲಿದೆ ಒಂದಷ್ಟು ಮಾಹಿತಿ.

**ಗಣರಾಜ್ಯೋತ್ಸವ ಪೆರೇಡ್:** ಜನವರಿ 26ರಂದು ಬೆಳಗ್ಗೆ 10:30ಕ್ಕೆ ಕಾರ್ಯಕ್ರಮ ಶುರುವಾಗುತ್ತದೆ. ಪ್ರಧಾನಿ ಮೋದಿ ಅವರು ಯುದ್ಧ ಸ್ಮಾರಕಕ್ಕೆ ಭೇಟಿ ನೀಡಿ, ಹುತಾತ್ಮ ಸೈನಿಕರಿಗೆ ನಮನ ಸಲ್ಲಿಸುತ್ತಾರೆ. ನಂತರ ಕರ್ತವ್ಯ ಪಥಕ್ಕೆ ತೆರಳುತ್ತಾರೆ. ನಂತರ ರಾಷ್ಟ್ರಪತಿಗಳು ಹಾಗೂ ಮುಖ್ಯ ಅತಿಥಿಗಳನ್ನು ಬರಮಾಡಿಕೊಳ್ಳಲಾಗುತ್ತದೆ. ಪೆರೇಡ್‌ಗೆ ಮುನ್ನ ನೂರು ಸಾಂಸ್ಕೃತಿಕ ಕಲಾವಿದರಿಂದ ವಿವಿಧತೆಯಲ್ಲಿ ಏಕತೆ ಥೀಮ್‌ನಲ್ಲಿ ಪ್ರದರ್ಶನ ಇರುತ್ತದೆ. ನಂತರ ಪೆರೇಡ್ ಮೊದಲುಗೊಳ್ಳುತ್ತದೆ. ಪೆರೇಡ್ ಕಮಾಂಡರ್ ಲೆಫ್ಟಿನೆಂಟ್ ಜನರಲ್ ಭವನೀಶ್ ಕುಮಾರ್ ನೇತೃತ್ವದಲ್ಲಿ ಮೊದಲ ಪೆರೇಡ್ ನಡೆಯುತ್ತದೆ. ರಾಷ್ಟ್ರಪತಿಗಳು ವಂದನೆ ಸ್ವೀಕರಿಸುತ್ತಾರೆ.

ಪರಮವೀರ್ ಚಕ್ರ, ಇತ್ಯಾದಿ ಪ್ರಶಸ್ತಿ ವಿಜೇತರಿಂದ ಪೆರೇಡ್ ಇರುತ್ತದೆ. ಐರೋಪ್ಯ ಒಕ್ಕೂಟ, ಭಾರತೀಯ ಭೂಸೇನಾ ಪಡೆ, ವಾಯುಪಡೆ, ನೌಕಾಪಡೆ, ಕರಾವಳಿ ಕಾವಲುಪಡೆ, ಡಿಆರ್‌ಡಿಒ ಮೊದಲಾದವರ ಪೆರೇಡ್‌ಗಳು ನಡೆಯುತ್ತವೆ. ಧ್ರುವ್, ರುದ್ರ ಹೆಲಿಕಾಪ್ಟರ್‌ಗಳು, ಭೀಷ್ಮಾ ಟ್ಯಾಂಕ್, ಅರ್ಜುನ್ ಟ್ಯಾಂಕ್, ಅಪಾಚೆ ಎಎಚ್-64ಇ, ಪ್ರಚಂಡ್ ಹೆಲಿಕಾಪ್ಟರ್, ನಾಗ್ ಮಿಸೈಲ್ ಸಿಸ್ಟಂ, ಅಜಯಕೇತು, ಧ್ವಂಸಕ್, ಆಕಾಶ್ ಮಿಸೈಲ್, ಬ್ರಹ್ಮೋಸ್ ಇತ್ಯಾದಿ ಭಾರತೀಯ ಸೇನೆಗಳ ಪ್ರಬಲ ಶಸ್ತ್ರಾಸ್ತ್ರಗಳ ಪ್ರದರ್ಶನ ಈ ಸಂದರ್ಭದಲ್ಲಿ ಕಾಣಬಹುದು.

ಮುಧೋಳ ನಾಯಿ ಸೇರಿದಂತೆ ಭಾರತೀಯ ತಳಿಯ ಹಾಗೂ ವಿಶೇಷ ತರಬೇತಿ ಪಡೆದ, ಹಾಗೂ ಜಿಪಿಎಸ್, ರೇಡಿಯೋ ಇತ್ಯಾದಿ ಉಪಕರಣಗಳನ್ನು ತೊಟ್ಟ ಶ್ವಾನಗಳ ಪಡೆಯೂ ಪೆರೇಡ್ ಮಾಡಲಿದೆ.




ಮಿಲಿಟರಿ ಶಕ್ತಿ ಪ್ರದರ್ಶ

**30 ಸ್ತಬ್ದ ಚಿತ್ರಗಳ ಮೆರವಣಿಗೆ:** ಈ ಬಾರಿಯ ರಿಪಬ್ಲಿಕ್ ಪೆರೇಡ್‌ನಲ್ಲಿ 30 ಸ್ತಬ್ದಚಿತ್ರಗಳ ಮೆರವಣಿಗೆ ನಡೆಯಲಿದೆ. ಇದರಲ್ಲಿ 17 ರಾಜ್ಯಗಳದ್ದು ಇರುತ್ತದೆ. ಇನ್ನುಳಿದ 13 ಸ್ತಬ್ದಚಿತ್ರಗಳು ವಿವಿಧ ಇಲಾಖೆಗಳದ್ದಾಗಿರುತ್ತವೆ.

**ವಂದೇ ಮಾತರಂ 150 ವರ್ಷ:** ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ ವತಿಯಿಂದ 150 ವರ್ಷಗಳ ವಂದೇ ಮಾತರಂ ಸಂಸ್ಮರಣಾರ್ಥ ಸ್ತಬ್ದಚಿತ್ರದ ಮೆರವಣಿಗೆ ಇರುತ್ತದೆ. ಕರ್ನಾಟಕವೂ ಸೇರಿದಂತೆ ಎಲ್ಲಾ ರಾಜ್ಯಗಳಿಂದ ಆಯ್ದ 2,500 ಕಲಾವಿದರರಿಂದ ವಂದೇ ಮಾತರಂ ಥೀಮ್‌ನಲ್ಲಿ ಸಾಂಸ್ಕೃತಿಕ ಪ್ರದರ್ಶನ ಇರಲಿದೆ.

### 10,000 ವಿಶೇಷ ಅತಿಥಿಗಳು?

ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರು, ಸೇವೆ ಸಲ್ಲಿಸಿದವರನ್ನು ರಿಪಬ್ಲಿಕ್ ಪೆರೇಡ್‌ಗೆ ವಿಶೇಷ ಅತಿಥಿಗಳಾಗಿ ಆಹ್ವಾನಿಸಲಾಗಿದೆ. ಪ್ಯಾರಾ ಅಥ್ಲೀಟ್ ವಿಶ್ವ ಚಾಂಪಿಯನ್ ಶಿಪ್ ವಿಜೇತರು, ನೈಸರ್ಗಿಕ ಕೃಷಿಕರು, ಅತ್ಯುತ್ತಮ ಕೃಷಿ ಸಾಧಕರು, ಸರ್ಕಾರಿ ಸ್ಕೀಮ್‌ಗಳ ಆಯ್ದ ಫಲಾನುಭವಿಗಳು, ಸಂಶೋಧಕರು, ವಿಜ್ಞಾನಿಗಳು, ಅಟಲ್ ಇನ್ನೋವೇಶನ್ ಮಿಷನ್‌ನ ಅತ್ಯುತ್ತಮ ವಿದ್ಯಾರ್ಥಿಗಳು, ವಿವಿಧ ಟೂರ್ನಿಗಳ ವಿಜೇತರು, ಅತ್ಯುತ್ತಮ ಸ್ಟಾರ್ಟಪ್‌ಗಳು, ಅತ್ಯುತ್ತಮ ಎಂಎಸ್ ಎಂಇಗಳು, ವೀರ್ ಗಾಥ ಪ್ರಾಜೆಕ್ಟ್ ವಿಜೇತರು, ಅತ್ಯುತ್ತಮ ಅಂಗನವಾಡಿ ಕಾರ್ಯಕರ್ತರು, ಪಿಎಂ ಸ್ವನಿಧಿ ಯೋಜನೆಯ ಫಲಾನುಭವಿ ಅಂಗಡಿ ಮಾಲೀಕರು, ಪಿಎಂ ಇಂಟರ್‌ಶಿಪ್ ಸ್ಕೀಮ್‌ನ ಅತ್ಯುತ್ತಮ ಇಂಟರ್ನ್‌ಗಳು, ನ್ಯಾಷನಲ್ ಬ್ಯಾಂಡ್ ಕಾಂಪಿಟೀಶನ್ ವಿಜೇತ ಮಕ್ಕಳು, ಮನ್ ಕೀ ಬಾತ್ ಭಾಗಿದಾರರು ಹೀಗೆ ಜನರು ವಿಶೇಷ ಅತಿಥಿಗಳಾಗಿ ಇರುತ್ತಾರೆ.

## ಮಿನಿ ನ್ಯೂಸ್

### ಮನಾಲಿಯಲ್ಲಿ ಭಾರೀ ಹಿಮಪಾತ: 8 ಕಿಮೀ ಟ್ರಾಫಿಕ್ ಜಾಮ್

**ಧರ್ಮಶಾಲಾ:** ಹಿಮಾಚಲ ಪ್ರದೇಶದಲ್ಲಿ ಭಾರೀ ಹಿಮಪಾತದಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ಮನಾಲಿ, ಶಿಮ್ಲಾ, ಕಾಲ್ಕಾ ಸೇರಿದಂತೆ ಪ್ರಮುಖ ಪ್ರವಾಸಿ ತಾಣಗಳಲ್ಲಿ ನಿರಂತರ ಹಿಮಪಾತವಾಗುತ್ತಿದೆ. ಒಂದು ಕಡೆ ಪ್ರವಾಸಿಗರು ಸಂಭ್ರಮಿಸುತ್ತಿದ್ದರೆ, ಇನ್ನೂ ಕೆಲವರು ವಾಪಸ್ ಊರುಗಳಿಗೆ ಮರಳಲು ರಸ್ತೆಗಳಿಲ್ಲದೇ ಪರದಾಡುತ್ತಿದ್ದಾರೆ.ಕುಲು ಜಿಲ್ಲೆಯ ಪ್ರಮುಖ ಪ್ರವಾಸಿ ತಾಣವಾದ ಕೋಥಿ ಮತ್ತು ಮನಾಲಿ ರಸ್ತೆಗಳು ವಾಹನಗಳಿಂದಲೇ ತುಂಬಿ ತುಳುಕುತ್ತಿವೆ. ಹಿಮಪಾತದಿಂದ ಟ್ರಾಫಿಕ್ ಜಾಮ್ ಉಂಟಾಗಿ 8 ಕಿಮೀಗೂ ಅಧಿಕ ಉದ್ದಕ್ಕೂ ವಾಹನಗಳು ರಸ್ತೆಯಲ್ಲೇ ನಿಂತಿವೆ.

**685 ರಸ್ತೆಗಳು ಬಂದ್:** ಮನಾಲಿಯಲ್ಲಿ ಒಂದು ಕಡೆ ಹಿಮ ಆವರಿಸಿದ್ರೆ, ಮತ್ತೊಂದು ಕಡೆ ಜನದಟ್ಟಣೆ ಹೆಚ್ಚಾಗಿದೆ. ಹೀಗಾಗಿ ರಾಜ್ಯಾದ್ಯಂತ ಸುಮಾರು 685 ರಸ್ತೆಗಳಲ್ಲಿ ಸಂಚಾರವೇ ಬಂದ್ ಆಗಿದೆ. ಈ ಪೈಕಿ 292 ರಸ್ತೆಗಳು ಲಹೌಲ್ ಮತ್ತು ಸ್ಪತಿ ಜಿಲ್ಲೆಗಳದ್ದಾಗಿವೆ. ಇದಲ್ಲದೇ ಚಂಬಾದಲ್ಲಿ 132, ಮಂಡಿಯಲ್ಲಿ 126, ಕುಲುವಿನಲ್ಲಿ 79, ಸಿರ್ಮೌರ್‌ನಲ್ಲಿ 29, ಕಿನ್ನೌರ್‌ನಲ್ಲಿ 20, ಕಾಂಗ್ರಾದಲ್ಲಿ 4, ಉನಾದಲ್ಲಿ 2 ಮತ್ತು ಸೋಲನ್‌ನಲ್ಲಿ 1 ರಸ್ತೆಗಳಲ್ಲಿ ಸಂಚಾರಕ್ಕೆ ನಿರ್ಬಂಧ ಹೇರಲಾಗಿದೆ.

### ಫರ್ನಿಚರ್ ಅಂಗಡಿ ಕಟ್ಟಡದಲ್ಲಿ ಬೆಂಕಿ ಅವಘಡ; 5 ಮಂದಿ ಸಾವು

**ಹೈದರಾಬಾದ್:** ಹೈದರಾಬಾದ್‌ನ ನಾಂಪಲ್ಲಿ ಪ್ರದೇಶದಲ್ಲಿ ನಾಲ್ಕು ಅಂತಸ್ತಿನ ಪೀಠೋಪಕರಣ ಅಂಗಡಿ ಕಟ್ಟಡದಲ್ಲಿ ಬೆಂಕಿ ಕಾಣಿಸಿಕೊಂಡು ಇಬ್ಬರು ಮಕ್ಕಳು ಮತ್ತು ವೃದ್ಧ ಮಹಿಳೆ ಸೇರಿದಂತೆ ಐವರು ಸಾವನ್ನಪ್ಪಿದ್ದಾರೆ.

ಕಟ್ಟಡದ ನೆಲಮಾಳಿಗೆಯಲ್ಲಿ ಐದು ಜನರು ಸಿಲುಕಿಕೊಂಡಿದ್ದರು. ರಕ್ಷಣಾ ಕಾರ್ಯಾಚರಣೆ ನಡೆಸಿ, ಇಬ್ಬರು ಮಕ್ಕಳು ಮತ್ತು ವೃದ್ಧ ಮಹಿಳೆ ಸೇರಿದಂತೆ ಐದು ಶವಗಳನ್ನು ಭಾನುವಾರ ಕಟ್ಟಡದ ನೆಲಮಾಳಿಗೆಯಿಂದ ಹೊರತೆಗೆಯಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಉಸಿರುಗಟ್ಟಿ ಐವರು ಮೃತಪಟ್ಟಿದ್ದಾರೆಂದು ಶಂಕಿಸಲಾಗಿದೆ. ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ. ಬೆಂಕಿಗೆ ಕಾರಣವೇನೆಂದು ತನಿಖೆ ನಡೆಸಲಾಗುತ್ತಿದೆ. ಪೀಠೋಪಕರಣ ಅಂಗಡಿಯ ಮಾಲೀಕರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

### ದೀದಿ ಬುಡಕ್ಕೇ ಬಂದ ಎಸ್‌ಐಆರ್: ಬಂಗಾಳ ಸಚಿವೆಗೆ ಚುನಾವಣಾ ಆಯೋಗ ನೋಟಿಸ್

**ಕೋಲ್ಕತಾ:** ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ವಿರುದ್ಧ ಸಮರ ಸಾರಿದ್ದ ಪಶ್ಚಿಮ ಬಂಗಾಳ ಸರ್ಕಾರಕ್ಕೆ ಚುನಾವಣಾ ಆಯೋಗ ಶಾಕ್ ನೀಡಿದ್ದು, ದೀದಿ ಸರ್ಕಾರದ ಸಚಿವೆಗೆ ನೋಟಿಸ್ ನೀಡಿದೆ.

ಪಶ್ಚಿಮ ಬಂಗಾಳ ಸಚಿವೆ ಶಶಿ ಪಂಜಾ ಅವರು ಭಾನುವಾರ ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಅಡಿಯಲ್ಲಿ ವಿಚಾರಣೆಯ ನೋಟಿಸ್ ಸ್ವೀಕರಿಸಿದ್ದಾರೆ. ಭಾನುವಾರ ಮಧ್ಯಾಹ್ನ ಎಸ್‌ಐಆರ್ ವಿಚಾರಣೆಗೆ ಹಾಜರಾಗಲು ಸಚಿವರನ್ನು ಕೇಳಲಾಗಿದೆ ಎಂದು ಮೂಲಗಳು ತಿಳಿಸಿವೆ. ಇನ್ನು ಚುನಾವಣಾ ಆಯೋಗದ ನೋಟಿಸ್ ಕುರಿತು ಪ್ರತಿಕ್ರಿಯೆ ನೀಡಿರುವ ಬಂಗಾಳ ಸಚಿವೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಪಂಜಾ ಅವರು ಎಸ್‌ಐಆರ್ ಅನ್ನು ಟೀಕಿಸಿದ್ದಾರೆ. ತರಾತುರಿಯಲ್ಲಿ ಮತ್ತು ಸಾಕಷ್ಟು ಸಿದ್ಧತೆ ಇಲ್ಲದೆ ನಡೆಸಲಾಗುತ್ತಿದೆ. 2002 ರಲ್ಲಿ ರಾಜ್ಯದಲ್ಲಿ ಕೊನೆಯ ಎಸ್‌ಐಆರ್ ನಡೆಸಿದಾಗ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಸೇರಿಸಲಾಗಿತ್ತು. ಅನ್‌ಮ್ಯಾಪ್ಡ್ ಎಂದು ಗುರುತಿಸಲಾಗಿರುವುದರಿಂದ ನೋಟಿಸ್ ನೀಡಲಾಗಿದೆ ಎಂದು ಅವರು ಪ್ರತಿಪಾದಿಸಿದ್ದಾರೆ. ನನ್ನ ಹೆಸರು 2002ರ ಮತದಾರರ ಪಟ್ಟಿಯಲ್ಲಿತ್ತು. ಎಸ್‌ಐಆರ್ ಪ್ರಕ್ರಿಯೆಯ ಸಮಯದಲ್ಲಿ ನಾನು ಎಲ್ಲಾ ದಾಖಲೆಗಳನ್ನು ಸಲ್ಲಿಸಿದ್ದೇನೆ, ಆದರೆ ನನ್ನ ಹೆಸರು ಅನ್‌ಮ್ಯಾಪ್ಡ್ ಎಂದು ತೋರಿಸುತ್ತಿದೆ. ಇದು ಖಂಡಿತವಾಗಿಯೂ ನನ್ನ ತಪ್ಪಲ್ಲ. ಇದು ನನ್ನ ಹೋರಾಟದ ಪ್ರತಿಫಲವಾಗಿದೆ ಬಂಗಾಳದಲ್ಲಿ ಅನೇಕ ಜನರು ಇದರಿಂದಾಗಿ ಕಿರುಕುಳಕ್ಕೊಳಗಾಗುತ್ತಿದ್ದಾರೆ ಎಂದು ಅವರು ಹೇಳಿದರು.

### ಪ್ರಿಯಕರನ ಪತ್ನಿಗೆ ಎಚ್‌ಐವಿ ವೈರಸ್ ಇಂಜೆಕ್ಷನ್ ಚುಚ್ಚಿದ ಮಾಜಿ ಪ್ರಿಯತಮೆ

**ಕರ್ನೂಲು:** ತನ್ನ ಪ್ರೀತಿಗೆ ಪ್ರಿಯಕರನ ಪತ್ನಿ ಅಡ್ಡಿಯಾಗಿದ್ದಾಳೆ ಎಂದು ಆಕೆಗೆ ಎಚ್‌ಐವಿ ವೈರಸ್ ಇಂಜೆಕ್ಷನ್ ಚುಚ್ಚಿದ ಆಘಾತಕಾರಿ ಘಟನೆ ಆಂಧ್ರ ಪ್ರದೇಶದಲ್ಲಿ ನಡೆದಿದೆ. ಆಂಧ್ರ ಪ್ರದೇಶದ ಕರ್ನೂಲು ಜಿಲ್ಲೆಯಲ್ಲಿ ಈ ಆಘಾತಕಾರಿ ಘಟನೆ ನಡೆದಿದ್ದು, ಪ್ರೀತಿಸಿದ ವ್ಯಕ್ತಿ ಮತ್ತೊಬ್ಬ ಮಹಿಳೆಯನ್ನು ಮದುವೆಯಾದ ನಂತರ ಮಾಜಿ ಗೆಳತಿಯೊಬ್ಬಳು ಆತನ ಪತ್ನಿಗೆ ವೈರಸ್ ಇಂಜೆಕ್ಷನ್ ನೀಡಿದ್ದಾರೆ. ಮೂಲಗಳ ಪ್ರಕಾರ ಕರ್ನೂಲಿನ ವೈದ್ಯ ಮತ್ತು ಅದೋನಿಯ ಯುವತಿ ಹಲವು ವರ್ಷಗಳ ಕಾಲ ಪ್ರೀತಿಸುತ್ತಿದ್ದರು. ನಂತರ ಕಾರಣಾಂತರಗಳಿಂದ ಜಗಳ ಮಾಡಿಕೊಂಡು ಬೇರ್ಪಟ್ಟರು.

ಈ ಅನುಕ್ರಮದಲ್ಲಿ, ವೈದ್ಯರು ಮತ್ತೊಬ್ಬ ಮಹಿಳಾ ವೈದ್ಯ ರನ್ನು ವಿವಾಹವಾದರು. ಅವರು ಕರ್ನೂಲು ವೈದ್ಯಕೀಯ ಕಾಲೇಜಿನಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಕೆಲಸ ಮಾಡುತ್ತಿದ್ದಾಗ, ಅವರ ಪತಿ ಕೂಡ ಕರ್ನೂಲಿನ ಖಾಸಗಿ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿದ್ದರು. ಬಳಿಕ ಪರಿಚಯ ಏರ್ಪಟ್ಟು ಬಳಿಕ ಇಬ್ಬರೂ ಕುಟುಂಬಸ್ಥರ ಒಪ್ಪಿಗೆ ಮೇರೆಗೆ ಮದುವೆಯಾಗಿದ್ದರು.

### ಲೈಂಗಿಕ ದೌರ್ಜನ್ಯ : ಮನೆಗೆಲಸದಾಕೆ ಆರೋಪ, ಮಾಜಿ ಕ್ರಿಕೆಟಿಗನ ಪುತ್ರನ ಬಂಧನ

**ಕರಾಚಿ:** ಮಾಜಿ ಕ್ರಿಕೆಟಿಗನ ಪುತ್ರನೋರ್ವ ಬಂಧನ ಭೀತಿ ಎದುರಿಸುತ್ತಿದ್ದು, ಮನೆಗೆಲಸದಾಕೆ ಮೇಲೆ ಅತ್ಯಾಚಾರ ಮಾಡಿದ ಆರೋಪದ ಮೇರೆಗೆ ಪೊಲೀಸರು ವಶಕ್ಕೆ ಪಡೆದಿದ್ದಾರೆ ಎಂದು ತಿಳಿಬಂದಿದೆ. ಪಾಕಿಸ್ತಾನದ ಮಾಜಿ ಸ್ಪಿನ್ನರ್ ಅಬ್ದುಲ್ ಖಾದಿರ್ ಅವರ ಪುತ್ರ ಸುಲೇಮಾನ್ ವಿರುದ್ಧ ಅತ್ಯಾಚಾರ ಆರೋಪ ಕೇಳಿಬಂದಿದ್ದು, ತಮ್ಮದೇ ಮನೆಕೆಲಸದಾಕೆ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ್ದಾರೆ ಎಂದು ಗಂಭೀರ ಆರೋಪ ಕೇಳಿಬಂದಿದೆ.

ಪ್ರಸ್ತುತ ಸಂತ್ರಸ್ಥ ಮಹಿಳೆ ಎಫ್‌ಐಆರ್ ದಾಖಲಿಸಿದ್ದು, ಮಹಿಳೆ ದೂರಿನ ಆಧಾರದ ಮೇಲೆ ಅತ್ಯಾಚಾರ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿ ಸುಲೇಮಾನ್ ನನ್ನು ವಶಕ್ಕೆ ಪಡೆದು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದ್ದಾರೆ.

ಸುದ್ದಿ ಸಂಸ್ಥೆ ಪಿಟಿಐ ವರದಿಯ ಪ್ರಕಾರ, ಸುಲೇಮಾನ್ ಅವರ ಮನೆಯಲ್ಲಿ ಸಂತ್ರಸ್ಥ ಮಹಿಳೆ ಕೆಲಸ ಮಾಡುತ್ತಿದ್ದರು. ಈ ವೇಳೆ ಸುಲೇಮಾನ್ ಸಂತ್ರಸ್ಥೆಯನ್ನು ಕೆಲಸದ ನೆಪವೊಡ್ಡಿ ಬಲವಂತವಾಗಿ ತಮ್ಮ ತೋಟದ ಮನೆಗೆ ಆಕೆಯನ್ನು ಕರೆದೊಯ್ದಿದ್ದಾರೆ.


ಅಲ್ಲಿ ಅವರು ಅವರ ಮೇಲೆ ಅತ್ಯಾಚಾರ ಎಸಗಿದ್ದರು ಎಂದು ಮಹಿಳೆ ಹೇಳಿದ್ದಾರೆ. ಈ ವೇಳೆ ನಾನು ಸಾಕಷ್ಟು ಬಾರಿ ಬೇಡ ಬೇಡ ಎಂದರೂ ಬಿಡದೇ ನನ್ನ ಮೇಲೆ ಲೈಂಗಿಕ ದೌರ್ಜನ್ಯವೆಸಗಿದರು ಎಂದು ಮಹಿಳೆ ತಮ್ಮ ದೂರಿನಲ್ಲಿ ಆರೋಪಿಸಿದ್ದಾರೆ.

## ಅಮೆರಿಕದ ವಲಸೆ ಅಧಿಕಾರಿಗಳ ವಶದಲ್ಲಿ 2 ವರ್ಷದ ಕಂದಮ್ಮ

**ಮಿನ್ನಿಯಾಪೋಲಿಸ್:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಕಠಿಣ ವಲಸೆ ನೀತಿ ಮಾನವೀಯತೆಯನ್ನು ಮರೆಯುತ್ತಿದೆ. ವಲಸೆ ಮತ್ತು ಕಸ್ಟಮ್ಸ್ ಜಾರಿ (ಐಸಿಇ) ಅಧಿಕಾರಿಗಳು ಮಕ್ಕಳನ್ನೂ ಬಿಡದೇ ವಲಸಿಗರನ್ನು ಬಂಧಿಸಲಾರಂಭಿಸಿದ್ದಾರೆ. ಐಸಿಇ ಅಧಿಕಾರಿಗಳ ಈ ನಡೆಗೆ ವ್ಯಾಪಕ ಆಕ್ರೋಶ ವ್ಯಕ್ತವಾಗುತ್ತಿದೆ. ಇತ್ತೀಚೆಗೆ ಐಸಿಇ ಅಧಿಕಾರಿಗಳಿಂದ ಐದು ವರ್ಷದ ಮಗುವಿನ ಬಂಧನ ಆಗಿದ್ದನ್ನು ಇಲ್ಲಿ ಸ್ಮರಿಸಬಹುದು.

ಹೌದು, ಮಿನ್ನಿಯಾಪೋಲಿಸ್‌ನ ದಿನಸಿ ಅಂಗಡಿಗೆ ಬಂದಿದ್ದ ತಂದೆ ಎಲ್ವಿಸ್ ಜೋಯಲ್ ಟಿಪನ್-ಎಚೆವೆರಿಯಾ ಮತ್ತು ಅವರ ಎರಡು ವರ್ಷದ ಮಗು ಕ್ಲೋಯ್ ರೆನಾಟಾ ಟಿಪನ್ ವಿಲ್ಲಾಸಿಸ್‌ಳನ್ನು ಅಮೆರಿಕದ ವಲಸೆ ಅಧಿಕಾರಿಗಳು ಬಂಧಿಸಿದ್ದಾರೆ. ಬಂಧನದ ಸಮಯದಲ್ಲಿ ಮಗು ಜೋರಾಗಿ ಅಳುತ್ತಿದ್ದರೂ, ಅದನ್ನು ಸಾಮಾನ್ಯರಂತೆ ಬಂಧಿಸಿ ಐಸಿಇ ಅಧಿಕಾರಿಗಳು ಕರೆದೊಯ್ದಿರುವುದು ಭಾರೀ ಜನಾಕ್ರೋಶಕ್ಕೆ ಕಾರಣವಾಗಿದೆ.

ಮಗುವನ್ನು ತಕ್ಷಣ ಬಿಡುಗಡೆ ಮಾಡುವಂತೆ ನ್ಯಾಯಾಲಯ ಆದೇಶ ಹೊರಡಿಸಿದರೂ, ತಂದೆ ಮತ್ತು ಮಗುವನ್ನು ಐಸಿಸಿ ಅಧಿಕಾರಿಗಳು ಟೆಕ್ಸಾಸ್‌ಗೆ ಕರೆದೊಯ್ದಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಮಗುವನ್ನು ಮಧ್ಯಾಹ್ನದ ಹೊತ್ತಿಗೆ ಬಿಡುಗಡೆ ಮಾಡಲಾಗಿದ್ದರೂ, ಅದು ಐಸಿಇ ಅಧಿಕಾರಿಗಳ ಕ್ರೂರ ವರ್ತನೆಯ ಆಘಾತದಿಂದ ಈಗಷ್ಟೇ ಚೇತರಿಸಿಕೊಳ್ಳುತ್ತಿದೆ ಎಂದು ಕುಟುಂಬದ ವಕೀಲೆ ಕಿರಾ ಕೆಲ್ಲಿ ತಿಳಿಸಿದ್ದಾರೆ.




- ಅಮೆರಿಕದ ಮಿನ್ನಿಯಾ ಪೋಲಿಸ್‌ನಲ್ಲಿ ವಲಸೆ ಅಧಿಕಾರಿಗಳಿಂದ ಎರಡು ವರ್ಷದ ಮಗು ಬಂಧನ.
- ತಂದೆಯೊಂದಿಗೆ ದಿನಸಿ ಅಂಗಡಿಯಿಂದ ಮರಳುತ್ತಿದ್ದ ಮಗುವನ್ನು ಬಂಧಿಸಿ ಕರೆದೊಯ್ದ ಐಸಿಇ ಅಧಿಕಾರಿಗಳು.
- ಅಮೆರಿಕದ ಮಿನ್ನಿಯಾ ಪೋಲಿಸ್‌ನಲ್ಲಿ ಮುಂದುವರೆದ ವಲಸಿಗರ ಬೇಟೆ.

ಈ ಕುರಿತು ತಮ್ಮ ಅಧಿಕೃತ ಇನ್‌ಸ್ಟಾಗ್ರಾಮ್‌ನಲ್ಲಿ ಪೋಸ್ಟ್ ಮಾಡಿರುವ ಮಿನ್ನಿಯಾ ಪೋಲಿಸ್ ನಗರ ಮಂಡಳಿ ಸದಸ್ಯ ಜೇಸನ್ ಚಾವೆಜ್, ತಂದೆ ಮತ್ತು ಮಗಳು ದಿನಸಿ ಅಂಗಡಿಯಿಂದ ಮನೆಗೆ ಬರುತ್ತಿದ್ದಾಗ, ಅವರ ಕಾರನ್ನು ಹಿಂಬಾಲಿಸಿ ಬಂದ ಐಸಿಇ ಅಧಿಕಾರಿಗಳು, ಕಾರಿನ ಕಿಟಕಿಯ ಗಾಜು ಒಡೆದು ಇಬ್ಬರನ್ನು ವಶಕ್ಕೆ ಪಡೆದಿದ್ದಾರೆ ಎಂದು ಆಕ್ರೋಶ ಹೊರಹಾಕಿದ್ದಾರೆ. ಇತ್ತೀಚೆಗೆ ಮಿನ್ನಿಯಾಪೋಲಿಸ್‌ನಲ್ಲಿ ಮಹಿಳೆಯನ್ನು ವಲಸೆ ಅಧಿಕಾರಿ ಗುಂಡಿಟ್ಟು ಕೊಂದ ಘಟನೆ ವ್ಯಾಪಕ ಪ್ರತಿಭಟನೆಗಳಿಗೆ ಕಾರಣವಾಗಿತ್ತು. ಆದರೂ ತಮ್ಮ ಕ್ರೂರ ವರ್ತನೆಯನ್ನು ಬಿಡದ ಐಸಿಇ ಅಧಿಕಾರಿಗಳು ಈಗ ಏನೂ ಅರಿಯದ ಎರಡು ವರ್ಷದ ಮಗುವನ್ನು ಬಂಧಿಸಿ ಕರೆದೊಯ್ದಿದ್ದಾರೆ.

ಆದರೆ ಈ ಕುರಿತು ಅಧಿಕೃತ ಹೇಳಿಕೆಯನ್ನು ಬಿಡುಗಡೆ ಮಾಡಿರುವ ಅಮೆರಿಕದ ಹೋಮ್ ಲ್ಯಾಂಡ್ ಸೆಕ್ಯೂರಿಟಿ, ಎಲ್ವಿಸ್ ಜೋಯಲ್ ಈಕ್ವೆಡಾರ್‌ನಿಂದ ಬಂದ ಅಕ್ರಮ ವಲಸಿಗರಾಗಿದ್ದು, ಈ ದೇಶದ ಕಾನೂನುಗಳನ್ನು ಉಲ್ಲಂಘಿಸಿದ್ದಾರೆ. ಅಲ್ಲದೇ ತಪಾಸಣೆ ವೇಳೆ ಕಾನೂನುಬದ್ಧ ಆಜ್ಞೆಗಳ ಹೊರತಾಗಿಯೂ ಎಲ್ವಿಸ್ ಜೋಯಲ್ ಕಾರಿನ ಕಿಟಕಿ ತೆರೆಯಲು ನಿರಾಕರಿಸಿದ್ದರಿಂದ, ಗಾಜು ಒಡೆದು ಅವರನ್ನು ವಶಕ್ಕೆ ಪಡೆಯಲಾಗಿದೆ ಎಂದು ಸ್ಪಷ್ಟಪಡಿಸಿದೆ.

## ಕೆನಡಾಕ್ಕೆ ಶೇ.100 ಸುಂಕ: ಟ್ರಂಪ್ ಬೆದರಿಕೆ

**ವಾಷಿಂಗ್ಟನ್:** ಚೀನಾದೊಂದಿಗೆ ಕೆನಡಾ ವ್ಯಾಪಾರ ಒಪ್ಪಂದ ಮಾಡಿಕೊಂಡರೆ, ಶೇ.100ರಷ್ಟು ಸುಂಕ ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬೆದರಿಕೆ ಹಾಕಿದ್ದಾರೆ. ಕೆನಡಾ ಚೀನಾದೊಂದಿಗೆ ಒಪ್ಪಂದ ಮಾಡಿಕೊಂಡರೆ, ಅಮೆರಿಕಕ್ಕೆ ಬರುವ ಎಲ್ಲಾ ಕೆನಡಾದ ಸರಕುಗಳು ಮತ್ತು ಉತ್ಪನ್ನಗಳ ಮೇಲೆ ತಕ್ಷಣವೇ ಶೇಕಡಾ 100 ರಷ್ಟು ಸುಂಕ ವಿಧಿಸಲಾಗುತ್ತದೆ'' ಎಂದು ಎಚ್ಚರಿಕೆ ನೀಡಿದ್ದಾರೆ.



ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು ಕಳೆದ ವಾರ, ಕೆನಡಾದ ಪ್ರಧಾನಿ ಕಾರ್ನಿ ಚೀನಾದೊಂದಿಗೆ ''ಕಾರ್ಯತಂತ್ರದ ಪಾಲುದಾರಿಕೆ'' ಘೋಷಿಸಿದ್ದರು, ಈ ಹಿನ್ನಲೆಯಲ್ಲಿ ಕೆನಡಾಗೆ ಬೆದರಿಕೆ ಹಾಕಿದ್ದಾರೆ. ಯಾವ ಒಪ್ಪಂದ ಉಲ್ಲೇಖಿಸುತ್ತಿದ್ದಾರೆ ಎಂಬುದು ಸ್ಪಷ್ಟವಾಗಿಲ್ಲ

''ಚೀನಾಕ್ಕೆ ಅಮೆರಿಕಕ್ಕೆ ಸರಕು ಮತ್ತು ಉತ್ಪನ್ನಗಳನ್ನು ಕಳುಹಿಸಲು ಕೆನಡಾವನ್ನು 'ಡ್ರಾಪ್ ಆಫ್ ಪೋರ್ಟ್' ಆಗಿ ಮಾಡಲಿದ್ದೇನೆ ಎಂದು ಭಾವಿಸಿದರೆ, ಅವರು ತುಂಬಾ ತಪ್ಪಾಗಿ ಭಾವಿಸಿದೆ. ಒಂದು ವೇಳೆ ಚೀನಾದೊಂದಿಗೆ ವ್ಯಾಪಾರ ಒಪ್ಪಂದ ಮಾಡಿಕೊಂಡರೆ ಶೇಕಡಾ 100 ರಷ್ಟು ಸುಂಕ ವಿಧಿಸಲಾಗುತ್ತದೆ ಎಂದು ಎಚ್ಚರಿಸಿದ್ದಾರೆ

ದಾವೋಸ್‌ನಲ್ಲಿ ನಡೆದ ವಿಶ್ವ ಆರ್ಥಿಕ ವೇದಿಕೆಯಲ್ಲಿ ಭಾಗಿಯಾಗಿದ್ದ ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ, ಇತ್ತೀಚಿನ ದಿನಗಳಲ್ಲಿ ಅಮೇರಿಕಾ ನೇತೃತ್ವದ ವಿಶ್ವ ಕ್ರಮ ಛಿದ್ರಗೊಂಡಿದೆ ಎಂದು ಹೇಳಿದ ನಂತರ, ಅಮೇರಿಕಾ ಮತ್ತು ಕೆನಡಾ ನಡುವಿನ ಉದ್ವಿಗ್ನತೆ ಹೆಚ್ಚಾಗಿದೆ.

ಮಹಾ ಶಕ್ತಿಗಳ ಆರ್ಥಿಕ ಬಲವಂತದ ಹಿನ್ನಲೆಯಲ್ಲಿ ಹಲವು ದೇಶಗಳು ಒಟ್ಟಾದರೆ ಅಮೇರಿಕಕ್ಕೆ ಪಾಠ ಕಲಿಸಬಹುದು ಎಂದು ಹೇಳಿದ್ದರು. ದಾವೋಸ್‌ನಲ್ಲಿ ಮರುದಿನ ಮಾತನಾಡಿದ ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅಮೆರಿಕ ಸಂಯುಕ್ತ ಸಂಸ್ಥಾನದ ಕಾರಣದಿಂದಾಗಿ ಕೆನಡಾ ಇನ್ನೂ ಜೀವಂತವಾಗಿದೆ ಎಂದು ಎಂದು ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಅವರ ಹೇಳಿಕೆಗೆ ತಿರುಗೇಟು ನೀಡಿದ್ದರು. ಇದೇ ವೇಳೆ ಹೊಸ ಶಾಂತಿ ಮಂಡಳಿಗೆ ಸೇರಲು ಕೆನಡಾಕ್ಕೆ ನೀಡಿದ್ದ ಆಹ್ವಾನವನ್ನು ಇದೇ ಸಂದರ್ಭದಲ್ಲಿ ಡೊನಾಲ್ಡ್ ಟ್ರಂಪ್ ಹಿಂಪಡೆದಿದ್ದಾರೆ

ಕೆನಡಾದ ಅಮೇರಿಕಾ ವ್ಯಾಪಾರ ಸಚಿವ ಡೊಮಿನಿಕ್ ಲೆಬ್ಲಾಂಕ್ ಪ್ರತಿಕ್ರಿಯೆ ನೀಡಿ ಚೀನಾದೊಂದಿಗೆ ಮುಕ್ತ ವ್ಯಾಪಾರ ಒಪ್ಪಂದದ ಅನ್ವೇಷಣೆ ಇಲ್ಲ.ಹಲವಾರು ಪ್ರಮುಖ ಸುಂಕ ಸಮಸ್ಯೆಗಳ ಕುರಿತು ಪರಿಹಾರವನ್ನು ಸಾಧಿಸಲಾಗಿದೆ ಎಂದು ಸ್ಪಷ್ಟನೆ ನೀಡಿದ್ದಾರೆ.

## ಬಾಂಗ್ಲಾದೇಶದಲ್ಲಿ ಮತ್ತೊಂದು ಹಿಂದೂ ಯುವಕನ ಹತ್ಯೆ : ಗ್ಯಾರೇಜ್‌ನೊಳಗೆ ಸಜೀವ ದಹನ

**ಬಾಂಗ್ಲಾದೇಶ:** ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತ ಹಿಂದೂ ಸಮುದಾಯದ ಮೇಲೆ ನಡೆಯುತ್ತಿರುವ ಹಿಂಸಾಚಾರದ ಘಟನೆಗಳು ಮತ್ತೆ ಆತಂಕ ಮೂಡಿಸುತ್ತಿವೆ. ಜನವರಿ 23ರ ಶುಕ್ರವಾರ ತಡರಾತ್ರಿ, ನರಸಿಂಗ್ಡಿ ಜಿಲ್ಲೆಯಲ್ಲಿ 23 ವರ್ಷದ ಹಿಂದೂ ಯುವಕ ಚಂಚಲ್ ಭೌಮಿಕ್ ಅವರನ್ನು ಗ್ಯಾರೇಜ್‌ನೊಳಗೆ ಜೀವಂತವಾಗಿ ಸುಟ್ಟುಹಾಕಿರುವ ಘಟನೆ ವರದಿಯಾಗಿದೆ. ಸ್ಥಳೀಯರ ಮಾಹಿತಿಯಂತೆ, ನರಸಿಂಗ್ಡಿ ಪೊಲೀಸ್ ಲೈನ್ಸ್ ಸಮೀಪದ ಮಸೀದಿ ಪ್ರದೇಶದಲ್ಲಿರುವ ಗ್ಯಾರೇಜ್‌ನಲ್ಲಿ ಕೆಲಸ ಮಾಡುತ್ತಿದ್ದ ಚಂಚಲ್ ಭೌಮಿಕ್, ಎಂದಿನಂತೆ ಕೆಲಸ ಮುಗಿಸಿ ಗ್ಯಾರೇಜ್ ಒಳಗೇ ಮಲಗಿದ್ದ. ತಡರಾತ್ರಿ ಅಪರಿಚಿತ ವ್ಯಕ್ತಿಯೊಬ್ಬ ಗ್ಯಾರೇಜ್‌ನ ಶಟರ್ ಅನ್ನು ಹೊರಗಿನಿಂದ ಮುಚ್ಚಿ, ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾರೆ. ಈ ಕೃತ್ಯ ಪೂರ್ವನಿಯೋಜಿತವಾಗಿ ನಡೆದಿದೆ ಎಂದು ಮೃತನ ಕುಟುಂಬಸ್ಥರು ಆರೋಪಿಸಿದ್ದಾರೆ. ಗ್ಯಾರೇಜ್ ಒಳಗೆ ಸಿಲುಕಿದ್ದ ಭೌಮಿಕ್ ಬೆಂಕಿಯಲ್ಲಿ ಸುಟ್ಟು ಕರಕಲಾಗಿದ್ದು, ಘಟನೆ ನಡೆಸಿದ ಆರೋಪಿಗಳು ಸ್ಥಳದಿಂದ ಪರಾರಿಯಾಗಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ತಕ್ಷಣ ಸ್ಥಳೀಯ ನಿವಾಸಿಗಳು ಅಗ್ನಿಶಾಮಕ ದಳಕ್ಕೆ ತಿಳಿಸಿದ್ದು, ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಸುಮಾರು ಒಂದು ಗಂಟೆಯ ಪ್ರಯತ್ನದ ಬಳಿಕ ಬೆಂಕಿಯನ್ನು ನಂದಿಸಿದ್ದಾರೆ. ಬಳಿಕ ಭೌಮಿಕ್ ಅವರ ಸುಟ್ಟ ದೇಹವನ್ನು ಗ್ಯಾರೇಜ್ ಒಳಗಿನಿಂದ ಹೊರತೆಗೆದುಕೊಳ್ಳಲಾಗಿದೆ.

**ಚಂಚಲ್ ಭೌಮಿಕ್ ಯಾರು?:** ಚಂಚಲ್ ಭೌಮಿಕ್ ಅವರು ಕೊಮಿಲ್ಲಾ ಜಿಲ್ಲೆಯ ಲಕ್ಷ್ಮಿಪುರ ಗ್ರಾಮದ ನಿವಾಸಿಗಳು. ಅವರು ದಿವಂಗತ ಖೋಕನ್ ಚಂದ್ರ ಭೌಮಿಕ್ ಮತ್ತು ಪ್ರಮಿತಾ ರಾಣಿ ಭೌಮಿಕ್ ಅವರ ಪುತ್ರ. ತಂದೆಯ ನಿಧನದ ನಂತರ ಕುಟುಂಬದ ಏಕೈಕ ಆಧಾರವಾಗಿದ್ದ ಚಂಚಲ್, ಅನಾರೋಗ್ಯದಿಂದ ಬಳಲುತ್ತಿದ್ದ ತಾಯಿ, ಅಂಗವಿಕಲ ಅಣ್ಣ ಹಾಗೂ ಕಿರಿಯ ಸಹೋದರರ ಜವಾಬ್ದಾರಿಯನ್ನು ಹೊತ್ತುಕೊಂಡಿದ್ದರು. ಕಳೆದ ಆರು ವರ್ಷಗಳಿಂದ ಅವರು ರುಬೆಲ್ ಮಿಯಾ ಅವರ ಗ್ಯಾರೇಜ್‌ನಲ್ಲಿ ಕೆಲಸ ಮಾಡಿ ಕುಟುಂಬವನ್ನು ಪೋಷಿಸುತ್ತಿದ್ದರು.

# ಟ್ರಂಪ್ ಷರತ್ತು ಒಪ್ಪಿ ಇಲ್ಲ ಸಾಯಿರಿ; ಡೆಲ್ಸಿ ರೊಡ್ರಿಗಸ್

- ವೆನೆಜುವೆಲಾ ಕ್ಯಾಬಿನೆಟ್‌ಗೆ ಯುಎಸ್ ಸೈನ್ಯ ಕೊಟ್ಟಿದ್ದು 15 ನಿಮಿಷ ಮಾತ್ರ, ಆ ದಿನ ನೆನೆದ ಡೆಲ್ಸಿ

**ಕ್ಯಾರಾಕಸ್:** ವೆನೆಜುವೆಲಾದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್, ಮಾಜಿ ಅಧ್ಯಕ್ಷ ನಿಕೋಲಸ್ ಮಡುರೊ ಬಂಧನ ಸಮಯದಲ್ಲಿ ಅಮೆರಿಕದ ಪಡೆಗಳು ತಮ್ಮ ಸಂಪುಟದ ಸದಸ್ಯರಿಗೆ ಡೊನಾಲ್ಡ್ ಟ್ರಂಪ್ ಅವರ ಬೇಡಿಕೆಗಳನ್ನು ಪಾಲಿಸಲು, ಕೇವಲ 15 ನಿಮಿಷಗಳ ಕಾಲಾವಕಾಶ ನೀಡಿದ್ದವು ಎಂಬ ಸ್ಫೋಟಕ ಮಾಹಿತಿಯನ್ನು ಹೊರಹಾಕಿದ್ದಾರೆ. ಡಿಯೋಸ್ಡಾಡೊ, ಕಾಂಗ್ರೆಸ್ ಅಧ್ಯಕ್ಷ ಜಾರ್ಜ್ ಮತ್ತು ನನಗೆ ಪ್ರತಿಕ್ರಿಯಿಸಲು 15 ನಿಮಿಷಗಳ ಕಾಲಾವಕಾಶ ನೀಡಿದರು. ಒಂದು ವೇಳೆ ಸಮಯ ಮೀರಿದರೆ ನಮ್ಮೆಲ್ಲರನ್ನೂ ಕೊಲ್ಲುವುದಾಗಿ ಬೆದರಿಕೆ ಹಾಕಿದ್ದರು ಎಂದು ಡೆಲ್ಸಿ ರೊಡ್ರಿಗಸ್ ವಿಡಿಯೋ ಸಂಭಾಷಣೆಯೊಂದರಲ್ಲಿ ಹೇಳಿದ್ದಾರೆ.

ಅಮೆರಿಕದ ದಾಳಿಯ ಏಳು ದಿನಗಳ ನಂತರ ವೆನೆಜುವೆಲಾದಲ್ಲಿ ನಡೆದ 2 ಗಂಟೆಗಳ ಸಭೆಯ ಸೋರಿಕೆಯಾದ ವಿಡಿಯೋ ರೆಕಾರ್ಡಿಂಗ್‌ನಲ್ಲಿ, ರೊಡ್ರಿಗಸ್ ಅವರು ರಾಜಕೀಯ ಅಧಿಕಾರವನ್ನು ಉಳಿಸಿಕೊಳ್ಳುವುದು ತಮ್ಮ ಆದ್ಯತೆಯಾಗಿದೆ ಎಂದು ಹೇಳುತ್ತಿದ್ದಾರೆ. ಸ್ಥಳೀಯ ಪತ್ರಿಕೋದ್ಯಮ ಸಾಮೂಹಿಕ ಲಾ ಹೋರಾಡಿ ವೆನೆಜುವೆಲಾಗೆ ಸಿಕ್ಕಿರುವ ಈ ವಿಡಿಯೋ ಇದೀಗ ಜಾಗತಿಕ ಮಟ್ಟದಲ್ಲಿ ಸಂಚಲನ ಸೃಷ್ಟಿಸಿದೆ.



ಜಾಗತಿಕ ಮಟ್ಟದಲ್ಲಿ ಸಂಚಲನ

ಈ ವಿಡಿಯೋದಲ್ಲಿ ಅಮೆರಿಕವು ನಿಕೋಲಸ್ ಮಡುರೊ ಅವರನ್ನು ಅಪಹರಿಸಿದ ಬಳಿಕ ನಡೆದ ಬೆಳವಣಿಗೆಗಳ ಬಗ್ಗೆ ಸ್ಪಷ್ಟ ಮಾಹಿತಿ ನೀಡುತ್ತದೆ. ಅಲ್ಲದೇ ವೆನೆಜುವೆಲಾದಲ್ಲಿ ಆಡಳಿತವನ್ನು ಸಾಮಾನ್ಯ ಸ್ಥಿತಿಗೆ ತರಲು ಡೆಲ್ಸಿ ರೊಡ್ರಿಗಸ್ ಮತ್ತವರ ತಂಡದ ಪ್ರಯತ್ನಗಳ ಬಗ್ಗೆ ಬೆಳಕು ಚೆಲ್ಲುತ್ತದೆ. ಇತ್ತೀಚೆಗೆ ಟ್ರಂಪ್ ಅವರು ಮಡುರೊ ಕಾರ್ಯಾಚರಣೆ ವೇಳೆ ಬಳಸಿದ ಶಸ್ತ್ರಗಳ ಮಾಹಿತಿ ನೀಡಿದ್ದರು.

ಅಮೆರಿಕವು ಮಡುರೊ ಅವರನ್ನು ಸೆರೆಹಿಡಿಯುವ ಮೊದಲು, ಡೆಲ್ಸಿ ರೊಡ್ರಿಗಸ್ ಮತ್ತು ಅವರ ಸಹೋದರ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಸಹಕರಿಸುವುದಾಗಿ ಪ್ರತಿಜ್ಞೆ ಮಾಡಿದ್ದರು ಎಂಬ ವರದಿಗಳಿದ್ದವು. ಆದಾಗ್ಯೂ, ಆಡಳಿತದ ಉಳಿದ ಸದಸ್ಯರು ತಮಗೆ ದೇಶದ್ರೋಹಿಗಳೆಂದು ಹಣೆಪಟ್ಟಿ ಕಟ್ಟಲಾಗುತ್ತದೆ ಎಂದು ಚಿಂತಿತರಾಗಿದ್ದರು ಎಂಬುದರ ಬಗ್ಗೆ ವಿಡಿಯೋದಲ್ಲಿ ಚರ್ಚೆ ನಡೆಸಲಾಗಿದೆ.

- ವೆನೆಜುವೆಲಾ ಅಧ್ಯಕ್ಷ ನಿಕೋಲಸ್ ಮಡುರೋ ಅಪಹರಣ ದಿನ ನೆನೆದ ಡೆಲ್ಸಿ ರೊಡ್ರಿಗಸ್.
- ನಿರ್ಧಾರ ಕೈಗೊಳ್ಳಲು 15 ನಿಮಿಷ ಸಮಯಾವಕಾಶ ನೀಡಿದ್ದ ಯುಎಸ್ ಪಡೆಗಳು.
- ಟ್ರಂಪ್ ಷರತ್ತು ಒಪ್ಪಿಕೊಳ್ಳದಿದ್ದರೆ ಕೊಲ್ಲುವ ಬೆದರಿಕೆ ಹಾಕಿದ್ದ ಯುಎಸ್ ಕಮಾಂಡೋ ಪಡೆ.

ರೆಕಾರ್ಡಿಂಗ್‌ನಲ್ಲಿ ವೆನೆಜುವೆಲಾದ ಮಧ್ಯಂತರ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಅವರು, ಈ ಸಂದರ್ಭಗಳಲ್ಲಿ ಜವಾಬ್ದಾರಿಗಳನ್ನು ವಹಿಸಿಕೊಳ್ಳಬೇಕಾಗಿ ಬಂದಿರುವುದು ನೋವುಂಟುಮಾಡಿದೆ ಎಂದು ಹೇಳಿರುವುದನ್ನು ಸ್ಪಷ್ಟವಾಗಿ ಗುರುತಿಸಬಹುದಾಗಿದೆ. ಆದರೆ ಕೇವಲ 15 ನಿಮಿಷಗಳಲ್ಲಿ ಈ ನಿರ್ಧಾರ ಮಾಡಬೇಕಾಗಿ ಬಂದಿತ್ತು ಎಂಬುದು ರೋಚಕ ಸಂಗತಿಯಾಗಿದೆ.

ವಾಸ್ತವವಾಗಿ, ಯುಎಸ್ ಸಶಸ್ತ್ರ ಪಡೆಗಳು ಮಡುರೊ ಮತ್ತು ಅವರ ಪತ್ನಿ ಸಿಲಿಯಾ ಫ್ಲೋರ್ಸ್ ಅವರನ್ನು ಹತ್ಯೆ ಮಾಡಿರುವುದಾಗಿ ನಮಗೆ ತಿಳಿಸಿದ್ದವು. ಅವರ ಸಹೋದರ ಮತ್ತು ಕ್ಯಾಬೆಲ್ಲೊ ಕೂಡ ಸಾಯಲು ಸಿದ್ಧರಿದ್ದೇವೆ ಎಂದು ತಿಳಿಸಿದ್ದರು. ಆದರೆ ರಾಜಕೀಯ ಸ್ಥಿರತೆಯನ್ನು ಕಾಪಾಡಿಕೊಳ್ಳುವ ಉದ್ದೇಶದಿಂದ ಕೇವಲ 15 ನಿಮಿಷದಲ್ಲಿ ನಿರ್ಧಾರ ತೆಗೆದುಕೊಳ್ಳುವುದು ಕಷ್ಟಕರವಾಗಿತ್ತು ಎಂದು ರೊಡ್ರಿಗಸ್ ಹೇಳಿದ್ದಾರೆ.

ಆದರೆ ಡೆಲ್ಸೊ ರೊಡ್ರಿಗಸ್ ಅವರ ಈ ಹೇಳಿಕೆಗಳನ್ನು ಕೆಲವರು ಅನುಮಾನಾಸ್ಪದವಾಗಿ ನೋಡಿದ್ದು, ಇತಿಹಾಸಕಾರ ಮತ್ತು ರಾಜಕೀಯ ವಿಶ್ಲೇಷಕ ಮಾರ್ಗರಿಟಾ ಲೋಪೆಜ್ ಮಾಯಾ ಅವರು, ಇದು ರೊಡ್ರಿಗಸ್ ಸ್ವತಃ ಹೆಣೆಯುತ್ತಿರುವ ನಿರೂಪಣೆಯಾಗಿರಬಹುದು. ಏಕೆಂದರೆ ಮಡುರೊ ಅವರ ಪದಚ್ಯುತಿಗೆ ಆಂತರಿಕ ಸಹಭಾಗಿತ್ವ ಮಾತ್ರ ಕಾರಣ ಎಂದು ಎಲ್ಲರಿಗೂ ತಿಳಿದಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ತಮ್ಮ ತಂದೆ ನಿಕೋಲಸ್ ಮಡುರೊ ಅವರನ್ನು ನೆನೆದು ಅವರ ಪುತ್ರ ನಿಕೋಲಸ್ ಮಡುರೊ ಗುಯೆರಾ ವೆನೆಜುವೆಲಾ ಸಂಸತ್ತಿನಲ್ಲಿ ಭಾವುಕ ಭಾಷಣ ಮಾಡಿದ್ದನ್ನು ಇಲ್ಲಿ ಸ್ಮರಿಸಬಹುದು.

## ಶಿವಣ್ಣನ ಮನ ಗೆದ್ದ ಲವ್ ಯೂ ಮುದ್ದು

ಸೋಷಿಯಲ್ ಮೀಡಿಯಾಗಳ ಮೂಲಕ ಸದ್ದು ಮಾಡಿದ್ದ ಜೋಡಿಯ ನೈಜ ಪ್ರೇಮಕಥೆಯನ್ನಾಧರಿಸಿದ 'ಲವ್ ಯೂ ಮುದ್ದು' ಸಿನಿಮಾ ಈಗ ಒಟಿಟಿಗೆ ಬಂದಿದೆ. ಕಳೆದ ವರ್ಷ ಚಿತ್ರಮಂದಿರದಲ್ಲಿ ಪ್ರೇಕ್ಷಕರನ್ನು ರಂಜಿಸಿದ್ದ ಈ ಚಿತ್ರವನ್ನ ನೋಡಿ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಕೂಡ ಸಿಕ್ಕಾಪಟ್ಟೆ ಇಷ್ಟಪಟ್ಟಿದ್ದಾರೆ. ಹೌದು. ಕಳೆದ ವರ್ಷ ಸಮ್ಮೋಹಕ ಗೆಲುವುಗಳ ಸಾಲಿನಲ್ಲಿ ಕೆಮಿಸ್ಟ್ರಿ ಆಫ್ ಕರಿಯಪ್ಪ ಖ್ಯಾತಿಯ ಕುಮಾರ್ ನಿರ್ದೇಶನದ 'ಲವ್ ಯೂ ಮುದ್ದು' ಚಿತ್ರವೂ ಸೇರಿಕೊಂಡಿದೆ. ಪ್ರೇಮಿಗಳ ನೈಜ ಕಥೆಯನ್ನಾಧರಿಸಿ ಈ ಸಿನಿಮಾ ರೂಪುಗೊಂಡಿತ್ತು. ಭಾಷೆ, ಗಡಿ ಮೀರಿ ಈ ಕಥನ ಕರುನಾಡ ಸಿನಿ ಪ್ರೇಮಿಗಳ ಮನ ಗೆದ್ದಿತ್ತು. ಇದೀಗ ಅಮೇಜಾನ್ ಪ್ರೈಮ್‌ನಲ್ಲಿಯೂ ಯಶಸ್ವಿ ಪ್ರದರ್ಶನ ಕಾಣುತ್ತಿದೆ. ಪ್ರೈಮ್‌ನಲ್ಲಿ ಈ ಸಿನಿಮಾ ನೋಡಿ ಹ್ಯಾಟ್ರಿಕ್ ಹೀರೋ ಶಿವಣ್ಣ ಮೆಚ್ಚಿಕೊಂಡಿದ್ದಾರೆ.



ಸದಾ ಒಳ್ಳೆಯ ಕನ್ನಡ ಸಿನಿಮಾಗಳನ್ನ ಬೆಂಬಲಿಸುತ್ತಾ, ಸಿನಿಮಾ ತಂಡದ ಬೆನ್ನುತಟ್ಟಿ ಪ್ರೋತ್ಸಾಹಿಸುತ್ತಾ ಬರುತ್ತಿರುವವರು ಶಿವರಾಜ್‌ಕುಮಾರ್ ಅವರು ಲವ್ ಯೂ ಮುದ್ದು ಚಿತ್ರವನ್ನ ನೋಡಿ, ನಾಯಕ ಸಿದ್ದು ಅವರಿಗೆ ಕರೆ ಮಾಡಿ ಮೆಚ್ಚುಗೆ ಸೂಚಿಸಿದ್ದಾರೆ. ಚಿತ್ರತಂಡದ ಸಮೇತ ಭೇಟಿಯಾಗುವಂತೆ ಆಹ್ವಾನಿಸಿದ್ದಾರೆ. ಇದರಿಂದ ಖುಷಿಗೊಂಡ ಸಿದ್ದು ಮೂಲಿಮನಿ, ರೇಷ್ಮಾ, ಕುಮಾರ್, ನಿರ್ಮಾಪಕ ನರಸಿಂಹ ಮೂರ್ತಿ, ವಿತರಕ ಜಗದೀಶ್ ಗೌಡ ಸೇರಿದಂತೆ ತಮ್ಮ ತಂಡದೊಂದಿಗೆ ಕಂಠೀರವ ಸ್ಟುಡಿಯೋದಲ್ಲಿ ಶಿವಣ್ಣನನ್ನ ಭೇಟಿ ಮಾಡಿದ್ದಾರೆ.



## ಮುರಿದು ಬಿತ್ತು ಅನುಷಾ ದಾಂಪತ್ಯ


ನಟಿ ಅನುಷಾ ಹೆಗಡೆ ಸಹ ಅದೇ ಸಾಲಿಗೆ ಸೇರ್ಪಡೆಗೊಂಡಿದ್ದಾರೆ. ಅನುಷಾ ಅವರ ವಿವಾಹ ಭಾರಿ ಸದ್ದು ಮತ್ತು ಸುದ್ದಿ ಆಗಿತ್ತು.

ಆದರೆ ಅವರ ದಾಂಪತ್ಯ ಆರೇ ವರ್ಷಕ್ಕೆ ಮುರಿದು ಬಿದ್ದಿದೆ. ಅನುಷಾ ಹೆಗಡೆ ಅವರು ಈ ಬಗ್ಗೆ ಇನ್‌ಸ್ಟಾಗ್ರಾಂನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ. ಸಿನಿಮಾ ರಂಗದಲ್ಲಿ ದಾಂಪತ್ಯ ವಿಚ್ಛೇದನ ಎಂಬುದು ಸಾಮಾನ್ಯ ಆಗಿಬಿಟ್ಟಿದೆ.

ಇತ್ತೀಚೆಗೆ ಟಿವಿ ಲೋಕದಲ್ಲೂ ಸಹ ಇದು ಸಾಮಾನ್ಯ ಎನಿಸಿಕೊಳ್ಳುತ್ತಿದೆ. ಕಳೆದ ವರ್ಷ ಕೆಲವಾರು ಕಿರುತೆರೆ ನಟ-ನಟಿಯರು ವಿಚ್ಛೇದನ ಪಡೆದಿದ್ದು ಸುದ್ದಿ ಆಗಿತ್ತು. ಇದೀಗ ನಟಿ ಅನುಷಾ ಹೆಗಡೆ ಸಹ ಅದೇ ಸಾಲಿಗೆ ಸೇರ್ಪಡೆಗೊಂಡಿದ್ದಾರೆ. ಅನುಷಾ ಅವರ ವಿವಾಹ ಭಾರಿ ಸದ್ದು ಮತ್ತು ಸುದ್ದಿ ಆಗಿತ್ತು. ಆದರೆ ಅವರ ದಾಂಪತ್ಯ ಆರೇ ವರ್ಷಕ್ಕೆ ಮುರಿದು ಬಿದ್ದಿದೆ. ಅನುಷಾ ಹೆಗಡೆ ಅವರು ಈ ಬಗ್ಗೆ ಇನ್‌ಸ್ಟಾಗ್ರಾಂನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

'ರಾಧಾ ರಮಣ' ಧಾರಾವಾಹಿಯ ದೀಪಿಕಾ ಪಾತ್ರದ ಮೂಲಕ ಪ್ರೇಕ್ಷಕರಿಗೆ ಹತ್ತಿರವಾಗಿದ್ದ ಅನುಷಾ ಹೆಗಡೆ ಆ ಬಳಿಕ ಕೆಲವು ತೆಲುಗು ಧಾರಾವಾಹಿ ಹಾಗೂ ಕೆಲ ಕನ್ನಡ ಧಾರಾವಾಹಿಗಳಲ್ಲಿಯೂ ನಟಿಸಿದ್ದಾರೆ. ತೆಲುಗಿನ 'ನಿನ್ನೆ ಪೆಳ್ಳಾಡತಾ' ಧಾರಾವಾಹಿಯಲ್ಲಿ ನಟಿಸುವಾಗ ಸಹನಟರಾದ ಪ್ರತಾಪ್ ಸಿಂಗ್ ಅವರೊಟ್ಟಿಗೆ ಪ್ರೀತಿಯಲ್ಲಿದ್ದ ಅನುಷಾ ಹೆಗಡೆ, ಬಳಿಕ ಅವರನ್ನೇ ವಿವಾಹವಾದರು. ಅನುಷಾ ಹೆಗಡೆ ಮತ್ತು ಪ್ರತಾಪ್ ಸಿಂಗ್ ವಿವಾಹ ಆಗ ಬಲು ಸುದ್ದಿಯಾಗಿತ್ತು. 2020ರ ಫೆಬ್ರವರಿ ತಿಂಗಳಲ್ಲಿ ಇವರ ವಿವಾಹ ಹೈದರಾಬಾದ್‌ನ ತಾರಮತಿ ಬಾರಾದಾರಿ ಅರಮನೆಯಲ್ಲಿ ಬಲು ಅದ್ಧೂರಿಯಾಗಿ ನೆರವೇರಿತ್ತು. ಟಿವಿ ಹಾಗೂ ಚಿತ್ರರಂಗದ ಹಲವು ಗಣ್ಯರು ಮದುವೆ ಸಮಾರಂಭದಲ್ಲಿ ಭಾಗವಹಿಸಿದ್ದರು.

ಸುಮಾರು 5 ಗಂಟೆಗಳ ಕಾಲ ಇವರ ವಿವಾಹ ಶಾಸ್ತ್ರಗಳು ನಡೆದಿದ್ದು ವಿಶೇಷವಾಗಿತ್ತು. ಐದು ಗಂಟೆಗಳ ಶಾಸ್ತ್ರ ನಡೆದ ಹೊರತಾಗಿಯೂ ಇವರ ವಿವಾಹ ಆರೇ ವರ್ಷಕ್ಕೆ ಮುರಿದು ಬಿದ್ದಿದೆ.



2023ರಲ್ಲೇ ಈ ಇಬ್ಬರ ದಾಂಪತ್ಯದಲ್ಲಿ ಬಿರುಕು ಮೂಡಿರುವ ಸುದ್ದಿಗಳು ಹರಿದಾಡಲು ಆರಂಭಿಸಿದ್ದವು. ಆದರೆ ಅನುಷಾ ಅವರು ಇದನ್ನು ಒಪ್ಪಿಕೊಂಡಿರಲಿಲ್ಲ. ಆದರೆ ಇದೀಗ ಅಧಿಕೃತವಾಗಿ ಅನುಷಾ ಅವರೇ ವಿಚ್ಛೇದನವನ್ನು ಘೋಷಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈ ಬಗ್ಗೆ ಬರೆದುಕೊಂಡಿರುವ ನಟಿ ಅನುಷಾ, '2023ರಿಂದಲೂ ದಾಂಪತ್ಯದಲ್ಲಿ ಏರಿಳಿತ ಅನುಭವಿಸುತ್ತಿರುವುದು ಹಲವರಿಗೆ ಗೊತ್ತಿದೆ.


ಇದೀಗ 2025 ರಲ್ಲಿ ನಾವು ಅಧಿಕೃತವಾಗಿ, ಕಾನೂನಾತ್ಮಕವಾಗಿ ದೂರಾಗಿದ್ದೇವೆ' ಎಂದಿದ್ದಾರೆ. ಅಲ್ಲದೆ ಈ ಬಗ್ಗೆ ಹೆಚ್ಚು ಚರ್ಚಿಸುವುದಕ್ಕೆ ತಮಗೆ ಇಷ್ಟವಿಲ್ಲ ಎಂದು ಸಹ ಹೇಳಿದ್ದಾರೆ.

ಅನುಷಾ ಹೆಗಡೆ ಅವರು 'ಎನ್‌ಎಚ್ 37' ಸಿನಿಮಾನಲ್ಲಿ 2016 ನಟಿಸಿದ್ದರು, ಒಳ್ಳೆಯ ನೃತ್ಯಗಾರ್ತಿ ಆಗಿದ್ದ ಅನುಷಾ, 'ಬಣ್ಣ ಬಣ್ಣದ ಬದುಕು' ಸಿನಿಮಾಕ್ಕೆ ನೃತ್ಯ ನಿರ್ದೇಶನ ಮಾಡಿದ್ದರು.

2017ರಲ್ಲಿ ಪ್ರಸಾರವಾದ 'ರಾಧಾ ರಮಣ' ಧಾರಾವಾಹಿಯಲ್ಲಿ ನಟಿಸಿದ್ದರು.

2018ರಲ್ಲಿ ತೆಲುಗಿನ 'ನಿನ್ನೇ ಪೆಲ್ಲಾಡುತಾ' ಧಾರಾವಾಹಿಯಲ್ಲಿ ನಟಿಸಿದರು. 2019 ರಲ್ಲಿ ತೆಲುಗಿನ 'ಸೂರ್ಯಕಾಂತಂ', 2022 ರಲ್ಲಿ ತಮಿಳಿನ 'ಆನಂದ ರಾಗಂ' ಧಾರಾವಾಹಿಗಳಲ್ಲಿ ನಟಿಸಿದರು.

## ಬಾಲಿವುಡ್ ನಟನ ಕರೆತಂದ ಪ್ರಶಾಂತ್



'ಸಲಾರ್' ಸಿನಿಮಾ ಮೂಲಕ ತೆಲುಗಿನಲ್ಲಿ ಯಶಸ್ಸು ಕಂಡಿರುವ ಸ್ಟಾರ್ ಪ್ಯಾನ್ ಇಂಡಿಯಾ ನಿರ್ದೇಶಕ ಪ್ರಶಾಂತ್ ನೀಲ್ ಇದೀಗ ಜೂ ಎನ್‌ಟಿಆರ್ ನಟನೆಯ 'ಡ್ರ್ಯಾಗನ್' ಸಿನಿಮಾ ನಿರ್ದೇಶನ ಮಾಡುತ್ತಿದ್ದಾರೆ. ಸಿನಿಮಾನಲ್ಲಿ ಕನ್ನಡತಿ ರುಕ್ಮಿಣಿ ವಸಂತ್ ನಾಯಕಿ. ಇದೀಗ ಬಾಲಿವುಡ್‌ನ ಹಿರಿಯ ಸ್ಟಾರ್ ನಟರೊಬ್ಬರನ್ನು ಸಿನಿಮಾಕ್ಕಾಗಿ ಕರೆತಂದಿದ್ದಾರೆ ಪ್ರಶಾಂತ್ ನೀಲ್. 'ಕೆಜಿಎಫ್' ಸಿನಿಮಾ ಸರಣಿಯಿಂದಾಗಿ ಪ್ಯಾನ್ ಇಂಡಿಯಾ ಸ್ಟಾರ್ ನಿರ್ದೇಶಕ ಎನಿಸಿಕೊಂಡಿರುವ ಪ್ರಶಾಂತ್ ನೀಲ್, 'ಸಲಾರ್' ಸಿನಿಮಾ ಮೂಲಕ, 'ಕೆಜಿಎಫ್' ಗೆಲುವು ಅದೃಷ್ಟವಲ್ಲ ಎಂದು ಸಾಬೀತುಪಡಿಸಿದ್ದಾರೆ.

ಇದೀಗ ಪ್ರಶಾಂತ್ ನೀಲ್, ಜೂ ಎನ್‌ಟಿಆರ್ ನಟನೆಯ ಹೊಸ ಸಿನಿಮಾ ನಿರ್ದೇಶನ ಮಾಡುತ್ತಿದ್ದಾರೆ. ಸಿನಿಮಾಕ್ಕೆ 'ಡ್ರ್ಯಾಗನ್' ಎಂದು ಹೆಸರಿಡಲಾಗಿದೆ. ಸಿನಿಮಾನಲ್ಲಿ ರುಕ್ಮಿಣಿ ವಸಂತ್ ನಾಯಕಿಯಾಗಿ ನಟಿಸುತ್ತಿದ್ದು, ಕೆಲವು ಕನ್ನಡದ ನಟರೂ ಸಹ ಸಿನಿಮಾನಲ್ಲಿದ್ದಾರೆ.

ಇದೀಗ ಪ್ರಶಾಂತ್ ನೀಲ್ ಅವರು 'ಡ್ರ್ಯಾಗನ್' ಸಿನಿಮಾಕ್ಕಾಗಿ ಬಾಲಿವುಡ್‌ನ ಸ್ಟಾರ್ ನಟರೊಬ್ಬರನ್ನು ಕರೆ ತಂದದ್ದಾರೆ. ಜೂ ಎನ್‌ಟಿಆರ್ ಸಿನಿಮಾನಲ್ಲಿ ಬಾಲಿವುಡ್‌ನ ಹಿರಿಯ ಸ್ಟಾರ್ ನಟರುಗಳಲ್ಲಿ ಒಬ್ಬರಾಗಿರುವ ಅನಿಲ್ ಕಪೂರ್ ನಟಿಸುತ್ತಿದ್ದಾರೆ. ಸ್ವತಃ ಅನಿಲ್ ಕಪೂರ್ ಈ ಬಗ್ಗೆ ಟ್ವೀಟ್ ಮಾಡಿದ್ದು, 'ಡ್ರ್ಯಾಗನ್' ಸಿನಿಮಾದ ಐಎಂಡಿಬಿ ಪೋಸ್ಟರ್ ಹಂಚಿಕೊಂಡಿದ್ದಾರೆ. ಅನಿಲ್ ಕಪೂರ್ ಅವರು ಈ ಹಿಂದೆ ಸಂದೀಪ್ ರೆಡ್ಡಿ ವಂಗಾ ನಟನೆಯ 'ಅನಿಮಲ್' ಸಿನಿಮಾನಲ್ಲಿ ನಟಿಸಿದ್ದು ಅದು ಭಾರಿ ಯಶಸ್ವಿ ಆಗಿತ್ತು, ಆ ಸಿನಿಮಾವನ್ನು ದಕ್ಷಿಣದ ನಿರ್ದೇಶಕ ಸಂದೀಪ್ ರೆಡ್ಡಿ ವಂಗಾ ನಿರ್ದೇಶನ ಮಾಡಿದ್ದರು. ಈಗ ಮತ್ತೊಮ್ಮೆ ದಕ್ಷಿಣದ ನಿರ್ದೇಶಕನ ಸಿನಿಮಾನಲ್ಲಿ ಅನಿಲ್ ಕಪೂರ್ ನಟಿಸುತ್ತಿದ್ದು, ನೀಲ್ ಅವರು ಅನಿಲ್ ಅವರಿಗಾಗಿ ಪವರ್‌ಫುಲ್ ಪಾತ್ರವನ್ನೇ ರೆಡಿ ಮಾಡಿದ್ದಾರೆ.

## ಮೌನಿರಾಯ್‌ಗೆ ಕೆಟ್ಟ ಅನುಭವ

ಕುಟುಂಬವೊಂದು ಮೌನಿ ರಾಯ್ ಅವರನ್ನು ಅತಿಥಿಯಾಗಿ ಕರೆಸಿಕೊಂಡಿದೆ. ಬಳಿಕ ಕಿರುಕುಳ ನೀಡಲಾಗಿದೆ. ಹಿರಿ ವಯಸ್ಸಿನ ಗಂಡಸರು ತಮ್ಮ ಜೊತೆ ಕೆಟ್ಟದಾಗಿ ನಡೆದುಕೊಂಡರು ಎಂದು ಮೌನಿ ರಾಯ್ ಹೇಳಿದ್ದಾರೆ. ಆ ಕಹಿ ಘಟನೆಯ ವಿವರವನ್ನು ಅವರು ಇನ್‌ಸ್ಟಾಗ್ರಾಮ್ ಸ್ಟೋರಿಯಲ್ಲಿ ಪೋಸ್ಟ್ ಮಾಡಿದ್ದಾರೆ. ಅದು ವೈರಲ್ ಆಗಿದೆ.

ಬಾಲಿವುಡ್ ನಟಿ ಮೌನಿ ರಾಯ್ ಅವರಿಗೆ ಕೆಟ್ಟ ಅನುಭವ ಆಗಿದೆ. ಮನರಂಜನಾ ಕಾರ್ಯಕ್ರಮ ನೀಡಲು ಅತಿಥಿಯಾಗಿ ಹೋಗಿದ್ದಾಗ ಅವರಿಗೆ ಕಿರುಕುಳ ನೀಡಲಾಗಿದೆ. ಬಹಿರಂಗ ವೇದಿಕೆಯಲ್ಲೇ ಈ ರೀತಿ ಆಗಿದೆ. ಹಿರಿ ವಯಸ್ಸಿನ ಅಂಕಲ್‌ಗಳು ಈ ರೀತಿ ಮಾಡಿದ್ದಾರೆ ಎಂದು ಮೌನಿ ರಾಯ್ ಅವರು ಆರೋಪಿಸಿದ್ದಾರೆ. ಹರಿಯಾಣದಲ್ಲಿ ಈ ಘಟನೆ ನಡೆದಿದೆ. ಸೋಶಿಯಲ್ ಮೀಡಿಯಾದಲ್ಲಿ ಮೌನಿ ರಾಯ್ ಅವರು ಈ ಬಗ್ಗೆ ಬರೆದುಕೊಂಡಿದ್ದಾರೆ. ಈ ಘಟನೆಯಿಂದ ತಮಗೆ ಬಹಳ ನೋವಾಗಿದೆ ಎಂದು ಅವರು ಹೇಳಿದ್ದಾರೆ. 'ಕರ್ನಾಲ್‌ನಲ್ಲಿ ಕಾರ್ಯಕ್ರಮಕ್ಕೆ ತೆರಳಿದ್ದಾಗ ತಾತನ ವಯಸ್ಸಿನ ಇಬ್ಬರು ಅಂಕಲ್‌ಗಳ ವರ್ತನೆಯಿಂದ ಅಸಹ್ಯ ಆಗಿದೆ. ನಾನು ವೇದಿಕೆಗೆ ಹೋದಾಗ ಆ ಕುಟುಂಬದ ಸದಸ್ಯರು ನನ್ನ ಜೊತೆ ಫೋಟೋ ತೆಗೆದುಕೊಳ್ಳಲು ಬಂದು ಸೊಂಟಕ್ಕೆ ಕೈ ಹಾಕಿದರು. ನಾನು ವಿರೋಧಿಸಿದ್ದು ಅವರಿಗೆ ಇಷ್ಟ ಆಗಲಿಲ್ಲ. ಇಬ್ಬರು ಅಂಕಲ್‌ಗಳು ನನ್ನ ಎದುರು ನಿಂತು ಕೆಟ್ಟದಾಗಿ ಸನ್ನೆ ಮಾಡುತ್ತಿದ್ದರು' ಎಂದು ಮೌನಿ ರಾಯ್ ಹೇಳಿದ್ದಾರೆ.

'ಅವರು ಮಾಡಿದ್ದು ಸರಿ ಎನಿಸಲಿಲ್ಲ. ಆ ರೀತಿ ಮಾಡಬೇಡಿ ಎಂದು ನಾನು ನಯವಾಗಿಯೇ ಹೇಳಿದೆ. ಆಗ ಅವರು ನನ್ನ ಕಡೆಗೆ ಹೂವು ಎಸೆಯಲು ಶುರು ಮಾಡಿದರು. ಮಧ್ಯದಲ್ಲೇ ನಾನು ಹೊರಟು ಹೋಗಲು ನಿರ್ಧರಿಸಿದೆ. ಆದರೆ ಕಾರ್ಯಕ್ರಮ ಪೂರ್ಣಗೊಳಿಸಬೇಕು ಅಂತ ವಾಪಸ್ ಬಂದೆ. ಆಗಲೂ ಅವರು ನಿಲ್ಲಿಸಲಿಲ್ಲ' ಎಂದಿದ್ದಾರೆ ಮೌನಿ ರಾಯ್.


## ಫಾರ್ಗಾ ಚಿತ್ರದ ಟ್ರೈಲರ್ ರಿಲೀಸ್ ಹಾರರ್, ಸಸ್ಪೆನ್ಸ್

ಅರುಣ್ ರಾಮ್ ಪ್ರಸಾದ್ ನಟನೆಯ 'ಫಾರ್ಗಾ' ಸಿನಿಮಾದ ಟ್ರೈಲರ್ ಬಿಡುಗಡೆಯಾಗಿದೆ. ಹಾರರ್, ಸಸ್ಪೆನ್ಸ್, ಥ್ರಿಲ್ಲರ್‌ನಿಂದ ಕೂಡಿದ ಟ್ರೈಲರ್ ಸಿನಿ ರಸಿಕರನ್ನ ಅಚ್ಚರಿಗೊಳಿಸಿದೆ.

ಹೌದು. 'ಜೋಗಿ', 'ಪ್ರೀತಿ ಏಕೆ ಭೂಮಿ' ಮೇಲಿದೆ ಮೊದಲಾದ ಚಿತ್ರಗಳ ನಿರ್ಮಾಪಕ ಅಶ್ವಿನಿ ರಾಮ್ ಪ್ರಸಾದ್ ನಿರ್ಮಾಣದ ಬಹುನಿರೀಕ್ಷಿತ 'ಫಾರ್ಗಾ' ಚಿತ್ರದ ಟ್ರೈಲರ್ ಬಿಡುಗಡೆ ಸಮಾರಂಭ ಒರಾಯನ್ ಮಾಲ್ ಆವರಣದಲ್ಲಿ ನೆರವೇರಿತು. ಅವರ ಪುತ್ರ ಅರುಣ್ ರಾಮ್‌ಪ್ರಸಾದ್ ಈ ಚಿತ್ರದ ನಾಯಕನಾಗಿ ಸಿನಿ ರಂಗಕ್ಕೆ ಎಂಟ್ರಿ ಕೊಡ್ತಿದ್ದಾರೆ. ಫಾರ್ಗಾ ಒಂದು ಊರಿನ ಹೆಸರಾಗಿದ್ದು, ದಿ ಲ್ಯಾಂಡ್ ಆಫ್ ಶಾಡೋ ಎಂಬ ಅಡಿಬರಹ ಚಿತ್ರಕ್ಕಿದೆ. ಪ್ರಮುಖ ಪಾತ್ರದಲ್ಲಿ ಸಾಯಿಕುಮಾರ್ ಹಾಗೂ ನಾಯಕಿ ಪಾತ್ರದಲ್ಲಿ ರೆಹಾನ ಅಭಿನಯಿಸಿದ್ದಾರೆ.

ಎಂ. ಶಶಿಧರ್ ಈ ಚಿತ್ರದ ಕಥೆ, ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಚಿತ್ರರಂಗದಲ್ಲಿ 50 ವರ್ಷ ಪೂರೈಸಿದ ಡೈಲಾಗ್ ಕಿಂಗ್ ಸಾಯಿಕುಮಾರ್ ಅವರನ್ನ ಈ ಸಂದರ್ಭದಲ್ಲಿ ಗೌರವಿಸಲಾಯಿತು.

ಆ ವೇದಿಕೆಯಲ್ಲಿ ಪೊಲೀಸ್ ಸ್ಟೋರಿ ಚಿತ್ರದ ಡೈಲಾಗ್ ಹೇಳಿದ ಸಾಯಿ ಕುಮಾರ್ ಅವರ ಅಪ್ಪಟ ಅಭಿಮಾನಿಯ ಕೈಲಿ ಚಿತ್ರದ ಟ್ರೈಲರ್ ರಿಲೀಸ್ ಮಾಡಿಸಲಾಯಿತು. ನಂತರ ಮಾತನಾಡಿದ ಸಾಯಿಕುಮಾರ್, ಶಶಿ ನನಗೆ ಈ ಕಥೆ ಹೇಳಿದ ತಕ್ಷಣ ನನಗೆ ಇದರಲ್ಲಿ ಆಯಕ್ಟ್ ಮಾಡಬೇಕು ಅನಿಸಿತು. ನಾನು ಫಸ್ಟ್ ಟೈಮ್ ಇಂಥ ರೋಲ್ ಮಾಡಿರೋದು. ಇನ್ ವೆಸ್ಟಿಗೇಷನ್ ಥರದ ಪಾತ್ರ. ಇಂಥ ಡೈರೆಕ್ಟರ್ ಮುಂದೆ ಬರಬೇಕು. ನಿರ್ಮಾಪಕರು ಅಶ್ವಿನಿ ರಾಮ್ ಪ್ರಸಾದ್ ಅಂದಾಗ ಖುಷಿಯಾಯ್ತು. ಅವರು ಕನ್ನಡಕ್ಕೆ ಒಳ್ಳೊಳ್ಳೆ ಚಿತ್ರಗಳನ್ನ ಕೊಟ್ಟವರು. ಸಿನಿಮಾ ತುಂಬಾ ರಿಚ್ ಆಗಿದೆ ಎಂದು ಶ್ಲಾಘಿಸಿದರು.



## ಅಭಿಷೇಕ್ ಬಿರುಗಾಳಿಗೆ ನಡುಗಿದ ಕಿವೀಸ್

ಅಭಿಷೇಕ್ ಶರ್ಮಾ ಅವರ ಬಿರುಗಾಳಿ ಅರ್ಧಶತಕದ ನೆರವಿನಿಂದ ನ್ಯೂಜಿಲೆಂಡ್ ತಂಡದ ವಿರುದ್ಧ 8 ವಿಕೆಟ್ ಗಳ ಭರ್ಜರಿ ಗೆಲುವು ದಾಖಲಿಸಿದ ಭಾರತ ತಂಡ 5 ಪಂದ್ಯಗಳ ಟಿ20 ಸರಣಿಯನ್ನು ಇನ್ನೂ 2 ಪಂದ್ಯಗಳು ಉಳಿದಿರುವಂತೆ ಗೆದ್ದು ಬೀಗಿದೆ. ಈ ಮೂಲಕ 2024ರಲ್ಲಿ ನ್ಯೂಜಿಲೆಂಡ್ ವಿರುದ್ಧ ತವರಿನಲ್ಲಿ ಟೆಸ್ಟ್ ಸರಣಿ ಮತ್ತು ಈ ವರ್ಷ ಏಕದಿನ ಸರಣಿಯಲ್ಲಿ ಪರಾಭವ ಅನುಭವಿಸಿ ಮುಖಭಂಗಕ್ಕೀಡಾಗಿದ್ದ ಭಾರತ ತಂಡ ಚುಟುಕು ಕ್ರಿಕೆಟ್ ನಲ್ಲಿ ಗೆಲ್ಲುವ ಮೂಲಕ ತಿರುಗೇಟು ನೀಡಿದೆ. ಭಾರತದ ಇದೀಗ ಸತತ 13ನೇ ಬಾರಿಗೆ ಟಿ20 ಸರಣಿ ಗೆದ್ದ ಸಾಧನೆ ಮಾಡಿದೆ.




ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್ ತಂಡ ನಿಗದಿತ 20 ಓವರ್‌ಗಳಲ್ಲಿ 9 ವಿಕೆಟ್ ಗಳನ್ನು ಕಳೆದುಕೊಂಡು 153 ರನ್ ಗಳಿಸಿತ್ತು. ಈ ಮೊತ್ತವನ್ನು ಲೆಕ್ಕಕ್ಕಿಲ್ಲದಂತೆ ಬೆನ್ನಟ್ಟಿದ ಭಾರತ ತಂಡ ಇನ್ನೂ 60 ಎಸೆತಗಳನ್ನು ಬಾಕಿ ಉಳಿದಿರುವಂತೆ 2 ವಿಕೆಟ್ ಕಳೆದುಕೊಂಡು ಗುರಿ ತಲುಪಿತು. ಆರಂಭಿಕ ಸಂಜು ಸ್ಯಾಮ್ಸನ್ ಅವರ ವಿಕೆಟ್ ಅನ್ನು ಬೇಗನೇ ಕಳೆದುಕೊಂಡರೂ ಇಶಾನ್ ಕಿಶನ್ ಮತ್ತು ಸೂರ್ಯಕುಮಾರ್ ಯಾದವ್ ಅವರೊಂದಿಗೆ 2 ಉತ್ತಮ ಜೊತೆಯಾಟ ಆಡಿದ ಅಭಿಷೇಕ್ ಶರ್ಮಾ ಅವರು ತಂಡದ ಗೆಲುವಿಗೆ ಕಾರಣಕರ್ತರಾದರು. ಅರ್ಶದೀಪ್ ಸಿಂಗ್ ಅವರ ಬದಲು ಈ ಪಂದ್ಯದಲ್ಲಿ ಆಡಿ ಉತ್ತಮ ಬೌಲಿಂಗ್ ಪ್ರದರ್ಶನ ನೀಡಿದ ಜಸ್ಪ್ರೀತ್ ಬುಮ್ರಾ ಅವರು ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

**ಅಭಿಷೇಕ್ ಶರ್ಮಾ ಮಿಂಚು:** ಪಂದ್ಯದಲ್ಲಿ ಅಭಿಷೇಕ್ ಶರ್ಮಾ ಅವರು ಭಾರತದ ಪರವಾಗಿ 2ನೇ ಅತಿ ವೇಗದ ಅರ್ಧಶತಕ ಹೊಡೆದದ್ದು ವಿಶೇಷವಾಗಿತ್ತು. ಅವರ ಮೆಂಟರ್ ಆಗಿರುವ ಯುವರಾಜ್ ಸಿಂಗ್ ಅವರು ಕೇವಲ 12 ಎಸೆತಗಳಲ್ಲಿ ಅರ್ಧಶತಕ ಬಾರಿಸಿರುವುದು ಭಾರತದ ಪರವಾಗಿ ದಾಖಲಾಗಿರುವ ಅತ್ಯಂತ ವೇಗದ ಅರ್ಧಶತಕವಾಗಿದೆ. ಈ ದಾಖಲೆಯನ್ನು ತನ್ನ ಹೆಸರಿಗೆ ಬರೆಸಿಕೊಳ್ಳಲು ಅಭಿಷೇಕ್ ಶರ್ಮಾ ಅವರು ಕೇವಲ 2 ಎಸೆತಗಳಲ್ಲಿ ವಂಚಿತರಾದರು. ಅವರು 14 ಎಸೆತಗಳಲ್ಲಿ ಅರ್ಧಶತಕ ಪೂರೈಸಿದರು. ಅದರಲ್ಲಿ 5 ಬೌಂಡರಿ ಮತ್ತು 4 ಸಿಕ್ಸರ್ ಗಳಿದ್ದವು. ಅಂತಿಮವಾಗಿ ಅವರು 20 ಓವರ್ ಗಳಲ್ಲಿ 7 ಬೌಂಡರಿ ಮತ್ತು 5 ಸಿಕ್ಸರ್ ಗಳಿದ್ದ 68 ರನ್ ಗಳಿಸಿ ಅಜೇಯರಾಗಿ ಉಳಿದರು. ಅವರೊಂದಿಗೆ ಮುರಿಯದ 3ನೇ ವಿಕೆಟ್ ಗೆ 102 ರನ್ ಗಳ ಜೊತೆಯಾಟ ಆಡಿದ ನಾಯಕ ಸೂರ್ಯಕುಮಾರ್ ಯಾದವ್ ಅವರು ಸಹ ಕೇವಲ 25 ಎಸೆತದಲ್ಲಿ ಅರ್ಧಶತಕ ಪೂರೈಸಿದರು. ಅಂತಿಮವಾಗಿ ಅವರು 26 ಎಸೆತದಲ್ಲಿ 6 ಬೌಂಡರಿ ಮತ್ತು 3 ಸಿಕ್ಸರ್ ಗಳನ್ನು ಒಳಗೊಂಡ ಅಜೇಯ 57 ರನ್ ಗಳನ್ನು ಗಳಿಸಿ ತಂಡವನ್ನು ದಡ ಸೇರಿಸಿದರು.

ಇದಕ್ಕೂ ಮೊದಲು ಟಾಸ್ ಸೋತ ಬ್ಯಾಟಿಂಗ್ ಗೆ ಇಳಿಸಲ್ಪಟ್ಟ ನ್ಯೂಜಿಲೆಂಡ್ ತಂಡವನ್ನು ಭಾರತದ ಬೌಲಿಂಗ್ ವಿಭಾಗ ವಿಪರೀತ ಕಾಡಿತು. ಹರ್ಷಿತ್ ರಾಣಾ ಅವರು ಆರಂಭಿಕ ಡೈವನ್ ಕಾನ್ವೆ(1) ಅವರನ್ನು ಏಕದಿನ ಸರಣಿಯೂ ಸೇರಿದಂತೆ ಒಟ್ಟಾರೆ ಐದನೇ ಬಾರಿಗೆ ನಿರಂತರವಾಗಿ ಪೆವಿಲಿಯನ್ ಗೆ ಅಟ್ಟಿದರು. ಆ ಬಳಿಕ ರಚಿನ್ ರವೀಂದ್ರ(4) ಅವರನ್ನು ಹಾರ್ದಿಕ್ ಪಾಂಡ್ಯ ಔಟ್ ಮಾಡಿದರು. ಆಗ ತಂಡದ ಮೊತ್ತ ಕೇವಲ 13 ಆಗಿತ್ತಷ್ಟೇ. ಈ ಆಘಾತದಿಂದ ಚೇತರಿಸಿಕೊಳ್ಳದ ಕಿವೀಸ್ ಬಳಕ ದೊಡ್ಡ ಮೊತ್ತ ಗಳಿಸಲು ಸಾಧ್ಯವಾಗಲಿಲ್ಲ. ಗ್ಲೆನ್ ಫಿಲಿಪ್ಸ್(48) ಮತ್ತು ಚಾಪ್ ಮನ್ (32) ಅವರನ್ನು ಹೊರತುಪಡಿಸಿದರೆ ಬೇರಾವ ಬ್ಯಾಟರ್ ಉತ್ತಮ ಬ್ಯಾಟಿಂಗ್ ಮಾಡದ್ದು ದೊಡ್ಡ ಕೊರತೆಯಾಯಿತು. ಭಾರತದ ಪರ ಜಸ್ಪ್ರೀತ್ ಬುಮ್ರಾ 3 ವಿಕೆಟ್, ಹಾರ್ದಿಕ್ ಪಾಂಡ್ಯ ಮತ್ತು ರವಿ ಬಿಷ್ಣೋಯಿ ತಲಾ 2 ವಿಕೆಟ್ ಗಳಿಸಿದರು. ಮುಂದಿನ ಪಂದ್ಯ ವಿಶಾಖಪಟ್ಟಣದಲ್ಲಿ ಜನವರಿ 28ರಂದು ನಡೆಯಲಿದೆ.

## ಭಾರತ v/s ಪಾಕಿಸ್ತಾನ್ ಮುಖಾಮುಖಿಗೆ ಡೇಟ್ ಫಿಕ್ಸ್



ಭಾರತ ಮತ್ತು ಪಾಕಿಸ್ತಾನ್ ನಡುವಿನ ಹೈವೋಲ್ಟೇಜ್ ಪಂದ್ಯಕ್ಕೆ ವೇದಿಕೆ ಸಿದ್ಧವಾಗಿದೆ. ಅದು ಕೂಡ ದೂರದ ಝಿಂಬಾಬ್ವೆಯಲ್ಲಿ. ಅಂದರೆ ಅಂಡರ್-19 ವಿಶ್ವಕಪ್‌ನ ದ್ವಿತೀಯ ಸುತ್ತಿನಲ್ಲಿ ಭಾರತ ಮತ್ತು ಪಾಕಿಸ್ತಾನ್ ತಂಡಗಳು ಮುಖಾಮುಖಿಯಾಗಲಿದೆ. ಈ ಪಂದ್ಯಕ್ಕೆ ಡೇಟ್ ಕೂಡ ಫಿಕ್ಸ್ ಆಗಿದೆ. ಅಂಡರ್-19 ವಿಶ್ವಕಪ್‌ನಲ್ಲಿ ಭಾರತ ಮತ್ತು ಪಾಕಿಸ್ತಾನ್ ನಡುವಣ ಮುಖಾಮುಖಿಗೆ ದಿನಾಂಕ ನಿಗದಿಯಾಗಿದೆ. ಅದರಂತೆ ಫೆಬ್ರವರಿ 1 ರಂದು ನಡೆಯಲಿರುವ ಸೂಪರ್-6 ಹಂತದ 12ನೇ ಪಂದ್ಯದಲ್ಲಿ ಇಂಡೊ-ಪಾಕ್ ಮುಖಾಮುಖಿಯಾಗಲಿದೆ. ಈ ಪಂದ್ಯಕ್ಕೆ ಝಿಂಬಾಬ್ವೆಯ ಕ್ವೀನ್ಸ್ ಸ್ಪೋರ್ಟ್ಸ್ ಕ್ಲಬ್ ಮೈದಾನ ಆತಿಥ್ಯವಹಿಸಲಿದೆ.ಈ ಬಾರಿಯ ಅಂಡರ್-19 ಟೂರ್ನಿಯಲ್ಲಿ ಗ್ರೂಪ್-ಬಿ ನಲ್ಲಿ ಕಣಕ್ಕಿಳಿದಿದ್ದ ಭಾರತ ತಂಡವು ಮೊದಲ ಪಂದ್ಯದಲ್ಲಿ ಯುಎಸ್ಎ ವಿರುದ್ಧ 6 ವಿಕೆಟ್‌ಗಳ ಜಯ ಸಾಧಿಸಿತ್ತು. ಇನ್ನು ದ್ವಿತೀಯ ಪಂದ್ಯದಲ್ಲಿ ಬಾಂಗ್ಲಾದೇಶ್ ತಂಡವನ್ನು 18 ರನ್‌ಗಳಿಂದ ಮಣಿಸಿದ್ದರು. ಹಾಗೆಯೇ ಮೂರನೇ ಪಂದ್ಯದಲ್ಲಿ ನ್ಯೂಝಿಲೆಂಡ್ ತಂಡಕ್ಕೆ 7 ವಿಕೆಟ್‌ಗಳ ಸೋಲುಣಿಸಿದ್ದರು. ಈ ಮೂಲಕ ಗ್ರೂಪ್-ಬಿ ಅಂಕ ಪಟ್ಟಿಯಲ್ಲಿ ಮೊದಲ ಸ್ಥಾನ ಅಲಂಕರಿಸಿ ಟೀಮ್ ಇಂಡಿಯಾ ಸೂಪರ್-6 ಹಂತಕ್ಕೇರಿದ್ದರು.

ಮತ್ತೊಂದೆಡೆ ಗ್ರೂಪ್-ಸಿ ನಲ್ಲಿ ಕಣಕ್ಕಿಳಿದಿದ್ದ ಪಾಕಿಸ್ತಾನ್ ತಂಡವು ಮೊದಲ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ 37 ರನ್‌ಗಳ ಸೋಲನುಭವಿಸಿದ್ದರು. ಈ ಸೋಲಿನ ಹೊರತಾಗಿಯೂ ಪಾಕ್ ಪಡೆ ಸ್ಕಾಟ್ಲೆಂಡ್ ಹಾಗೂ ಝಿಂಬಾಬ್ವೆ ವಿರುದ್ಧ ಜಯಗಳಿಸಿ 4 ಅಂಕಗಳೊಂದಿಗೆ ಸೂಪರ್-6 ಹಂತಕ್ಕೇರುವಲ್ಲಿ ಯಶಸ್ವಿಯಾಗಿದ್ದಾರೆ.

ಇದೀಗ ಸೂಪರ್-6 ಹಂತದಲ್ಲಿ ಭಾರತ ಮತ್ತು ಪಾಕಿಸ್ತಾನ್ ತಂಡಗಳು ಗ್ರೂಪ್-2 ನಲ್ಲಿ ಸ್ಥಾನ ಪಡೆದುಕೊಂಡಿದೆ. ಅದರಂತೆ ಉಭಯ ತಂಡಗಳು ಫೆಬ್ರವರಿ 1 ರಂದು ನಡೆಯಲಿರುವ ಪಂದ್ಯದಲ್ಲಿ ಮುಖಾಮುಖಿಯಾಗಲಿದೆ.

ಈ ಪಂದ್ಯದಲ್ಲಿ ಪಾಕಿಸ್ತಾನ್ ತಂಡಕ್ಕೆ ಸೋಲುಣಿಸಿ ಏಷ್ಯಾಕಪ್ ಸೋಲಿನ ಸೇಡು ತೀರಿಸಿಕೊಳ್ಳುವ ತವಕದಲ್ಲಿದೆ ಟೀಮ್ ಇಂಡಿಯಾ. 2025ರ ಅಂಡರ್-19 ಏಷ್ಯಾಕಪ್ ಟೂರ್ನಿಯ ಫೈನಲ್ ಪಂದ್ಯದಲ್ಲಿ ಭಾರತ ತಂಡಕ್ಕೆ ಸೋಲುಣಿಸುವಲ್ಲಿ ಪಾಕಿಸ್ತಾನ್ ತಂಡ ಯಶಸ್ವಿಯಾಗಿತ್ತು. ದುಬೈನ ಐಸಿಸಿ ಕ್ರಿಕೆಟ್ ಅಕಾಡೆಮಿ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ್ದ ಪಾಕಿಸ್ತಾನ್ ತಂಡವು 50 ಓವರ್‌ಗಳಲ್ಲಿ 347 ರನ್ ಕಲೆಹಾಕಿದ್ದರು. ಈ ಗುರಿಯನ್ನು ಬೆನ್ನತ್ತಿದ್ದ ಟೀಮ್ ಇಂಡಿಯಾ ಗಳಿಸಿದ್ದು ಕೇವಲ 156 ರನ್‌ಗಳು ಮಾತ್ರ. ಈ ಮೂಲಕ 191 ರನ್‌ಗಳ ಅಂತರದಿಂದ ಸೋತು ಭಾರತ ತಂಡವು ಭಾರೀ ಮುಖಭಂಗಕ್ಕೆ ಒಳಗಾಗಿತ್ತು. ಈ ಸೋಲು-ಗೆಲುವಿನ ಬಳಿಕ ಉಭಯ ತಂಡಗಳು ಮತ್ತೆ ಮುಖಾಮುಖಿಯಾಗಲು ಮುಂದಾಗಿದೆ.

## ಪಾಕಿಸ್ತಾನಕ್ಕಿಂತ ಭಾರತ ಬಲಿಷ್ಠ ತಂಡ

ಎಲ್ಲಾ ಊಹಾಪೋಹಗಳ ನಡುವೆ 2026ರ ಟಿ20 ವಿಶ್ವಕಪ್‌ಗೆ ಪಾಕಿಸ್ತಾನ ತಂಡವನ್ನು ಪ್ರಕಟಿಸಲಾಗಿದೆ. ಭಾರತ-ಪಾಕ್ ಪಂದ್ಯ ಫೆಬ್ರವರಿ 15ರಂದು ನಡೆಯಲಿದೆ. ಈ ಸಂದರ್ಭದಲ್ಲಿ, ಮಾಜಿ ಕ್ರಿಕೆಟಿಗ ಕಮ್ರಾನ್ ಅಕ್ಮಲ್, ಭಾರತ ತಂಡ ಪಾಕಿಸ್ತಾನಕ್ಕಿಂತ ಬಲಿಷ್ಠವಾಗಿದೆ ಎಂದು ಹೇಳಿದ್ದಾರೆ. ಭಾರತವನ್ನು ಸೋಲಿಸಲು ಪಾಕಿಸ್ತಾನಕ್ಕೆ ಉತ್ತಮ ಆಟ ಮತ್ತು ಯೋಜನೆಯ ಅಗತ್ಯವಿದೆ ಎಂದು ಅವರು ಪ್ರತಿಪಾದಿಸಿದ್ದಾರೆ, ಜೊತೆಗೆ ಇಶಾನ್ ಕಿಶನ್ ಮತ್ತು ಸೂರ್ಯಕುಮಾರ್ ಯಾದವ್ ಅವರ ಪ್ರದರ್ಶನವನ್ನು ಶ್ಲಾಘಿಸಿದ್ದಾರೆ.ಎಲ್ಲಾ ಊಹಾಪೋಹಗಳ ನಡುವೆ 2026 ರ ಟಿ20 ವಿಶ್ವಕಪ್‌ಗಾಗಿ ಪಾಕಿಸ್ತಾನ ತನ್ನ ತಂಡವನ್ನು ಪ್ರಕಟಿಸಿದೆ. ನಿನ್ನೆಯಷ್ಟೇ ಪಿಸಿಬಿ ಅಧ್ಯಕ್ಷರು ಪಾಕ್ ತಂಡ ಟಿ20 ವಿಶ್ವಕಪ್‌ನಲ್ಲಿ ಭಾಗವಹಿಸುವುದು ಇನ್ನು ಖಚಿತವಾಗಿಲ್ಲ ಎಂದಿದ್ದರು. ಆದರೆ ಈ ಟೂರ್ನಿಗೆ ತಂಡವನ್ನು ಪ್ರಕಟಿಸಿದ್ದಾರೆ. ಫೆಬ್ರವರಿ 9 ರಿಂದ ಆರಂಭವಾಗಲಿರುವ ಈ ಟೂರ್ನಿಯಲ್ಲಿ ಭಾರತ ಹಾಗೂ ಪಾಕಿಸ್ತಾನ ತಂಡಗಳು ಫೆಬ್ರವರಿ 15 ರಂದು ಮುಖಾಮುಖಿಯಾಗಲಿವೆ. ಆದರೆ ಇದಕ್ಕೂ ಮುನ್ನ, ಪಾಕಿಸ್ತಾನದ ಮಾಜಿ ಕ್ರಿಕೆಟಿಗ ಕಮ್ರಾನ್ ಅಕ್ಮಲ್ ಮಹತ್ವದ ಹೇಳಿಕೆ ನೀಡಿದ್ದಾರೆ. ಯೂಟ್ಯೂಬ್ ಚಾನೆಲ್‌ಗೆ ನೀಡಿದ ಸಂದರ್ಶನದಲ್ಲಿ, ಭಾರತ ತಂಡ ಪಾಕಿಸ್ತಾನ ತಂಡಕ್ಕಿಂತ ಉತ್ತಮವಾಗಿದೆ ಎಂದಿದ್ದಾರೆ.

ಸಾಜಿಯಾ ಅಬ್ಬಾಸ್ ಅವರ ಯೂಟ್ಯೂಬ್ ಚಾನೆಲ್‌ಗೆ ನೀಡಿದ ಸಂದರ್ಶನದಲ್ಲಿ ಈ ಬಗ್ಗೆ ಮಾತನಾಡಿರುವ ಕಮ್ರಾನ್ ಅಕ್ಮಲ್, 'ಟೀಂ ಇಂಡಿಯಾವನ್ನು ಪಾಕಿಸ್ತಾನಕ್ಕಿಂತ ಬಲಿಷ್ಠ ಮತ್ತು ಅಪಾಯಕಾರಿಯಾಗಿದೆ. ಹೀಗಾಗಿ ಪಾಕಿಸ್ತಾನ ತಂಡ, ಭಾರತವನ್ನು ಸೋಲಿಸಲು ಉತ್ತಮ ಆಟ ಮಾತ್ರವಲ್ಲದೆ ಉತ್ತಮ ಯೋಜನೆಯನ್ನು ಮಾಡಬೇಕಾಗುತ್ತದೆ.

ಪಾಕಿಸ್ತಾನ ತಂಡವು ಅಭಿಷೇಕ್ ಶರ್ಮಾಗಾಗಿ ಮಾತ್ರವಲ್ಲದೆ ಟೀಂ ಇಂಡಿಯಾದ ಪ್ರತಿಯೊಬ್ಬ ಆಟಗಾರನಿಗಾಗಿಯೂ ಯೋಜನೆ ರೂಪಿಸಬೇಕಾಗುತ್ತದೆ.

ಹೀಗಾದ್ರೆ ಮಾತ್ರ ಭಾರತವನ್ನು ಸೋಲಿಸಲು ಸಾಧ್ಯ ಕಾಗದದ ಮೇಲೆ ಭಾರತ ತಂಡ ಪಾಕಿಸ್ತಾನಕ್ಕಿಂತ ಉತ್ತಮ ಮತ್ತು ಬಲಿಷ್ಠವಾಗಿ ಕಾಣುತ್ತದೆ. ಭಾರತ ಖಂಡಿತವಾಗಿಯೂ ಮೇಲುಗೈ ಸಾಧಿಸಿದೆ, ಆದರೆ ಪಾಕಿಸ್ತಾನವು ತನ್ನ ದಿನದಂದು ಪಂದ್ಯವನ್ನು ಬದಲಾಯಿಸುವ ಸಾಮರ್ಥ್ಯವನ್ನು ಹೊಂದಿದೆ. ಪಾಕಿಸ್ತಾನವು ಉತ್ತಮವಾಗಿ ಯೋಜಿತ ತಂತ್ರದೊಂದಿಗೆ ಮೈದಾನಕ್ಕೆ ಇಳಿದರೆ ಮಾತ್ರ ಭಾರತದ ವಿರುದ್ಧ ಗೆಲ್ಲಲು ಸಾಧ್ಯ ಎಂದು ಕಮ್ರಾನ್ ಅಕ್ಮಲ್ ಹೇಳಿದ್ದಾರೆ.



## ಒಂದೇ ಒಂದು ಪಂದ್ಯ ಗೆಲ್ಲದೆ ಸೂಪರ್ ಸಿಕ್ಸ್‌ಗೇರಿದ ನ್ಯೂಝಿಲೆಂಡ್



ಅಂಡರ್-19 ಏಕದಿನ ವಿಶ್ವಕಪ್‌ನ ಮೊದಲ ಸುತ್ತಿನ ಪಂದ್ಯಗಳು ಮುಕ್ತಾಯದ ಹಂತಕ್ಕೆ ಬಂದು ನಿಂತಿದೆ. ಈಗಾಗಲೇ 12 ತಂಡಗಳು ಸೂಪರ್-6 ಹಂತಕ್ಕೇರಿದೆ. ಅದರಂತೆ ಸೂಪರ್-6 ಸುತ್ತಿನಲ್ಲಿ 12 ತಂಡಗಳು 2 ಗುಂಪುಗಳಾಗಿ ಕಣಕ್ಕಿಳಿಯಲಿವೆ. ಇಲ್ಲಿ ಗ್ರೂಪ್-2 ನಲ್ಲಿ ನ್ಯೂಝಿಲೆಂಡ್ ತಂಡ ಕಾಣಿಸಿಕೊಂಡಿರುವುದು ವಿಶೇಷ. ಅಂಡರ್-19 ವಿಶ್ವಕಪ್‌ನ ಮೊದಲ ಸುತ್ತಿನಲ್ಲಿ ಒಂದೇ ಒಂದು ಪಂದ್ಯ ಗೆಲ್ಲದೇ ನ್ಯೂಝಿಲೆಂಡ್ ತಂಡವು ದ್ವಿತೀಯ ಸುತ್ತಿಗೆ ಪ್ರವೇಶಿಸಿದೆ. ಕೇಳಲು ಅಚ್ಚರಿ ಎನಿಸಿದರೂ ಇಂತಹದೊಂದು ಫಲಿತಾಂಶಕ್ಕೆ ಕಿರಿಯರ ವಿಶ್ವಕಪ್ ಪಾಯಿಂಟ್ಸ್ ಟೇಬಲ್ ಸಾಕ್ಷಿಯಾಗಿದೆ. ಈ ಟೂರ್ನಿಯಲ್ಲಿ ಗ್ರೂಪ್-ಬಿ ನಲ್ಲಿ ಕಣಕ್ಕಿಳಿದಿದ್ದ ನ್ಯೂಝಿಲೆಂಡ್ ತಂಡದ ಮೊದಲೆರಡು ಪಂದ್ಯಗಳು ಮಳೆಯ ಕಾರಣ ರದ್ದಾಗಿದ್ದವು. ಇನ್ನು ಮೂರನೇ ಪಂದ್ಯದಲ್ಲಿ ಭಾರತದ ವಿರುದ್ಧ 7 ವಿಕೆಟ್‌ಗಳಿಂದ ಸೋಲನುಭವಿಸಿದ್ದರು.

ಅಂದರೆ ಮೂರು ಪಂದ್ಯಗಳಿಂದ ನ್ಯೂಝಿಲೆಂಡ್‌ಗೆ ಸಿಕ್ಕಿರುವುದು ಕೇವಲ 2 ಅಂಕಗಳು ಮಾತ್ರ. ಅದು ಕೂಡ ರದ್ದಾದ ಪಂದ್ಯಗಳಿಂದ. ಆದರೆ ಇತ್ತ ಯುಎಸ್ಎ ತಂಡವು ಆಡಿದ ಮೂರು ಪಂದ್ಯಗಳಿಂದ ಕೇವಲ 1 ಅಂಕ ಪಡೆಯಲಷ್ಟೇ ಶಕ್ತರಾಗಿದ್ದಾರೆ. ಪರಿಣಾಮ ನ್ಯೂಝಿಲೆಂಡ್ ತಂಡವು ಅಂಕ ಪಟ್ಟಿಯಲ್ಲಿ ಮೂರನೇ ಸ್ಥಾನ ಅಲಂಕರಿಸಿದೆ. ಈ ಮೂರನೇ ಸ್ಥಾನದೊಂದಿಗೆ ಕಿವೀಸ್ ಪಡೆ ಸೂಪರ್-6 ಹಂತಕ್ಕೆ ಅರ್ಹತೆ ಪಡೆದುಕೊಂಡಿದೆ.ಫಿ ಸೂಪರ್ ಸಿಕ್ಸ್ ಹಂತದಲ್ಲಿ ನ್ಯೂಝಿಲೆಂಡ್ ತಂಡವು ಗ್ರೂಪ್-2 ನಲ್ಲಿ ಸ್ಥಾನ ಪಡೆದುಕೊಂಡಿದೆ. ಅದರಂತೆ ದ್ವಿತೀಯ ಸುತ್ತಿನಲ್ಲಿ ಪಾಕಿಸ್ತಾನ್ ಮತ್ತು ಇಂಗ್ಲೆಂಡ್ ತಂಡಗಳನ್ನು ಎದುರಿಸಲಿದೆ. ಈ ಎರಡು ಪಂದ್ಯಗಳಲ್ಲಿ ನ್ಯೂಝಿಲೆಂಡ್ ತಂಡ ಜಯ ಸಾಧಿಸಿ ಗ್ರೂಪ್-2 ಅಂಕ ಪಟ್ಟಿಯಲ್ಲಿ ಟಾಪ್-2 ನಲ್ಲಿ ಸ್ಥಾನ ಪಡೆದರೆ ಸೆಮಿಫೈನಲ್‌ಗೇರಬಹುದು. ಹೀಗಾಗಿ ಸೂಪರ್-6 ಸುತ್ತಿನ ಎರಡೂ ಪಂದ್ಯಗಳು ನ್ಯೂಝಿಲೆಂಡ್ ತಂಡದ ಪಾಲಿಗೆ ನಿರ್ಣಾಯಕ. ಒಂದು ವೇಳೆ ಕಿವೀಸ್ ಪಡೆ ಸೂಪರ್-6 ನಲ್ಲಿ ಭರ್ಜರಿ ಪ್ರದರ್ಶನ ನೀಡಿ ಸೆಮಿಫೈನಲ್‌ಗೇರಿದರೆ, ಮೊದಲ ಸುತ್ತಿನಲ್ಲಿ ಒಂದೇ ಒಂದು ಪಂದ್ಯ ಗೆಲ್ಲದೆ ನಾಕೌಟ್ ಹಂತಕ್ಕೇರಿದ ತಂಡ ಎನಿಸಿಕೊಳ್ಳಲಿದೆ. ಅಷ್ಟೇ ಅಲ್ಲದೆ ಫೈನಲ್‌ಗೇರಿದೆ ಮೊದಲ ಮೂರು ಪಂದ್ಯಗಳಲ್ಲಿ ಜಯದ ಖಾತೆ ತೆರೆಯದೇ ಅಂತಿಮ ಹಂತಕ್ಕೇರಿದ ತಂಡವೆಂಬ ಹೆಗ್ಗಳಿಕೆಗೂ ಪಾತ್ರವಾಗಲಿದೆ. ಹೀಗಾಗಿ ಇದೀಗ ನ್ಯೂಝಿಲೆಂಡ್ ತಂಡದ ಮುಂದಿನ ಪಂದ್ಯಗಳು ಎಲ್ಲರ ಕುತೂಹಲಕ್ಕೆ ಕಾರಣವಾಗಿದೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**